ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫೮

**ಪಟ್ಟಿ – ೦೩**

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತೊಂದನೆಯ ಅಧಿವೇಶನ**

**ಬುಧವಾರ, ದಿನಾಂಕ : ೨೩ನೇ ಸೆಪ್ಟೆಂಬರ್, ೨೦೨೦**

---

## ಸಮೂಹ – III

೧. ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು.

೨. ಕಂದಾಯ ಸಚಿವರು.

೩. ವಸತಿ ಸಚಿವರು

೪. ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

೫. ಕೃಷಿ ಸಚಿವರು.

---

## ಕಂದಾಯ ಇಲಾಖೆಯಲ್ಲಿರುವ ಹೊರಗುತ್ತಿಗೆ ಸಿಬ್ಬಂದಿ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೯ (೪೪೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂದಾಯ ಇಲಾಖೆಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳು ಎಷ್ಟು ; ಸದರಿ ಸಿಬ್ಬಂದಿಗಳಿಗೆ ವಾರ್ಷಿಕ ಪಾವತಿಸುತ್ತಿರುವ ವೇತನ ಎಷ್ಟು ;

(ಆ) ಎಷ್ಟು ವರ್ಷಗಳಿಂದ ಇವರು ಕಾರ್ಯನಿರ್ವಹಿಸುತ್ತಿದ್ದಾರೆ ; ಈ ಸಿಬ್ಬಂದಿಗಳನ್ನು ಖಾಯಂಗೊಳಿಸುವ ಉದ್ದೇಶ ಸರ್ಕಾರಕ್ಕಿದೆಯೇ ?

## ಬೀದರ್ ಜಿಲ್ಲೆಯಲ್ಲಿ ಜರುಗಿದ SCP/TSP ಕಾಮಗಾರಿಗಳ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೦ (೪೪೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೨೦೧೬ ರಿಂದ ೨೦೧೭–೨೦೧೮ರವರೆಗೆ ಬೀದರ್ ಜಿಲ್ಲೆಯಲ್ಲಿ ಎಷ್ಟು SCP/TSP ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; ಆ ಕಾಮಗಾರಿಗಳು ಯಾವ ಹಂತದಲ್ಲಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಬೀದರ್, ಔರಾದ, ಭಾಲ್ಕಿ ತಾಲ್ಲೂಕುಗಳಲ್ಲಿನ ಪ್ರತಿ ಕಾಮಗಾರಿಯ ವಿವರ ನೀಡುವುದು ?

## ರಾಜ್ಯದಲ್ಲಿ ರೈಲ್ವೆ ಕ್ರಾಸಿಂಗ್‌ಗಳ ಬಳಿ ನಿರ್ಮಿಸಿದ ಸೇತುವೆಗಳು ಮತ್ತು ಒದಗಿಸಿದ ಅನುದಾನ

**ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೧ (೩೨೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈಲ್ವೆ ಕ್ರಾಸಿಂಗ್‌ಗಳ ಬಳಿ ಎಷ್ಟು ಸೇತುವೆಗಳು ನಿರ್ಮಾಣಗೊಂಡಿವೆ ;

(ಆ) ನಿರ್ಮಾಣಗೊಂಡ ಸೇತುವೆಗಳಿಗೆ ಖರ್ಚಾದ ಅನುದಾನ ಎಷ್ಟು ;

(ಇ) ಈ ಸೇತುವೆಗಳ ನಿರ್ಮಾಣಕ್ಕೆ ಕೇಂದ್ರದಿಂದ ಅನುದಾನ ಒದಗಿಸಲಾಗಿತ್ತೇ ;

(ಈ) ಹಾಗಿದ್ದಲ್ಲಿ, ಒದಗಿಸಲಾದ ಅನುದಾನ ಎಷ್ಟು ; ಇದರಲ್ಲಿ ಖರ್ಚಾದ ಮೊತ್ತವೆಷ್ಟು ?

## ನಾಗಮಂಗಲ ಮುಖ್ಯ ರಸ್ತೆಯ ಕಳಪೆ ಕಾಮಗಾರಿಯ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೨ (೪೯೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು ನಾಗಮಂಗಲದಿಂದ ಶ್ರವಣಬೆಳಗೊಳ ಮುಖ್ಯ ರಸ್ತೆಯ ಕಾಮಗಾರಿ ಪ್ರಾರಂಭವಾಗಿ ೧ ವರ್ಷ ಕಳೆದರೂ ಕಾಮಗಾರಿಯು ಅಪೂರ್ಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೨೦೧೭–೨೦೧೮ ರಿಂದ ೨೦೧೯–೨೦೨೦ನೇ ಸಾಲಿನವರೆಗೆ ನಾಗಮಂಗಲ ವಿಧಾನಸಭಾ ಕ್ಷೇತ್ರಕ್ಕೆ ಮಂಜೂರಾಗಿರುವ ಕಾಮಗಾರಿಗಳು ಯಾವುವು ; (ಅಂದಾಜು ಪಟ್ಟಿ ಸಹಿತ ವಿವರ ನೀಡುವುದು)

(ಇ) ಇದರ ಸಂಬಂಧ ಸಾರ್ವಜನಿಕರು ಸಹಾಯಕ ಕಾರ್ಯಪಾಲಕ ಅಭಿತಯಂತರರು, ನಾಗಮಂಗಲ ಉಪವಿಭಾಗ, ನಾಗಮಂಗಲ ಇವರಿಗೆ ಮನವಿ ಸಲ್ಲಿಸಿದರೂ ಈವರೆಗೂ ಕ್ರಮ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಸಂಬಂಧ ಗುತ್ತಿಗೇದಾರರ ಮತ್ತು ಎ.ಇ.ಇ. ರವರು ಕಳಪೆ ಕಾಮಗಾರಿ ಜೊತೆಗೆ ಕಾಮಗಾರಿ ವಿಳಂಬ ಮಾಡಿರುವುದಕ್ಕೆ ಕಾರಣರಾಗಿದ್ದು, ಸರ್ಕಾರ ಇವರ ವಿರುದ್ಧ ತೆಗೆದುಕೊಂಡ ಕ್ರಮಗಳೇನು ? (ವಿವರವಾದ ಮಾಹಿತಿ ನೀಡುವುದು)

## ಮಂಡ್ಯ ಜಿಲ್ಲೆ, ಮಂಡ್ಯ ತಾಲ್ಲೂಕು ಕೀಲಾರ ಗ್ರಾಮದಲ್ಲಿ ಗುಡಿಸಲುಗಳು ಬೆಂಕಿಗಾಹುತಿಯಾದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೩ (೪೯೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲಾ ಹಾಗೂ ತಾಲ್ಲೂಕಿನ ಕೀಲಾರ ಗ್ರಾಮದಲ್ಲಿ ಅರೆಕಲ್ಲು ಪ್ರದೇಶದಲ್ಲಿ ಗುಡಿಸಲುಗಳು ಬೆಂಕಿಗಾಹುತಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಅವಘಡಕ್ಕೆ ಕಾರಣಗಳೇನು ;

(ಆ) ಈ ಅವಘಡದಿಂದ ಸಂತ್ರಸ್ಥಗೊಂಡ ಕುಟುಂಬಗಳು ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ಸಂತ್ರಸ್ಥ ಬುಡಕಟ್ಟು ಕುಟುಂಬಗಳಿಗೆ ಪುನರ್ವಸತಿ ಕಲ್ಪಿಸಿ ಕೊಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಯಾವ ಕಾಲಮಿತಿಯೊಳಗೆ ಇವರಿಗೆ ಪುನರ್ವಸತಿ ಕಲ್ಪಿಸಿಕೊಡಲಾಗುವುದು ?

## ಮಂಡ್ಯ ಜಿಲ್ಲೆಯಲ್ಲಿ ಡಾ॥ ಬಿ.ಆರ್. ಅಂಬೇಡ್ಕರ್ ಭವನಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೪ (೪೧೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಅಡಿಯಲ್ಲಿ ನಿರ್ಮಿಸಿರುವ ಡಾ॥ ಬಿ.ಆರ್. ಅಂಬೇಡ್ಕರ್ ಭವನಗಳೆಷ್ಟು ; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಆ) ಇವುಗಳಲ್ಲಿ ಪೂರ್ಣಗೊಂಡಿರುವ ಭವನಗಳೆಷ್ಟು ಹಾಗೂ ಅಪೂರ್ಣಗೊಂಡಿರುವ ಭವನಗಳ ಸಂಖ್ಯೆ ಎಷ್ಟು ; (ವಿವರವಾದ ತಾಲ್ಲೂಕು, ಗ್ರಾಮ, ಪಂಚಾಯಿತಿ ಹಾಗೂ ಗ್ರಾಮವಾರು ಮಾಹಿತಿ ನೀಡುವುದು)

(ಇ) ಈ ಭವನಗಳು ಯಾವಾಗಿನಿಂದ ಅಪೂರ್ಣಗೊಂಡಿವೆ ಹಾಗೂ ಇವುಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು ; (ವಿವರವಾದ ಮಾಹಿತಿ ನೀಡುವುದು)

(ಈ) ಈ ಭವನಗಳು ಅಪೂರ್ಣಗೊಳ್ಳಲು ಕಾರಣಗಳೇನು ; ಇದರ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಮಂಡ್ಯ ಜಿಲ್ಲೆ ಸಮಾಜ ಕಲ್ಯಾಣ ಇಲಾಖೆಯ ಅಡಿಯಲ್ಲಿ ನಿರ್ಮಿಸಿರುವ ಬಾಬು ಜಗಜೀವನ್‌ರಾಮ್ ಭವನದ ನಿರ್ಮಾಣ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೫ (೪೯೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ಸಮಾಜ ಕಲ್ಯಾಣ ಇಲಾಖೆ ಅಡಿಯಲ್ಲಿ ನಿರ್ಮಿಸಿದ ಬಾಬು ಜಗಜೀವನ್‌ರಾವ್ ಭವನಗಳೆಷ್ಟು ; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಆ) ಇವುಗಳಲ್ಲಿ ಪೂರ್ಣಗೊಂಡಿರುವ ಭವನಗಳು ಎಷ್ಟು ಹಾಗೂ ಅಪೂರ್ಣಗೊಂಡಿರುವ ಭವನಗಳು ಎಷ್ಟು ; (ತಾಲ್ಲೂಕು, ಗ್ರಾಮ ಪಂಚಾಯಿತಿ ಹಾಗೂ ಗ್ರಾಮವಾರು ಮಾಹಿತಿ ನೀಡುವುದು)

(ಇ) ಅಪೂರ್ಣಗೊಂಡಿರುವ ಭವನಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು ; (ವಿವರವಾದ ಮಾಹಿತಿ ನೀಡುವುದು)

(ಈ) ಈ ಭವನಗಳು ಅಪೂರ್ಣಗೊಳ್ಳಲು ಕಾರಣಗಳೇನು ; ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?

## ಭೂ ಸುಧಾರಣೆ ಕಾಯ್ದೆ ತಿದ್ದುಪಡಿ ಮಾಡುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೨೬೬ (೪೦೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ಭೂ ಸುಧಾರಣಾ ಕಾಯ್ದೆಗೆ ತಿದ್ದುಪಡಿ ತರುವ ಮೂಲಕ ಹಲವು ಸೆಕ್ಷನ್‌ಗಳನ್ನು ತೆಗೆದು ಹಾಕಲು ನಿರ್ಧರಿಸಿರುವುದು ನಿಜವೇ ; ಸದರಿ ಸೆಕ್ಷನ್‌ಗಳು ಯಾವುವು ; ಅವುಗಳಲ್ಲಿರುವ ಷರತ್ತುಗಳೇನು ; ಅವುಗಳನ್ನು ತೆಗೆದು ಹಾಕಲು ಇರುವ ಕಾರಣಗಳೇನು ;

(ಆ) ಈ ಸೆಕ್ಷನ್‌ಗಳನ್ನು ತೆಗೆದು ಹಾಕುವುದರಿಂದ ರಾಜ್ಯದ ರೈತರಿಗೆ ಹಾಗೂ ಈ ಕಾಯಿದೆ ಜಾರಿಗೆ ತಂದ ದೇವರಾಜು ಅರಸುರವರಿಗೆ ಸರ್ಕಾರ ಅಪಮಾನ ಮಾಡಿದಂತಾಗುವುದಿಲ್ಲವೇ ; (ವಿವರವಾದ ಮಾಹಿತಿ ನೀಡುವುದು)

(ಇ) ಭೂ ಸುಧಾರಣಾ ಕಾಯ್ದೆಯ ಈ ಸೆಕ್ಷನ್‌ಗಳನ್ನು ಸರ್ಕಾರವು ತೆಗೆದು ಹಾಕುವುದರಿಂದ ಭವಿಷ್ಯದಲ್ಲಿ ರೈತರು ತಮ್ಮ ಭೂಮಿಗಳನ್ನು ಹಣ ಉಳ್ಳವರಿಗೆ ಬಿಕರಿ ಮಾಡಿ ಹಾಳಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಸರ್ಕಾರ ಈ ಸಂಬಂಧ ಯಾವ ಕ್ರಮ ಕೈಗೊಳ್ಳಲಿದೆ ?

## ಬಾಲಕರ ವಿದ್ಯಾರ್ಥಿನಿಲಯಗಳಿಗೆ ಮೂಲ ಸೌಕರ್ಯ ಒದಗಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೨೬೭ (೪೦೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿನ ಪರಿಶಿಷ್ಟ ವರ್ಗದ ಮೆಟ್ರಿಕ್ ನಂತರದ ಕಾಲೇಜಿನ ಬಾಲಕರ ವಿದ್ಯಾರ್ಥಿನಿಲಯಗಳಿಗೆ ಮೂಲ

ಸೌಕರ್ಯಗಳನ್ನು ಒದಗಿಸಲು ಯಾವಾಗ ಕಾರ್ಯಾದೇಶ ನೀಡಲಾಯಿತು ; ಇದಕ್ಕೆ ನೀಡಿದ ಹಣವೆಷ್ಟು ;

(ಆ) ಈ ಸಂಬಂಧ ಕಿಯೋನಿಕ್ಸ್‌ಗೆ ಯಾವ ದಿನಾಂಕದಂದು ಚೆಕ್ ಸಮೇತ ಹಣ ಪಾವತಿ ಮಾಡಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ದಿನಾಂಕ : ೨೩-೦೪-೨೦೨೦ ರಂದು ಕಾರ್ಯಾದೇಶ ನೀಡಿ ದಿನಾಂಕ : ೨೭-೦೪-೨೦೨೦ ರಂದು ಚೆಕ್ ಮೂಲಕ ಹಣ ಪಾವತಿಸಿರುವುದಕ್ಕೆ ಕಾರಣಗಳೇನು ; ಕಾಮಗಾರಿ ನಿರ್ವಹಣೆ ಮಾಡದೆ ಹಣ ಬಿಡುಗಡೆ ಮಾಡಿರುವುದು ಸರಿಯೇ ;

(ಈ) ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ರಸ್ತೆ ಮತ್ತು ಸಿಡಿ ಹಾನಿಯಾಗಿರುವ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೮ (೪೩೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಕಳೆದ ಆಗಸ್ಟ್-೨೦೨೦ ರಿಂದ ಸುರಿದ ಭಾರಿ ಮಳೆಗೆ ಸಾಕಷ್ಟು ರಸ್ತೆ ಮತ್ತು ಸಿಡಿಗಳು ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಎಷ್ಟು ಗ್ರಾಮಗಳು, ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳು ಸಂಪರ್ಕ ಕಳೆದುಕೊಂಡಿರುತ್ತವೆ ? (ತಾಲ್ಲೂಕುವಾರು ವಿವರ ನೀಡುವುದು)

## ವಸತಿ ರಹಿತರಿಗೆ ವಸತಿ ಹಂಚಿಕೆ ಕುರಿತು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೯ (೪೩೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಸತಿ ರಹಿತರಿಗೆ ವಸತಿ ಹಂಚಲು ಸರ್ಕಾರ ಯಾವ ಯಾವ ಯೋಜನೆಗಳನ್ನು ಜಾರಿಗೆ ತಂದಿದೆ ; (ವಿವರವನ್ನು ನೀಡುವುದು)

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎಷ್ಟು ಜನರಿಗೆ ಯಾವ ಯಾವ ಯೋಜನೆಗಳಲ್ಲಿ ಕಳೆದ ಎರಡು ವರ್ಷಗಳಲ್ಲಿ ವಸತಿಗಳನ್ನು ಹಂಚಿಕೆ ಮಾಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಜಿಲ್ಲೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ಎಷ್ಟು ವಸತಿಗಳನ್ನು ನೀಡಲಾಗಿದೆ ? (ಕಳೆದ ಎರಡು ವರ್ಷಗಳ ಮಾಹಿತಿ ನೀಡುವುದು)

## ಕೃಷಿ ಭಾಗ್ಯ ಯೋಜನೆಯ ಕೃಷಿ ಹೊಂಡಗಳ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೦ (೪೩೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೃಷಿ ಭಾಗ್ಯ ಯೋಜನೆಯಡಿ ಕೃಷಿ ಇಲಾಖೆಯಿಂದ ನಿರ್ಮಿಸಿರುವ ಕೃಷಿ ಹೊಂಡಗಳೆಷ್ಟು ;

(ಆ) ಕೃಷಿ ಹೊಂಡಗಳಲ್ಲಿ ಪ್ರಾಣಹಾನಿ ತಪ್ಪಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಇ) ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲು ಸರ್ಕಾರ ನಿಗದಿಪಡಿಸಿರುವ ಸಹಾಯಧನ ಎಷ್ಟು ; ಈ ಸೌಲಭ್ಯವನ್ನು ಎಷ್ಟು ಜನ ರೈತರು ಸದುಪಯೋಗ ಪಡಿಸಿಕೊಂಡಿದ್ದಾರೆ ; (ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಕೃಷಿ ಭಾಗ್ಯ ಯೋಜನೆಯ ಮಾರ್ಗಸೂಚಿಗಳ ಬಗ್ಗೆ ವಿವರಗಳನ್ನು ನೀಡುವುದು ?

## ಅನುದಾನ ಲಭ್ಯತೆ ಮೀರಿ ನಡೆಸಿರುವ ಕಾಮಗಾರಿಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೧ (೪೩೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲೋಕೋಪಯೋಗಿ ಇಲಾಖೆಯಲ್ಲಿ ಅನುದಾನ ಲಭ್ಯತೆ ಮೀರಿ ಕಾಮಗಾರಿಗಳನ್ನು ನಿರ್ವಹಿಸಿರುವ ಎಷ್ಟು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿವೆ ; (ವಲಯವಾರು ಮಾಹಿತಿ ನೀಡುವುದು)

(ಆ) ಈ ರೀತಿ ಅನುದಾನ ಲಭ್ಯತೆ ಮೀರಿ ನಿರ್ವಹಿಸಿರುವ ಎಷ್ಟು ಕಾಮಗಾರಿಗಳು ಪೂರ್ಣಗೊಂಡು ಅಂತಿಮ ಬಿಲ್ ಪಾವತಿಸಲಾಗಿದೆ ; ಎಷ್ಟು ಕಾಮಗಾರಿ ಗುತ್ತಿಗೆ ಹಂತದಲ್ಲಿವೆ ;

(ಇ) ಇದರಿಂದ ರಾಜ್ಯ ಸರ್ಕಾರಕ್ಕೆ ಆಗಲಿರುವ ಹೊರೆ ಎಷ್ಟು ? (ಸಂಪೂರ್ಣ ವಿವರ ನೀಡುವುದು)

## ಕಂದಾಯ ಇಲಾಖೆಯ ದಾಖಲೆಗಳ ಡಿಜಟಲೀಕರಣ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೨ (೪೩೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕಂದಾಯ ಇಲಾಖೆಯ ದಾಖಲೆಗಳನ್ನು ಡಿಜಟಲೀಕರಣ ಮಾಡುವ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಯಿತು ;

(ಆ) ಈ ಯೋಜನೆಯಡಿ ಯಾವ ಯಾವ ದಾಖಲೆಗಳನ್ನು ಡಿಜಟಲೀಕರಣಗೊಳಿಸಿ ಸಾರ್ವಜನಿಕರ ಬಳಕೆಗೆ ಲಭ್ಯವಾಗುವಂತೆ ಮಾಡಲಾಗಿದೆ ;

(ಇ) ಉಳಿದ ದಾಖಲೆಗಳನ್ನು ಯಾವಾಗ ಡಿಜಿಟಲೀಕರಣಗೊಳಿಸಲಾಗುತ್ತದೆ ; ಇದಕ್ಕಾಗಿ ಎಷ್ಟು ಅನುದಾನವನ್ನು ಮೀಸಲಾಗಿಡಲಾಗಿದೆ ?

## ಮಾಗಡಿ ರಾಷ್ಟ್ರೀಯ ಹೆದ್ದಾರಿ ೭೫ ರಲ್ಲಿ ಚತುಷ್ಪಥ ರಸ್ತೆ ಕಾಮಗಾರಿ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :–**

೨೭೩ (೩೪೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು–ಮಾಗಡಿ ರಾಷ್ಟ್ರೀಯ ಹೆದ್ದಾರಿ ೭೫ ರಲ್ಲಿ ಚತುಷ್ಪಥ ರಸ್ತೆ ಕಾಮಗಾರಿ ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಈ ರಸ್ತೆಯಲ್ಲಿ ಹಾದು ಹೋಗುವ ಚೋಳನಾಯಕನಹಳ್ಳಿ ಮತ್ತು ತಾವರೆಕೆರೆ ಗ್ರಾಮದಲ್ಲಿ ದ್ವಿಪತ ರಸ್ತೆ ಇದ್ದು, ಈ ಗ್ರಾಮಗಳಲ್ಲಿನ ಮೇಲ್ಸೇತುವೆ ನಿರ್ಮಾಣದ ಬಗ್ಗೆ ಯಾವ ಕ್ರಮ ತೆಗೆದುಕೊಳ್ಳಲಾಗಿದೆ ;

(ಇ) ಈ ಕಾಮಗಾರಿ ಪೂರ್ಣಗೊಳ್ಳಲು ಎಷ್ಟು ಸಮಯಾವಕಾಶ ಬೇಕಾಗುತ್ತದೆ ?

## ಮಾಗಡಿ ಟೌನ್‌ನಲ್ಲಿ ನಾಡಪ್ರಭು ಕೆಂಪೇಗೌಡರ ಆಳ್ವಿಕೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :-**

೨೭೪ (೩೦೬) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಾಗಡಿ ಟೌನ್‌ನಲ್ಲಿ ಕೆಂಪೇಗೌಡರ ಕಾಲದಲ್ಲಿ ನಿರ್ಮಾಣವಾಗಿರುವ ಕೋಟೆಯ ಒಟ್ಟು ಆಸ್ತಿ (ಜಾಗ) ಎಷ್ಟಿದೆ ;

(ಆ) ನಾಡಪ್ರಭು ಕೆಂಪೇಗೌಡರ ಅವಧಿಯಲ್ಲಿ ಮಾಗಡಿಯಲ್ಲಿ ನಿರ್ಮಿಸಲಾಗಿರುವ ಪಂಚಲಿಂಗೇಶ್ವರ ದೇವಸ್ಥಾನಗಳಾದ ಗೌರಮ್ಮನ ಕೆರೆಯ ಹತ್ತಿರದ ಪ್ರಸನ್ನ ಶ್ರೀರಾಮೇಶ್ವರಸ್ವಾಮಿ ದೇವಸ್ಥಾನ, ಕೋಟೆ ಶ್ರೀ ರಾಮೇಶ್ವರಸ್ವಾಮಿ ದೇವಸ್ಥಾನ, ಶ್ರೀ ಕಾಶಿ ವಿಶ್ವನಾಥಸ್ವಾಮಿ ದೇವಸ್ಥಾನ, ಶ್ರೀ ಗವಿಗಂಗಾಧರೇಶ್ವರಸ್ವಾಮಿ ದೇವಸ್ಥಾನ ಮತ್ತು ಶ್ರೀ ಸೋಮೇಶ್ವರಸ್ವಾಮಿ ದೇವಸ್ಥಾನದ ಒಟ್ಟು ಆಸ್ತಿಗಳ (ಜಾಗ) ಎಷ್ಟಿವೆ ;

(ಇ) ನಾಡಪ್ರಭು ಕೆಂಪೇಗೌಡರ ಕಾಲದಲ್ಲಿ ಮಾಗಡಿ ಟೌನ್ ತಿರುಮಲೆಯಲ್ಲಿ ನಿರ್ಮಿಸಿರುವ ಶ್ರೀ ರಂಗನಾಥಸ್ವಾಮಿ ದೇವಸ್ಥಾನದ

ಒಟ್ಟು ಆಸ್ತಿ (ಜಾಗ) ಎಷ್ಟಿದೆ ; ದೇವಸ್ಥಾನದ ಆಸ್ತಿ ಒತ್ತುವರಿಯಾಗಿದ್ದು ,ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಈ) ನಾಡಪ್ರಭು ಕೆಂಪೇಗೌಡ ಕಾಲದಲ್ಲಿ ಮಾಗಡಿ ಟೌನ್ ತಿರುಮಲೆಯಲ್ಲಿ ನಿರ್ಮಿಸಿರುವ ಶ್ರೀಯೋಗ ನರಸಿಂಹಸ್ವಾಮಿ ದೇವಸ್ಥಾನದ ಒಟ್ಟು ಆಸ್ತಿ ಎಷ್ಟಿದೆ (ಜಾಗ) ; ದೇವಸ್ಥಾನದ ಆಸ್ತಿ ಒತ್ತುವರಿಯಾಗಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?

## ರಾಜ್ಯದಲ್ಲಿ ರೈತರ ಆತ್ಮಹತ್ಯೆ ಪ್ರಕರಣಗಳ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭೫ (೪೫೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ವಿವಿಧ ಕಾರಣಗಳಿಗಾಗಿ ಆತ್ಮಹತ್ಯೆಗೆ ಶರಣಾದ ರೈತ ಬಾಂಧವರ ಸಂಖ್ಯೆಯು ಅಂದಾಜು ಸರ್ಕಾರಕ್ಕಿದೆಯೇ ; ಹಾಗಿದ್ದಲ್ಲಿ, (ವರ್ಷಾವಾರು, ಜಿಲ್ಲಾವಾರು ಕಾರಣ ಸಹಿತವಾಗಿ ಪ್ರತ್ಯೇಕ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ರಾಜ್ಯವು ದೇಶದ ಎಷ್ಟನೇ ಸ್ಥಾನದಲ್ಲಿದೆ ; (ವಿವರ ಒದಗಿಸುವುದು)

(ಇ) ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ಕುಟುಂಬಕ್ಕೆ ಪರಿಹಾರ ಧನ ನೀಡುವ ಜೊತೆಯಲ್ಲಿ ಹಾಗೂ ರೈತರ ಆತ್ಮಸ್ಥೈರ್ಯ ಹೆಚ್ಚಿಸುವ ಕ್ರಮಗಳ ಬಗ್ಗೆ ಸರ್ಕಾರವು ಆಲೋಚಿಸಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಪ್ರಗತಿದಾಯಕ ಕ್ರಮಗಳ ಬಗ್ಗೆ ಸಂಪೂರ್ಣ ಮಾಹಿತಿ ಒದಗಿಸುವುದು ?

## ಮೀನುಗಾರಿಕಾ ಉದ್ಯಮದಲ್ಲಿರುವ ಸಮಸ್ಯೆ ನಿವಾರಣೆ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭೬ (೩೫೩) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಯಾವ ಯಾವ ಭಾಗಗಳಲ್ಲಿ ಮೀನುಗಾರಿಕೆ ನಡೆಯುತ್ತಿದೆ ; (ಪ್ರದೇಶವಾರು, ಲಭ್ಯ ಪ್ರಮಾಣ ಕುರಿತಾಗಿ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಆಳ ಸಮುದ್ರದ ಮೀನುಗಾರಿಕೆಯಲ್ಲಿ ತೊಡಗಿರುವವರು ಅನುಭವಿಸುತ್ತಿರುವ ಅನಾನುಕೂಲತೆ, ಕಾರ್ಮಿಕರ ಅಲಭ್ಯತೆ ಸಮಸ್ಯೆಗಳ ಬಗ್ಗೆ ಸರ್ಕಾರ ಗಮನಹರಿಸಿದೆಯೇ ; ಹಾಗಿದ್ದಲ್ಲಿ, ಈ ಕುರಿತಾಗಿ ಕೈಗೊಂಡ ಪರಿಹಾರಾತ್ಮಕ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಇ) ಅವೈಜ್ಞಾನಿಕ ನೀತಿ, ಕೇವಲ ಸಾಂಪ್ರದಾಯಕವಲ್ಲದ ವ್ಯಾಪರೀಕರಣ ಉದ್ದೇಶದ ಮೀನುಗಾರಿಕೆಯೂ ಈ ಉದ್ಯಮದ ಮೇಲೆ ವ್ಯೆತಿರಿಕ್ತ ಪರಿಣಾಮ ಬೀರುತ್ತಿರುವ ಅಂಶವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರದ ದೀರ್ಘಾವಧಿ ಯೋಜನೆಗಳು ಏನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಅನಧಿಕೃತ ಹೋಮ್‌ಸ್ಟೇ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೭ (೪೫೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಹಳಿಯಾಳ ಹಾಗೂ ಜೋಯಿಡಾ ತಾಲ್ಲೂಕಿನಲ್ಲಿ ಬಹಳಷ್ಟು ಹೋಮ್‌ಸ್ಟೇ ಹಾಗೂ ರೆಸಾರ್ಟ್ಸ್ ಅನಧಿಕೃತವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಸದರಿ ತಾಲ್ಲೂಕಿನಲ್ಲಿ ಎಷ್ಟು ಹೋಮ್‌ಸ್ಟೇ/ರೆಸಾರ್ಟ್‌ಗಳು ಕಾರ್ಯನಿರ್ವಹಿಸುತ್ತಿವೆ ; (ಅಧಿಕೃತ ಹಾಗೂ ಅನಧಿಕೃತ ಮಾಲೀಕರು ಅವರಿಗೆ ಪ್ರಾರಂಭ ಮಾಡಲು ಸಂಬಂಧಿಸಿದ ಇಲಾಖೆ ನೀಡಿರುವ ಎನ್.ಓ.ಸಿ ಪತ್ರ, ಸದರಿ ಹೋಮ್‌ಸ್ಟೇ/ರೆಸಾರ್ಟ್‌ಗಳ ವಿಸ್ತೀರ್ಣ ಅಳತೆ ಅರಣ್ಯ ಇಲಾಖೆ ಹಾಗೂ ಸಿಟಿ ಸರ್ವೆ ವರದಿ, ಪ್ರಕಾರ ಅರಣ್ಯ ಇಲಾಖೆಯ ನಕಾಶೆ ಸಮೇತ ವರದಿ ಪ್ರತಿಯೊಂದು ಹೋಮ್‌ಸ್ಟೇ/ರೆಸಾರ್ಟ್‌ಗಳ ವಿವರ ನೀಡುವುದು ;

(ಇ) ಕಾನೂನು ಬಾಹಿರವಾಗಿ ನಡೆಸುತ್ತಿರುವ ಹೋಮ್‌ಸ್ಟೇ/ರೆಸಾರ್ಟ್‌ಗಳ ಮೇಲೆ ಸರಕಾರ ಯಾವ ಕ್ರಮ ಕೈಗೋಳ್ಳುವುದು ; ಇದಕ್ಕೆ ಸ್ಪಂದಿಸದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೋಳ್ಳುವುದು ? (ಮಾಹಿತಿ ನೀಡುವುದು)

## ಅನುದಾನದ ದುರುಪಯೋಗದ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೮ (೩೪೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾರವಾರ ಜಿಲ್ಲೆಯ ಹಳಿಯಾಳ/ಜೋಯಿಡಾ ತಾಲ್ಲೂಕಿನಲ್ಲಿ ಲೋಕೋಪಯೋಗಿ ಇಲಾಖಾ ವತಿಯಿಂದ ೨೦೧೮-೧೯ ನೇ

ಸಾಲಿನಿಂದ ಇಲ್ಲಿಯವರೆಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ವಿಶೇಷ ಘಟಕ ಯೋಜನೆ (ಎಸ್.ಸಿ.ಪಿ. ಮತ್ತು ಐ.ಎಸ್.ಪಿ) ಅಡಿಯಲ್ಲಿ ಮೀಸಲಿಟ್ಟ ಹಣ ಎಷ್ಟು ; ಈ ಅವಧಿಯಲ್ಲಿ ಖರ್ಚು ಮಾಡಿದ ಹಣ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅಧಿಕಾರಿಗಳು ಯಾವುದಾದರೂ ಕಾಮಗಾರಿ ತೋರಿಸಿ ಅನುದಾನದ ಹಣವನ್ನು ದುರುಪಯೋಗ ಮಾಡಿರುತ್ತಾರೆಂದು ಸಾರ್ವಜನಿಕರಿಂದ ದೂರು ಬಂದಿದೆಯೇ ; ಈ ಬಗ್ಗೆ ಸರ್ಕಾರ ಸೂಕ್ತ ತನಿಖೆ ಮಾಡುವುದೇ ; (ವಿವರ ನೀಡುವುದು)

(ಇ) Maintenance ಗೆ ಬಂದಿರುವ ಅನುದಾನವನ್ನು ಯಾವ ಯಾವ ಸ್ಥಳದಲ್ಲಿ ಯಾವ ಯಾವ ಕಾಮಗಾರಿಗೆ ಉಪಯೋಗಿಸಲಾಗಿದೆಯೆಂಬ ಬಗ್ಗೆ ಗುತ್ತಿಗೆದಾರರ ಹೆಸರಿನೊಂದಿಗೆ ಸುವಿಸ್ತಾರ ವರದಿ ನೀಡುವುದು ? (ಕಾಮಗಾರಿಯ ಅಂದಾಜು ಪ್ರತಿ, ಬಿಲ್ ಪ್ರತಿ, ಎಂ.ಬಿ ಪ್ರತಿ ಹಾಗೂ ಕಾಮಗಾರಿಯ ಫೋಟೋ ಸಮೇತ ತಾಲ್ಲೂಕುವಾರು/ ಜಿಲ್ಲಾವಾರು ಮಾಹಿತಿ ನೀಡುವುದು)

## ರೈತರು ಮತ್ತು ಕೃಷಿ ಕಾರ್ಮಿಕರಿಗೆ ನೀಡುತ್ತಿರುವ ಪರಿಹಾರಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೯ (೪೫೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ರೈತರು ಕೃಷಿ ಕಾರ್ಮಿಕರು ಹೊಲಗಳಲ್ಲಿ ಕಾರ್ಯನಿರ್ವಹಿಸುವ ಸಂದರ್ಭಗಳಲ್ಲಿ ನೈಸರ್ಗಿಕ ವಿಕೋಪಗಳಿಂದ ಅಥವಾ ಮಾನವನ ಹಸ್ತಕ್ಷೇಪವಿಲ್ಲದ ಅಪಘಾತ/ಅನಾಹುತಗಳಿಂದ

ಮರಣಹೊಂದಿದ ಪ್ರಕರಣಗಳೆಷ್ಟು ; (ಜಿಲ್ಲಾವಾರು ಮತ್ತು ಪ್ರಕರಣವಾರು ವಿವರ ನೀಡುವುದು)

(ಆ) ಬೆಳೆ ನಷ್ಟ ಉಂಟಾದಲ್ಲಿ ಬೆಳೆ ಪರಿಹಾರಕ್ಕೆ ವಿಮೆ ಯೋಜನೆ ಇದ್ದು, ಇದೇ ರೀತಿ ರೈತರು ಕೃಷಿ ಕಾರ್ಮಿಕರು ಹೊಲಗಳಲ್ಲಿ ಅಪಘಾತಕ್ಕೀಡಾದಾಗ ಅಥವಾ ಮರಣ ಹೊಂದಿದಾಗ ಸರ್ಕಾರ ಕೈಗೊಳ್ಳುವ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಇಂತಹ ರೈತರು/ಕೃಷಿ ಕಾರ್ಮಿಕರಿಗೆ ಪರಿಹಾರ ನೀಡಲು ಯಾವುದಾದರೂ ಯೋಜನೆಗಳನ್ನು ರೂಪಿಸಲಾಗಿದೆಯೇ ; ಹಾಗಿದ್ದಲ್ಲಿ, ಇಲ್ಲಿಯವರೆಗೆ ಯಾವ ಯೋಜನೆಗಳಡಿ ಎಷ್ಟು ಪ್ರಮಾಣದ ಪರಿಹಾರ ನೀಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಹೇಮಾವತಿ ಜಲಾಶಯ ಮುಳುಗಡೆ ಸಂತ್ರಸ್ಥರ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೮೦ (೩೫೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೇಮಾವತಿ ಜಲಾಶಯ ಮುಳುಗಡೆ ಸಂತ್ರಸ್ಥರಿಗೆ ಹಾಸನ ಜಿಲ್ಲೆಯಲ್ಲಿ ಕಾಯ್ದಿರಿಸಿದ ಭೂಮಿ ಎಷ್ಟು ; ಇದುವರೆಗೂ ಎಷ್ಟು ಸಂತ್ರಸ್ಥರಿಗೆ ಹಕ್ಕುಪತ್ರ ನೀಡಲಾಗಿದೆ ; ಹಕ್ಕುಪತ್ರ ಪಡೆಯಲು ಬಾಕಿ ಇರುವ ಸಂತ್ರಸ್ಥರೆಷ್ಟು ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಹೇಮಾವತಿ ನದಿಯ ಪ್ರವಾಹದಿಂದ ಆಗಿರುವ ಸರ್ಕಾರದ ಮತ್ತು ಸಾರ್ವಜನಿಕರ ಹೊಲ–ಮನೆ ಮತ್ತು

ಬೆಳೆನಾಶದ ಅಂದಾಜು ಮೊತ್ತವೆಷ್ಟು ; ಇದರ ಪರಿಹಾರಕ್ಕಾಗಿ ಸರ್ಕಾರವು ಬಿಡುಗಡೆ ಮಾಡಿದ ಅನುದಾನವೆಷ್ಟು ; (ವರ್ಷವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಇ) ಹೇಮಾವತಿ ನದಿಯ ಪ್ರವಾಹದಿಂದ ಉಂಟಾಗುತ್ತಿರುವ ಅನಾಹುತಗಳನ್ನು ತಡೆಗಟ್ಟಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಭಾರಿ ಮಳೆಯಿಂದ ಹಾಸನ ಜಿಲ್ಲೆಯಲ್ಲಿ ಉಂಟಾಗಿರುವ ನಷ್ಟಗಳ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೮೧ (೩೫೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೯-೨೦೨೦ ಮತ್ತು ೨೦೨೦-೨೦೨೧ನೇ ಸಾಲಿನಲ್ಲಿ ಸುರಿದ ಭಾರಿ ಮಳೆಯಿಂದ ಹಾಸನ ಜಿಲ್ಲೆಯಲ್ಲಿ ಉಂಟಾಗಿರುವ ಭೂ ಕುಸಿತ, ರಸ್ತೆ ಹಾನಿ, ಬೆಳೆ ಹಾನಿ, ಪ್ರಾಣ ಹಾನಿ ಪ್ರಕರಣಗಳೆಷ್ಟು ; ಈ ಪ್ರಕರಣಗಳಿಂದ ಉಂಟಾಗಿರುವ ನಷ್ಟದ ಅಂದಾಜು ಮೊತ್ತವೆಷ್ಟು ; (ಪ್ರಕರಣವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಆ) ಆಸ್ತಿ ಹಾನಿ, ಬೆಳೆ ಹಾನಿ, ಪ್ರಾಣ ಹಾನಿಯಿಂದ ಉಂಟಾಗಿರುವ ನಷ್ಟಗಳನ್ನು ಸಂತ್ರಸ್ಥರಿಗೆ ಭರಿಸಲು ಸರ್ಕಾರವು ನಿಗದಿಪಡಿಸಿರುವ ಪರಿಹಾರದ ಮೊತ್ತವೆಷ್ಟು ; ಈ ಪ್ರಕರಣಗಳಲ್ಲಿ ಹಾಸನ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; ಸಂತ್ರಸ್ಥರಿಗೆ ಇದುವರೆಗೆ

ನೀಡಿದ ಪರಿಹಾರವೆಷ್ಟು ; (ಪ್ರಕರಣವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಪ್ರಕೃತಿ ವಿಕೋಪದಿಂದ ಹಾನಿಯನ್ನು ಪರಿಶೀಲಿಸಲು ನೇಮಕ ಮಾಡಿರುವ ಪರಿಣಿತರು ಯಾರ್‍ಯಾರು ? (ಪರಿಣಿತರ ತಂಡಗಳ ವಿವರ ಹಾಗೂ ಇವರು ನೀಡಿರುವ ವರದಿಯ ವಿವರಗಳನ್ನು ಒದಗಿಸುವುದು)

## ನಿರ್ವಸತಿಕರಿಗೆ ಮನೆ ಹಂಚಿಕೆ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೨ (೩೫೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ವಸತಿ ಇಲಾಖೆಯಿಂದ ವಿವಿಧ ಯೋಜನೆಗಳಡಿ ಹಾಸನ ಜಿಲ್ಲೆಗೆ ಹಂಚಿಕೆಯಾದ ಮನೆಗಳೆಷ್ಟು ; ಈ ಮನೆಗಳನ್ನು ಪಡೆದಿರುವ ಫಲಾನುಭವಿಗಳೆಷ್ಟು ; (ಫಲಾನುಭವಿಗಳ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕು ಮತ್ತು ಜಾತಿವಾರು ವಿವರ ನೀಡುವುದು)

(ಆ) ಹಂಚಿಕೆಯಾಗಿರುವ ಮನೆಗಳಿಗೆ ಇಲ್ಲಿಯವರೆಗೆ ಬಿಡುಗಡೆ ಯಾಗಿರುವ ಅನುದಾನವೆಷ್ಟು ; ಖರ್ಚಾಗಿರುವ ಅನುದಾನವೆಷ್ಟು ; ಮಂಜೂರಾಗದೆ ಬಾಕಿ ಉಳಿದಿರುವ ಅನುದಾನವೆಷ್ಟು ; ಫಲಾನುಭವಿವಾರು ವಿವರ ನೀಡುವುದು ; (ಫಲಾನುಭವಿಗಳ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕು ಮತ್ತು ಜಾತಿವಾರು ವಿವರ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿರುವ ನಿರ್ವಸತಿಕರ ಸಂಖ್ಯೆ ಎಷ್ಟು ; ಈ ನಿರ್ವಸತಿಕರಿಗೆ ಯಾವ ಕಾಲಮಿತಿಯೊಳಗೆ ವಸತಿ ಕಲ್ಪಿಸಲಾಗುವುದು ? (ನಿರ್ವಸತಿಕರ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕು ಮತ್ತು ಜಾತಿ ಮಾಹಿತಿಯೊಂದಿಗೆ ವಿವರ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯಡಿ ಕೈಗೊಂಡಿರುವ ಕಾಮಗಾರಿಗಳ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೩ (೩೫೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ವಿವಿಧ ಯೋಜನೆಗಳಡಿ ಹಾಸನ ಜಿಲ್ಲೆಯಲ್ಲಿ ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಕೈಗೆತ್ತಿಕೊಳ್ಳಲಾಗಿರುವ ಎಸ್.ಸಿ.ಪಿ/ಟಿ.ಎಸ್.ಪಿ. ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಕಾಮಗಾರಿಗಳನ್ನು ಪಡೆದಿರುವ ಗುತ್ತಿಗೆದಾರರು/ಏಜೆನ್ಸಿಗಳ ವಿವರ ನೀಡುವುದು ; ಈ ಕಾಮಗಾರಿಗಳು ಪ್ರಸ್ತುತ ಯಾವ

ಯಾವ ಹಂತಗಳಲ್ಲಿವೆ ? (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

## ರೈತರು ಆತ್ಮಹತ್ಯೆ ಮಾಡಿಕೊಂಡಿರುವ ಬಗ್ಗೆ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೨೮೪ (೪೫೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೨ ವರ್ಷಗಳಿಂದ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈವರೆಗೆ ವಿತರಿಸಿರುವ ಪರಿಹಾರ ಧನವೆಷ್ಟು ; ಹಾಗೂ ಬಾಕಿ ಇರುವ ಪ್ರಕರಣಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರೈತರ ಆತ್ಮಹತ್ಯೆ ವರ್ಷವಾರು ಹೆಚ್ಚಾಗುತ್ತಿರುವುದಕ್ಕೆ ಕಾರಣವೇನು : (ಮಾಹಿತಿ ನೀಡುವುದು)

(ಈ) ರೈತರ ಆತ್ಮಹತ್ಯೆ ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## "ಪ್ರಧಾನ ಮಂತ್ರಿ ಅವಾಜ್ ಯೋಜನೆ" ಯಡಿ ಮಂಜೂರಾದ ಮನೆಗಳ ಮಾಹಿತಿ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೨೮೫ (೪೬೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯-೨೦ ಹಾಗೂ ೨೦೨೦-೨೧ರ ಸಾಲಿನಲ್ಲಿ ಎ.ಎಂ.ಎ.ವೈ ಯೋಜನೆಯಡಿ ಮಂಜೂರು ಮಾಡಲಾದ ಮನೆಗಳ ಸಂಖ್ಯೆ ಎಷ್ಟು ; ಎಷ್ಟು ಮನೆಗಳು ಪೂರ್ಣಗೊಂಡಿವೆ ;

(ಆ) ಬಿಡುಗಡೆ ಮಾಡಲಾದ ಅನುದಾನ ಎಷ್ಟು ; ಹಾಗೂ ಬಿಡುಗಡೆ ಮಾಡಬೇಕಾದ ಅನುದಾನ ಎಷ್ಟು ? (ಜಾತಿವಾರು, ಸಮುದಾಯವಾರು, ಕ್ಷೇತ್ರವಾರು, ವರ್ಷವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಮಂಜೂರಾದ ಕೊಳವೆ ಬಾವಿಗಳ ಮಾಹಿತಿ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-**

೨೮೬ (೩೯೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಮಾಜ ಕಲ್ಯಾಣ ಮತ್ತು ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ೨೦೧೯-೨೦,೨೦೨೦-೨೧ ನೇ ಸಾಲಿನಲ್ಲಿ ಗಂಗಾ ಕಲ್ಯಾಣ ಯೋಜನೆ ಅಡಿಯಲ್ಲಿ ಮಂಜೂರಾದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ಈ ಯೋಜನೆಗಳ ಫಲಾನುಭವಿಗಳ ಸಂಖ್ಯೆ ಎಷ್ಟು ; ಸದರಿ ಕೊಳವೆ ಬಾವಿಗಳಿಗೆ ಖರ್ಚಾಗಿರುವ ಮೊತ್ತ ಎಷ್ಟು ;

(ಆ) ಇನ್ನೂ ವಿದ್ಯುತ್ ಸಂಪರ್ಕವನ್ನು ಕಲ್ಪಿಸದೆ ಇರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ಯಾವಾಗ ಸಂಪರ್ಕ ಕಲ್ಪಿಸಲಾಗುವುದು ?

## ನೆರೆ ಪರಿಹಾರದ ಅನುದಾನದ ಹಂಚಿಕೆ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೨೮೭ (೩೬೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕಿನಲ್ಲಿ ಸಂಪೂರ್ಣವಾಗಿ ಹಾನಿಗೊಳಗಾದ ಎಷ್ಟು ಮನೆಗಳಿಗೆ ೫ ಲಕ್ಷ ರೂ.ನಂತೆ ಪರಿಹಾರ ಮಂಜೂರಾಗಿದೆ ; ಬಿಡುಗಡೆಯಾದ ಅನುದಾನ ಎಷ್ಟು;

(ಆ) ಮನೆ ಹಾನಿಗೊಳಗಾದ ನಿರ್ವಸತಿಕರಿಗೆ ಪಾವತಿಸಬೇಕಾದ ಮನೆ ಬಾಡಿಗೆ ಬಾಬ್ತು ಎಷ್ಟು ; ಹಣ ಪಾವತಿ ಆಗಿದೆಯೇ ; ಪಾವತಿಯಾದ ಅನುದಾನ ಎಷ್ಟು ?

## ಸಂಪರ್ಕ ಸೇತುವೆಗಳ ಅನುದಾನದ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೮೮ (೩೬೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ದಕ್ಷಿಣ ಕನ್ನಡ ಜಿಲ್ಲಾ ಬೆಳ್ತಂಗಡಿ ತಾಲ್ಲೂಕಿನಲ್ಲಿ ನೆರೆಯಿಂದ ಹಾನಿಯಾಗಿ ಸಂಪೂರ್ಣ ಕುಸಿತಗೊಂಡಿರುವ ಸಂಪರ್ಕ ಸೇತುವೆಗಳಿಗೆ ಅನುದಾನ ಮಂಜೂರಾಗಿದೆಯೇ ; ಎಷ್ಟು ಸೇತುವೆಗಳಿಗೆ ಅನುದಾನ ಮಂಜೂರಾಗಿದೆ ; ಕಾಮಗಾರಿ ಯಾವ ಹಂತದಲ್ಲಿವೆ ? (ಅಂಕಿ–ಅಂಶಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದ ಕಂದಾಯ ಭೂಮಿಗಳನ್ನು ರೀ–ಸರ್ವೆ ಮಾಡುವ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೮೯ (೪೨೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಕಂದಾಯ ಭೂಮಿಗಳನ್ನು ರೀ–ಸರ್ವೆ ಮಾಡಿ ಎಷ್ಟು ವರ್ಷಗಳಾಗಿವೆ ;

(ಆ) ಸಾಮಾನ್ಯವಾಗಿ ಎಷ್ಟು ವರ್ಷಗಳಿಗೊಮ್ಮೆ ರೀ–ಸರ್ವೆ ಮಾಡಬೇಕಾಗಿದೆ ; ರೀ–ಸರ್ವೆ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಇ) ಪ್ರಸ್ತುತ ಯಾವುದಾದರೂ ತಾಲ್ಲೂಕುಗಳಲ್ಲಿ ರೀ–ಸರ್ವೆ ಕಾರ್ಯ ಮಾಡಲಾಗುತ್ತಿದೆಯೇ ;

(ಈ) ರೀ–ಸರ್ವೆ ಮಾಡುವ ಉದ್ದೇಶ ಸರ್ಕಾರಕ್ಕಿದ್ದಲ್ಲಿ, ಎಷ್ಟು ವರ್ಷಗಳಲ್ಲಿ ಮಾಡಿಸಲಾಗುವುದು ?

## ರಾಜ್ಯದ ಭೂ ಮಾಪನ ಇಲಾಖೆಯ ಸಿಬ್ಬಂದಿಗಳ ಕುರಿತು

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೯೦ (೪೨೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಭೂ ಮಾಪನ ಇಲಾಖೆಗೆ ಮಂಜೂರಾದ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವೃಂದವಾರು ಮಾಹಿತಿ ನೀಡುವುದು)

(ಆ) ಪ್ರಸ್ತುತ ಎಷ್ಟು ಜನ ಸಿಬ್ಬಂದಿ ಕೆಲಸ ಮಾಡುತ್ತಿದ್ದಾರೆ ;

(ಇ) ಎಷ್ಟು ಜನ ಭೂ ಮಾಪಕರನ್ನು ಇತರೆ ಇಲಾಖೆಗಳಿಗೆ ನಿಯೋಜಿಸಲಾಗಿದೆ ; ಅನ್ಯ ಇಲಾಖೆಗಳಿಗೆ ನಿಯೋಜಿಸುವುದರಿಂದ ಇಲಾಖೆಯ ಕೆಲಸಕಾರ್ಯಗಳಿಗೆ ತೊಂದರೆಯಾಗುವುದಿಲ್ಲವೆ ;

(ಈ) ಭೂ ಮಾಪಕರ ಸಮಸ್ಯೆಯನ್ನು ಹೋಗಲಾಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಜಿಲ್ಲಾಧಿಕಾರಿಗಳ ಮತ್ತು ಉಪ ವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೯೧ (೪೨೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಸ್ತುತ ಜಿಲ್ಲಾಧಿಕಾರಿಗಳ ನ್ಯಾಯಾಲಯ ಮತ್ತು ಉಪವಿಭಾಗಾಧಿಕಾರಿಗಳ ನ್ಯಾಯಾಲಯಗಳಲ್ಲಿರುವ ಅಪೀಲುಗಳ ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ಎಷ್ಟು ವರ್ಷಗಳಿಂದ ಬಾಕಿ ಇವೆ ; (ವರ್ಷವಾರು, ಜಿಲ್ಲಾವಾರು, ಉಪವಿಭಾಗವಾರು ವಿವರಗಳನ್ನು ನೀಡುವುದು)

(ಇ) ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥ ಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿ ಭೂ ಸ್ವಾಧೀನ ಮಾಡಿದ ನಂತರ ಪಹಣಿಗೆ ದಾಖಲು ಮಾಡದಿರುವ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೯೨ (೪೨೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಭೂ ಸ್ವಾಧೀನ ಮಾಡಿದ ಕಂದಾಯ ಭೂಮಿಗಳನ್ನು ಪಹಣಿಗೆ ದಾಖಲು ಮಾಡದ ಕಾರಣದಿಂದಾಗಿ ಪರಭಾರೆಯಾಗಿರುವ ಪ್ರದೇಶ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪರಭಾರೆ ಮಾಡಲು ಕಾರಣರಾದವರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ಒದಗಿಸುವುದು)

## ವೈಯಾಲಿಕಾವಲ್ ಗೃಹ ನಿರ್ಮಾಣ ಸಹಕಾರ ಸಂಘದ ಪರವಾಗಿ ಭೂಸ್ವಾಧೀನವಾಗಿರುವ ಬಗ್ಗೆ

**ಶ್ರೀ ಸಿ.ಎಂ. ಇಬ್ರಾಹಿಂ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೯೩ (೪೬೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಉತ್ತರ ತಾಲ್ಲೂಕು, ಕಸಬಾ ಹೋಬಳಿ, ನಾಗವಾರ ಗ್ರಾಮದ ಹಲವಾರು ಸರ್ವೆ ನಂಬರ್ ಜಮೀನುಗಳು ವೈಯಾಲಿಕಾವಲ್ ಗೃಹ ನಿರ್ಮಾಣ ಸಹಕಾರ ಸಂಘದ ಪರವಾಗಿ ಭೂಸ್ವಾಧೀನವಾಗಿದ್ದು, ಈ ಸಂಬಂಧ ಮಾನ್ಯ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ಭೂಸ್ವಾಧೀನಪಡಿಸಿಕೊಂಡ ಭೂ ಮಾಲೀಕರು/ರೈತರಿಗೆ ಎಷ್ಟು ಜಮೀನನ್ನು ವಿಸ್ತರಣೆ (extent) ಮಾಡಲಾಗಿದೆ ; ಸಂಬಂಧಪಟ್ಟ ಎಲ್ಲಾ ದಾಖಲೆಗಳನ್ನು ಒದಗಿಸುವುದು ;

(ಆ) ವಿಸ್ತರಣೆಯಾಗಿದ್ದಲ್ಲಿ, ಯಾವ ಯಾವ ಸರ್ವೆ ನಂಬರ್‌ಗಳಿಗೆ ವಿಸ್ತರಣೆ ಮಾಡಲಾಗಿದೆ ; (ದಾಖಲೆ ನೀಡುವುದು)

(ಇ) ಸಂಪೂರ್ಣ ವಿಸ್ತರಣೆಯಾಗದೇ ಇದ್ದಲ್ಲಿ ಕಾರಣವೇನು ; (ವಿವರ ನೀಡುವುದು)

(ಈ) ಯಾವ ಯಾವ ಜಮೀನಿನ ಭೂ ಮಾಲೀಕರು/ರೈತರಿಗೆ ಸುಪರ್ದಿ ನೀಡಲಾಗಿದೆ ; (ದಾಖಲೆಗಳನ್ನು ನೀಡುವುದು)

(ಉ) ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಭೂ ಸ್ವಾಧೀನ ರದ್ದುಪಡಿಸಿರುವ ವಿಷಯದ ಬಗ್ಗೆ ಸಂಬಂಧಪಟ್ಟ ಇಲಾಖೆಗಳು ಅಂದರೆ ಬಿಡಿಎ, ಬಿಬಿಎಂಪಿ ಮತ್ತು ಇತರರಿಗೆ ಮಾಹಿತಿ/ ನಿರ್ದೇಶನ/ಸೂಚನೆಯನ್ನು ನೀಡಲಾಗಿದೆಯೇ ; ನೀಡಿದ್ದಲ್ಲಿ, ದಾಖಲೆಗಳನ್ನು ಒದಗಿಸುವುದು ; ನೀಡದಿದ್ದಲ್ಲಿ, ಕಾರಣವೇನು;

(ಊ) ವೈಯಾಲಿಕಾವಲ್ ಗೃಹ ನಿರ್ಮಾಣ ಸಹಕಾರ ಸಂಘದ ಪರವಾಗಿ ಭೂಸ್ವಾಧೀನಕ್ಕೆ ಸಂಬಂಧಪಟ್ಟ ಕಡತಗಳ ಸಂಪೂರ್ಣ ವಿವರಗಳನ್ನು ನೀಡುವುದು ?

## ಮುಜರಾಯಿ ಇಲಾಖೆಗಳ ಆಸ್ತಿಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೪ (೪೨೨) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮುಜರಾಯಿ ಇಲಾಖೆ ವ್ಯಾಪ್ತಿಗೆ ಒಳಪಡುವ (ದೇವಸ್ಥಾನಗಳನ್ನು ಹೊರತುಪಡಿಸಿ) ಆಸ್ತಿಗಳು ಯಾವುವು ; (ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಆಸ್ತಿಗಳನ್ನು ಯಾವ ಯಾವ ಸಂಘ ಸಂಸ್ಥೆ, ವ್ಯಕ್ತಿ ಹಾಗೂ ಇತರೆ ಏಜನ್ಸಿಗಳಿಗೆ ಭೋಗ್ಯಕ್ಕೆ ಹಾಗೂ ಇತರೆಗಳಿಗೆ ನೀಡಲಾಗಿದೆ; (ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

(ಇ) ಇವುಗಳಿಂದ ಸರ್ಕಾರಕ್ಕೆ ಬರುವ ಆದಾಯವೆಷ್ಟು ; ಈ ಆದಾಯವನ್ನು ಹೆಚ್ಚಿಸಲು ಸರ್ಕಾರ ಯಾವ ಕ್ರಮಕೈಗೊಂಡಿದೆ?

## ಗ್ರಾಮ ಲೆಕ್ಕಿಗರನ್ನು ಖಾಯಂ ಮಾಡುವ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೫ (೪೨೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಂದಾಯ ಇಲಾಖೆಯಡಿಯಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಸಹಾಯಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ನೌಕರರಿಗೆ ನೀಡುತ್ತಿರುವ ಮಾಸಿಕ ವೇತನ ಎಷ್ಟು ; ಸದರಿ ನೌಕರರು ೩೮ ವರ್ಷಗಳಿಂದ ಕಡಿಮೆ ವೇತನಕ್ಕೆ ಕೆಲಸ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಇವರನ್ನು ಸರ್ಕಾರವು ಗ್ರೂಪ್ 'ಡಿ' ದರ್ಜೆ ನೌಕರರೆಂದು ಪರಿಗಣಿಸಿ ಆದೇಶ ಹೊರಡಿಸುವುದು ಯಾವಾಗ;

(ಈ) ಲೋಕೋಪಯೋಗಿ, ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಇತರೆ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ದಿನಗೂಲಿ ನೌಕರರನ್ನು ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ನಿಯಮಗಳನ್ನು ರೂಪಿಸಿ ವಿಲೀನಗೊಳಿಸಿದಂತೆ ಸದರಿ ಸಿಬ್ಬಂದಿಗಳನ್ನು ವಿಲೀನಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿನ ಸಫಾಯಿ ಕರ್ಮಚಾರಿಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೬ (೪೬೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಮಾಜ ಕಲ್ಯಾಣ ಮತ್ತು ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಸೋಕ್‌ಪಿಟ್‌ಗಳು (ಕಕ್ಕಸು ಗುಂಡಿ ಅಥವಾ ಅಂತಹ ಇತರ) ಗುಂಡಿಗಳನ್ನು ಶುದ್ಧಗೊಳಿಸಲು ಅಥವಾ ಇತರ ಕೆಲಸಗಳಿಗಾಗಿ ಇಳಿದು ಮರಣ ಹೊಂದಿದ ಕಾರ್ಮಿಕರ ಸಂಖ್ಯೆ ಎಷ್ಟು ;

(ಆ) ಎಷ್ಟು ಪ್ರಕರಣಗಳಲ್ಲಿ ಅಂತಹವರ ಮಕ್ಕಳು ಅನಾಥರಾಗಿದ್ದಾರೆ;

(ಇ) ಹಾಗೆ ನಿಧನರಾದ ಎಷ್ಟು ಕುಟುಂಬಗಳಿಗೆ ಸರ್ಕಾರ ನ್ಯಾಯಸಮ್ಮತವಾದ ಪರಿಹಾರ ಒದಗಿಸಿದೆ ;

(ಈ) ಅಂತಹವರ ಎಷ್ಟು ಮಕ್ಕಳು ಶಿಕ್ಷಣ ಮುಂದುವರಿಸಿದ್ದಾರೆ ?

## ಉತ್ತರ ಕರ್ನಾಟಕದಲ್ಲಿ ಮೀನುಗಾರಿಕೆಗೆ ಹಾಗೂ ಮೀನು ಉತ್ಪನ್ನಗಳಿಗೆ ಉತ್ತೇಜನ ನೀಡುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೭ (೩೬೮) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕರ್ನಾಟಕ ಭಾಗದಲ್ಲಿ ಮೀನುಗಾರಿಕೆ ಅಭಿವೃದ್ಧಿಗೆ ಅನುಕೂಲಕರ ವಾತಾವರಣ ಹಾಗೂ ಅವಕಾಶವಿದ್ದರೂ ಆ ಭಾಗದಲ್ಲಿ ಮೀನುಗಾರಿಕೆಗೆ ಸರ್ಕಾರ ಉತ್ತೇಜನ ನೀಡದಿರಲು ಕಾರಣಗಳೇನು ;

(ಆ) ರಾಜ್ಯದಲ್ಲಿ ಮೀನುಗಾರಿಕಾ ಇಲಾಖೆಯಿಂದ ನಡೆಸಲಾಗುತ್ತಿರುವ (KFDC) ಕ್ಯಾಂಟೀನುಗಳ ಸಂಖ್ಯೆ ಎಷ್ಟು ;

(ಇ) ಉತ್ತರ ಕರ್ನಾಟಕ ಭಾಗದಲ್ಲಿ ಮೀನು ಉಪಯೋಗಿಸುವ ಗ್ರಾಹಕರ ಪ್ರಮಾಣ ಸಾಕಷ್ಟಿದ್ದರೂ ಇಲಾಖೆಯ ವತಿಯಿಂದ ನಡೆಸಲ್ಪಡುವ ಕ್ಯಾಂಟೀನುಗಳನ್ನು ಈ ಭಾಗದಲ್ಲಿ ಆರಂಭಿಸದಿರಲು ಕಾರಣವೇನು;

(ಈ) ಮುಂಬರುವ ದಿನಗಳಲ್ಲಿ ಈ ಕೊರತೆ ನೀಗಿಸಲು ಹಾಗೂ ಅಭಿವೃದ್ಧಿ ಪಡಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ?

## ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸಲ್ಪಡುವ ವಿವಿಧ ವಸತಿ ಶಾಲೆಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೮ (೩೬೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸಲ್ಪಡುತ್ತಿರುವ ವಿವಿಧ ವಸತಿ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಇ) ಕಾರ್ಯನಿರ್ವಹಿಸುತ್ತಿರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಪೈಕಿ ಖಾಯಂ ನೌಕರರ ಸಂಖ್ಯೆ ಹಾಗೂ ಗುತ್ತಿಗೆ ಆಧಾರಿತ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಈ) ವಿವಿಧ ವಸತಿ ಶಾಲೆಗಳ ಪೈಕಿ ಎಷ್ಟು ಶಾಲೆಗಳು ಸ್ವಂತ ಕಟ್ಟಡದಲ್ಲಿ ಹಾಗೂ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ ;

(ಉ) ಗುಣಮಟ್ಟದ ಶಿಕ್ಷಣವನ್ನು ಒದಗಿಸಲು ಪೂರ್ಣ ಪ್ರಮಾಣದ ಸಿಬ್ಬಂದಿಯನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಆಗಸ್ಟ್ – ೧೯ರ ಪ್ರವಾಹದಿಂದಾಗಿ ಸೂರು ಕಳೆದುಕೊಂಡ ಸಂತ್ರಸ್ಥರ ಸಮಸ್ಯೆ ಮತ್ತು ಪರಿಹಾರದ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯ (೩೭೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ವಿವಿಧ ತಾಲ್ಲೂಕುಗಳು ಆಗಸ್ಟ್ – ೧೯ರ ಭೀಕರ ಪ್ರವಾಹದಿಂದ ತತ್ತರಿಸಿದ್ದು, ಅದರಿಂದ ಮನೆಗಳನ್ನು ಕಳೆದುಕೊಂಡು ಬೀದಿಗೆ ಬಿದ್ದ ಸಾವಿರಾರು ನಿರಾಶ್ರಿತರಿಗೆ ಈವರೆಗೂ ಪರಿಹಾರ ಸಿಗದೆ ಸರ್ಕಾರಿ ಕಛೇರಿಗಳಿಗೆ ಅಲೆದಾಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಪ್ರವಾಹದಲ್ಲಿ ಮನೆಗಳನ್ನು ಕಳೆದುಕೊಂಡಿರುವ, ಸೂರಿಲ್ಲದ ನಿರಾಶ್ರಿತರಿಗೆ ಮನೆಗಳನ್ನು ನಿರ್ಮಿಸಿಕೊಳ್ಳಲು ಸರ್ಕಾರ ಯಾವಾಗ ಪರಿಹಾರ ಒದಗಿಸಿ, ಅಗತ್ಯ ಕ್ರಮ ಕೈಗೊಳ್ಳುವುದು ;

(ಇ) ಸೂರುಗಳನ್ನು ಕಳೆದುಕೊಂಡ ನಿರಾಶ್ರಿತರು ಜಿಲ್ಲಾಧಿಕಾರಿಗಳ ಕಛೇರಿ ಮುಂದೆ ಧರಣಿ ಕುಳಿತಾಗ ಜಿಲ್ಲಾಧಿಕಾರಿಗಳು ಸಂಬಂಧಿಸಿದ ವಿಭಾಗಾಧಿಕಾರಿಗಳಿಂದ ವರದಿ ತರಿಸಿ, ಪರಿಶೀಲಿಸಿ ಸರ್ಕಾರಕ್ಕೆ ಸಲ್ಲಿಸಿದ ಮನವಿ ಏನಾಯಿತು ;

(ಈ) ಜಿಲ್ಲಾಧಿಕಾರಿಗಳ ವರದಿಯ ಅನುಷ್ಠಾನ ಯಾವ ಹಂತದಲ್ಲಿದೆ ; ಯಾವ ಕಾಲಮಿತಿಯಲ್ಲಿ ನೊಂದ ನಿರಾಶ್ರಿತರಿಗೆ ಸೂರು ಕಟ್ಟಿಕೊಳ್ಳಲು ಪರಿಹಾರ ಒದಗಿಸಲು ಕ್ರಮ ಕೈಗೊಳ್ಳಲಾಗುವುದು? (ವಿವರ ಒದಗಿಸುವುದು)

# ರಾಜ್ಯದಲ್ಲಿ ಅತಿವೃಷ್ಟಿಯಿಂದ ಉಂಟಾದ ಸಮಸ್ಯೆ ಹಾಗೂ ಪರಿಹಾರದ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೦ (೩೭೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅತಿವೃಷ್ಟಿಯಿಂದಾಗಿ ನದಿಗಳು ಉಕ್ಕಿ ಹರಿದು, ರಸ್ತೆಗಳು, ಸೇತುವೆಗಳು, ಸಂಪರ್ಕ ರಸ್ತೆಗಳು ಹಾಳಾಗಿದ್ದು, ಇದರಿಂದ ಸಾರ್ವಜನಿಕರು ತಮ್ಮ ಸಂಪರ್ಕ ಮತ್ತು ಸಾಗಾಣಿಕೆಗಳಿಗಾಗಿ ಪರದಾಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಹಾಳಾಗಿರುವ ರಸ್ತೆಗಳು, ಸೇತುವೆಗಳು. ಸಂಪರ್ಕ ರಸ್ತೆಗಳನ್ನು ಮರು ನಿರ್ಮಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಇ) ಸನ್ ೨೦೧೯ರ ಆಗಸ್ಟ್‌ನ ಪ್ರವಾಹ ಪೀಡಿತ ಪ್ರದೇಶಗಳ ಎಷ್ಟು ಉದ್ದದ ವಿವಿಧ ರಸ್ತೆಗಳು ಹಾಗೂ ಸೇತುವೆಗಳು ಹಾಳಾಗಿವೆ; (ವಿವರ ಒದಗಿಸುವುದು)

(ಈ) ಹಾಳಾಗಿದ್ದ ಎಷ್ಟು ಉದ್ದದ ರಸ್ತೆಗಳು, ಸಂಪರ್ಕ ರಸ್ತೆಗಳನ್ನು, ಸೇತುವೆಗಳನ್ನು ಮರು ನಿರ್ಮಾಣ ಮಾಡಲಾಗಿದೆ ; ಅವುಗಳು ಯಾವುವು ; (ವಿವರ ಒದಗಿಸುವುದು)

(ಉ) ಉಳಿದ ಹಾಳಾಗಿರುವ ರಸ್ತೆಗಳು, ಸಂಪರ್ಕ ರಸ್ತೆಗಳನ್ನು, ಸೇತುವೆಗಳ ಮರು ನಿರ್ಮಾಣವನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ? (ವಿವರ ಒದಗಿಸುವುದು)

## ನಕಲಿ ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕಗಳ ಮಾರಾಟದ ಬಗ್ಗೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೧ (೩೪೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನಕಲಿ ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಕೀಟನಾಶಕಗಳು ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ರೈತರ ಹಿತಕ್ಕಾಗಿ ಕೈಗೊಂಡಿರುವ ಕ್ರಮಗಳೇನು ?

## ರಸ್ತೆ ನಿರ್ಮಾಣ ಕಾಮಗಾರಿಗೆ ವಶಪಡಿಸಿಕೊಂಡ ಭೂಮಿಗೆ ಪರಿಹಾರ ಕುರಿತು

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೨ (೩೦೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯ, ನಾಗಮಂಗಲ ತಾಲ್ಲೂಕು, ದೇವಲಾಪುರ ಹೋಬಳಿ, ಕುಡುಗುಬಾಳು ಗ್ರಾಮದ ಸ.ನಂ. ೨೪/ಸಿರಲ್ಲಿ ಸರ್ಕಾರ ರಸ್ತೆ ನಿರ್ಮಾಣ ಕಾಮಗಾರಿ ಕೈಗೊಂಡಿದೆಯೇ ;

(ಆ) ಕೈಗೊಂಡಿದ್ದಲ್ಲಿ, ಸದರಿ ಸರ್ವೆ ನಂ. ೨೪/ಸಿಗೆ ನಿಯಮಾನುಸಾರ ಪರಿಹಾರದ ಮೊತ್ತವನ್ನು ಪಾವತಿಸಲಾಗಿದೆಯೇ ; ಅಥವಾ ಇಲ್ಲವೇ;

(ಇ) ಈ ಸರ್ವೆ ನಂ. ೨೪/ಸಿರ ಮಾಲೀಕರು ಯಾರು ; ಇವರು ಎಷ್ಟು ವರ್ಷಗಳಿಂದ ಸದರಿ ಭೂಮಿಯ ಮಾಲೀಕತ್ವವನ್ನು ಹೊಂದಿದ್ದಾರೆ ; (ಸಂಬಂಧಪಟ್ಟ ದಾಖಲೆಗಳನ್ನು ಒದಗಿಸುವುದು)

(ಈ) ಸದರಿ ಕುಡುಗುಬಾಳು ಗ್ರಾಮದಲ್ಲಿ ರಸ್ತೆ ಕಾಮಗಾರಿಗಾಗಿ ಯಾರ್‍ಯಾರ ಜಮೀನುಗಳನ್ನು ವಶಪಡಿಸಿಕೊಂಡು ಪರಿಹಾರ ನೀಡಲಾಗಿದೆ?

## ಲೋಕೋಪಯೋಗಿ ಇಲಾಖೆಯ ಕಾರ್ಯವೈಖರಿಯ ಬಗ್ಗೆ

**ಶ್ರೀ ಸಿ.ಎಂ. ಲಿಂಗಪ್ಪ (ನಾಮನಿರ್ದೇಶನ ಹೊಂದಿದವರು) :–**

೩೦೩ (೩೩೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಮಾಜ ಕಲ್ಯಾಣ ಮತ್ತು ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆಗೆ ಒದಗಿಸಿದ ಮೊತ್ತವೆಷ್ಟು ;

(ಆ) ಯಾವ ಯಾವ ಯೋಜನೆಗೆ ಎಷ್ಟು ವೆಚ್ಚವನ್ನು ಮಾಡಲಾಗಿದೆ; (ವಿವರ ನೀಡುವುದು)

(ಇ) ಒದಗಿಸಿದ ಅನುದಾನದಲ್ಲಿ ಎಷ್ಟು ಯೋಜನೆಗಳು ಪೂರ್ಣಗೊಂಡಿವೆ;

(ಈ) ಪೂರ್ಣವಾಗದೆ ಇರಲು ಕಾರಣವೇನು ? (ವಿವರ ನೀಡುವುದು)

## ಕಂದಾಯ ಇಲಾಖೆಗೆ ಮಂಜೂರಾದ ಹುದ್ದೆಗಳ ಬಗ್ಗೆ

**ಶ್ರೀ ಸಿ.ಎಂ. ಲಿಂಗಪ್ಪ (ನಾಮನಿರ್ದೇಶನ ಹೊಂದಿದವರು) :–**

೩೦೪ (೩೩೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಂದಾಯ ಇಲಾಖೆ ಪಾರಂಭವಾದ ವರ್ಷ ಯಾವುದು;

(ಆ) ಪ್ರಸ್ತುತ ಇಲಾಖೆಗೆ ಮಂಜೂರಾದ ಹುದ್ದೆಗಳೆಷ್ಟು ;

(ಇ) ಕಂದಾಯ ಇಲಾಖೆಯಲ್ಲಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಕಳೆದ ೩ ವರ್ಷಗಳಲ್ಲಿ ಬಸವ ವಸತಿ ಯೋಜನೆಯ ಅಡಿಯಲ್ಲಿ ಮಂಜೂರಾದ ನಿವೇಶನಗಳ ಬಗ್ಗೆ

**ಶ್ರೀ ಸಿ.ಎಂ. ಲಿಂಗಪ್ಪ (ನಾಮನಿರ್ದೇಶನ ಹೊಂದಿದವರು) :-**

೩೦೫ (೩೩೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೮-೧೯ ರಿಂದ ೨೦೨೦-೨೧ರವರೆಗೆ ಬಸವ ವಸತಿ ಯೋಜನೆಯಡಿ ಮಂಜೂರು ಮಾಡಲಾದ ಮನೆಗಳ ಸಂಖ್ಯೆ ಎಷ್ಟು ;

(ಆ) ಎಷ್ಟು ಮನೆಗಳು ಪೂರ್ಣಗೊಂಡಿವೆ ;

(ಇ) ಬಿಡುಗಡೆ ಮಾಡಲಾದ ಅನುದಾನ ಎಷ್ಟು ; ಎಷ್ಟು ಅನುದಾನವನ್ನು ಬಿಡುಗಡೆ ಮಾಡಬೇಕಾಗಿದೆ ; (ಜಾತಿವಾರು, ಸಮುದಾಯವಾರು ವಿವರ ನೀಡುವುದು ಹಾಗೂ ಕ್ಷೇತ್ರವಾರು, ವರ್ಷವಾರು ಮಾಹಿತಿ ನೀಡುವುದು)

## ವಸತಿ ಶಾಲೆಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೩೦೬ (೩೮೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಮಾಜ ಕಲ್ಯಾಣ ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ವಿವರ ನೀಡುವುದು)

(ಆ) ಸದರಿ ಶಾಲೆಗಳಿಗೆ ಮಂಜೂರಾಗಿರುವ ಹಾಗೂ ಖಾಲಿ ಇರುವ ಬೋಧಕ/ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಸರ್ಕಾರಿ ಶಾಲೆಯಲ್ಲಿನ ಬೋಧಕ/ಬೋಧಕೇತರರಿಗೆ ನೀಡುತ್ತಿರುವ ಸೌಲಭ್ಯಗಳನ್ನು ಮೇಲ್ಕಂಡ ವಸತಿ ಶಾಲೆಗಳ ಖಾಯಂ ಬೋಧಕ/ಬೋಧಕೇತರರಿಗೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಸದರಿ ಬೋಧಕ/ಬೋಧಕೇತರರನ್ನು ಸಮಾಜ ಕಲ್ಯಾಣ ಇಲಾಖೆಯಲ್ಲಿ ವಿಲೀನಗೊಳಿಸಲು ಇರುವ ಕಾನೂನಿನ ತೊಡಕುಗಳೇನು ? (ವಿವಿರ ನೀಡುವುದು)

## 11–ಇ ಸ್ಕೆಚ್ ಬಗ್ಗೆ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೩೦೭ (೩೮೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಹಿಡುವಳಿದಾರರ ಸಂಖ್ಯೆ ಎಷ್ಟು ; (ದೊಡ್ಡ ಮತ್ತು ಸಣ್ಣ ಹಿಡುವಳಿದಾರರ ಸಂಖ್ಯೆ ಪ್ರತ್ಯೇಕವಾಗಿ ನೀಡುವುದು)

(ಆ) ಇದುವರೆವಿಗೆ 11–ಇ ಸ್ಕೆಚ್‌ಗೆ ಬಂದಿರುವ ಒಟ್ಟು ಅರ್ಜಿಗಳ ಸಂಖ್ಯೆ ಎಷ್ಟು ; (11–ಇ ಸ್ಕೆಚ್ ವಿಲೇವಾರಿ ಮಾಡುವಲ್ಲಿ ಅನುಸರಿಸಲಾಗಿರುವ ಮಾರ್ಗಸೂಚಿಗಳೇನು ; (ವಿವರ ನೀಡುವುದು)

(ಇ) 11–ಇ ಸ್ಕೆಚ್ ವಿಲೇವಾರಿ ಮಾಡುವಲ್ಲಿ ವಿಳಂಬ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ವಿಳಂಬಕ್ಕೆ ಕಾರಣಗಳೇನು ; ವಿಳಂಬ ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಯಲಹಂಕ ಹೋಬಳಿ, ಗಸ್ತಿ ಕೆಂಪನಹಳ್ಳಿ ಗ್ರಾಮದ ಸ.ನಂ. ೦೪ ಮತ್ತು ೦೮ರ ನಿವೇಶನ ಸಂಖ್ಯೆ ೨೧೦ನ್ನು ೨೦೧೦–೧೧ ನೇ ಇಸವಿಯ ಕ್ರಯದ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೩೦೮(೩೮೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಲಹಂಕ ಹೋಬಳಿ, ಗಸ್ತಿ ಕೆಂಪನಹಳ್ಳಿ ಗ್ರಾಮದ ಸರ್ವೆ ನಂಬರ್ ೪ ಮತ್ತು ೮ ರಲ್ಲಿನ ನಿವೇಶನ ಸಂಖ್ಯೆ ೨೧೦ ನ್ನು ೨೦೧೦–೧೧ನೇ ಇಸವಿಯಲ್ಲಿ ಯಾರು ಯಾರಿಂದ ಕ್ರಯಕ್ಕೆ ಪಡೆದಿರುತ್ತಾರೆ ;

(ಆ) ಮೇಲ್ಕಂಡ ಖರೀದಿದಾರರ ಹೆಸರಿನಲ್ಲಿ ಈವರೆಗೆ ಬೆಂಗಳೂರು ಉತ್ತರ ತಾಲೂಕಿನಲ್ಲಿ ಯಾವ ಯಾವ ಗ್ರಾಮಗಳ ಸರ್ವೆ ನಂಬರ್ ಗಳಲ್ಲಿ ನಿವೇಶನ ಹಾಗೂ ಜಮೀನುಗಳನ್ನು ಯಾವ ಯಾವ ನೋಂದಣಿ ಕಛೇರಿಗಳಲ್ಲಿ ನೋಂದಣಿಯಾಗಿರುತ್ತವೆ ; (ಸರ್ವೆ ನಂಬರ್, ನಿವೇಶನ ಸಂಖ್ಯೆ ಹಾಗೂ ಜಮೀನಿನ ಸಂಪೂರ್ಣ ಮಾಹಿತಿ ನೀಡುವುದು)

(ಇ) ಚಿಕ್ಕಬಳ್ಳಾಪುರ ಜಿಲ್ಲೆಯ ಚಿಕ್ಕಬಳ್ಳಾಪುರ ತಾಲ್ಲೂಕು ಮತ್ತು ಗೌರಿಬಿದನೂರು ತಾಲ್ಲೂಕಿನ ಯಾವ ಯಾವ ಗ್ರಾಮಗಳ ಸರ್ವೆ

ನಂಬರ್‌ಗಳಲ್ಲಿ ನಿವೇಶನ ಹಾಗೂ ಜಮೀನುಗಳು ಯಾವ ಯಾವ ನೋಂದಣಿ ಕಛೇರಿಗಳಲ್ಲಿ ಮೇಲ್ಕಂಡ ಅಭಿವೃದ್ಧಿದಾರರ ಹೆಸರಿನಲ್ಲಿ ನೋಂದಣಿಯಾಗಿರುತ್ತವೆ ? (ಸರ್ವೆ ನಂಬರ್, ನಿವೇಶನದ ಸಂಖ್ಯೆ ಹಾಗೂ ಜಮೀನಿನ ಸಂಪೂರ್ಣ ಮಾಹಿತಿ ನೀಡುವುದು)

## ಜಿಲ್ಲಾಧಿಕಾರಿಯವರ ಅಧೀನದಲ್ಲಿರುವ ವಿವಿಧ ಲೆಕ್ಕಶೀರ್ಷಿಕೆಯಲ್ಲಿರುವ ಅನುದಾನದ ಬಳಕೆ ಕುರಿತು

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) :-**

೩೦೯ (೪೬೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಜಿಲ್ಲಾಧಿಕಾರಿಗಳ ವ್ಯಾಪ್ತಿಗೆ ಒಳಪಡಿಸಿರುವ ವಿವಿಧ ಲೆಕ್ಕಶೀರ್ಷಿಕೆಗಳು ಯಾವುವು ; ಅವುಗಳಲ್ಲಿ ಕೋವಿಡ್ – ೧೯ರ ನಿಯಂತ್ರಣಕ್ಕಾಗಿ ಲಾಕ್‌ಡೌನ್ ಜಾರಿಗೆ ಬಂದ ದಿನಾಂಕದಂದು ಲಭ್ಯವಿದ್ದ ಅನುದಾನದ ಮೊತ್ತವೆಷ್ಟು ; (ಜಿಲ್ಲಾವಾರು, ಲೆಕ್ಕಶೀರ್ಷಿಕೆವಾರು ಮಾಹಿತಿಯನ್ನು ಒದಗಿಸುವುದು)

(ಆ) ಕೋವಿಡ್ – ೧೯ರ ನಿಯಂತ್ರಣಕ್ಕಾಗಿ ಲಾಕ್‌ಡೌನ್ ಜಾರಿಗೆ ಬಂದ ದಿನಾಂಕದ ನಂತರ ಈ ಲೆಕ್ಕಶೀರ್ಷಿಕೆಯಲ್ಲಿ ಬಿಡುಗಡೆಯಾದ ಅನುದಾನವೆಷ್ಟು; ಅವುಗಳಲ್ಲಿ ಮಾಡಿದ ವೆಚ್ಚವೆಷ್ಟು ; ಉಳಿಕೆಯಾಗಿರುವ ಅನುದಾನವೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನದ ಮೊತ್ತವೆಷ್ಟು ; (ಜಿಲ್ಲಾವಾರು, ಲೆಕ್ಕಶೀರ್ಷಿಕೆವಾರು ಮಾಹಿತಿಯನ್ನು ಒದಗಿಸುವುದು)

(ಇ) ಕೋವಿಡ್ – ೧೯ರ ನಿಯಂತ್ರಣಕ್ಕಾಗಿ ಲಾಕ್‌ಡೌನ್ ಜಾರಿಗೆ ಬಂದ ದಿನಾಂಕದ ನಂತರ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ

ಮುಖ್ಯಮಂತ್ರಿಗಳ ಪರಿಹಾರ ನಿಧಿಗಾಗಿ ಸ್ವೀಕೃತವಾದ ದೇಣಿಗೆಯ ಮೊತ್ತವೆಷ್ಟು ;

(ಈ) ಕೋವಿಡ್ ಸಂತ್ರಸ್ತರಿಗೆ ವಿತರಿಸಲು ಸಂಘ ಸಂಸ್ಥೆಗಳು ಮತ್ತು ದಾನಿಗಳಿಂದ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಸಂಗ್ರಹಿಸಿದ ದೇಣಿಗೆಯ ಮೊಬಲಗೆಷ್ಟು ಮತ್ತು ಸಂಗ್ರಹಿಸಿದ ಪರಿಹಾರ ಸಾಮಾಗ್ರಿಗಳು ಯಾವುವು; ಅವುಗಳ ಅಂದಾಜು ಮೌಲ್ಯವೆಷ್ಟು; ಅವುಗಳನ್ನು ಯಾವ ಕೇಂದ್ರಗಳಿಗೆ ವಿತರಿಸಲಾಗಿರುತ್ತದೆ ? (ಜಿಲ್ಲಾವಾರು, ತಿಂಗಳವಾರು ವಿವರವನ್ನು ನೀಡುವುದು)

## ರಾಜ್ಯದಲ್ಲಿ ಕೋವಿಡ್–೧೯ ನಿಯಂತ್ರಣಕ್ಕಾಗಿ ಕೈಗೊಂಡ ಕ್ರಮಗಳ ಕುರಿತು ಮಾಹಿತಿ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) :–**

೩೧೦ (೪೬೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸ್ಥಾಪಿಸಲಾದ ಕೋವಿಡ್ ಕೇರ್ ಕೇಂದ್ರಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಆರೈಕೆ ಪಡೆದ ರೋಗಿಗಳ ಸಂಖ್ಯೆ ಎಷ್ಟು ; ಪ್ರತಿ ರೋಗಿಗಳ ಚಿಕಿತ್ಸೆಗೆ ಸರ್ಕಾರದಿಂದ ನಿರ್ದಿಷ್ಟಪಡಿಸಿದ ಮೊತ್ತವೆಷ್ಟು ; ಕೋವಿಡ್ ಕೇರ್ ಕೇಂದ್ರಗಳ ನಿರ್ವಹಣೆಗೆ ಮತ್ತು ರೋಗಿಗಳ ಆರೈಕೆಗೆ ಬಿಡುಗಡೆ ಮಾಡಲಾದ ಅನುದಾನವೆಷ್ಟು ; ಮಾಡಲಾಗಿರುವ ವೆಚ್ಚವೆಷ್ಟು ; ಮತ್ತು ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು ; (ಜಿಲ್ಲಾವಾರು, ಕೇಂದ್ರವಾರು, ತಿಂಗಳವಾರು ಮಾಹಿತಿಯನ್ನು ಒದಗಿಸುವುದು)

(ಆ) ಕರೋನಾ ವೈರಸನ್ನು ನಿಯಂತ್ರಿಸುವ ನಿಟ್ಟಿನಲ್ಲಿ ತಾತ್ಕಾಲಿಕವಾಗಿ ನೇಮಕಾತಿ ಮಾಡಿಕೊಂಡ ನೌಕರರ ಸಂಖ್ಯೆ ಎಷ್ಟು ;ಈ ನೌಕರರ

ವೇತನಕ್ಕಾಗಿ ಬಿಡುಗಡೆಯಾದ ಅನುದಾನವೆಷ್ಟು ; ವೆಚ್ಚ ಮಾಡಿದ ಅನುದಾನವೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು; (ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು)

(ಇ) ಸರಕಾರದಿಂದ ಜಿಲ್ಲಾಡಳಿತಕ್ಕೆ ನೀಡಲಾದ ಅಧಿಕಾರದ ಆಧಾರದ ಮೇಲೆ ಕೋವಿಡ್ – ೧೯ರ ನಿಯಂತ್ರಣಕ್ಕಾಗಿ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಡೆಸಲಾದ ಸಭೆಗಳೆಷ್ಟು ; ಆ ಸಭೆಯಲ್ಲಿ ಭಾಗವಹಿಸಿದ ಅಧಿಕಾರಿಗಳು ಯಾರು ; ಆ ಸಭೆಗಳಲ್ಲಿ ತೆಗೆದುಕೊಂಡ ತೀರ್ಮಾನಗಳು ಯಾವುವು ? (ಸಭಾ ನಡವಳಿಯ ಪ್ರತಿಯನ್ನು ಒದಗಿಸುವುದು)

## ಕುಮ್ಕಿ ಜಮೀನನ್ನು ರೈತರಿಗೆ ನೀಡುವ ಕುರಿತು

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) :–**

೩೧೧ (೪೬೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕುಮ್ಕಿ, ಕಾಣೆ ಬಾಣೆ, ಜಮ್ಮಾ, ಸೊಪ್ಪಿನ ಬೆಟ್ಟದಂತಹ ಭೂಮಿಯನ್ನು ಅದರ ಹಕ್ಕನ್ನು (privilege) ಹೊಂದಿರುವ ರೈತರಿಗೆ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಅದರ ಕರಡು ಯೋಜನೆಯು ರಚನೆಯಾಗಿದೆಯೇ; (ಪ್ರತಿಯನ್ನು ಒದಗಿಸುವುದು)

(ಆ) ಇಲ್ಲವಾದಲ್ಲಿ , ರಾಜ್ಯದಲ್ಲಿ ಅತೀ ಹೆಚ್ಚು ಅರಣ್ಯವನ್ನು ಹೊಂದಿರುವ ಕುಮ್ಕಿ, ಕಾಣೆ ಬಾಣೆ, ಜಮ್ಮಾ, ಸೊಪ್ಪಿನ ಬೆಟ್ಟದಂತಹ ಭೂಮಿಯನ್ನು ಅಲ್ಲಿನ ರೈತರ ಹಕ್ಕಿನಂತೆ (privilege

ಕಾಯ್ದುಕೊಂಡು ಹೋಗಲು ಸರ್ಕಾರವು ಯಾವ ಕ್ರಮವನ್ನು ವಹಿಸಿದೆ ; ಇಲ್ಲವಾದಲ್ಲಿ ಇರುವ ಕಾಡು ಕೂಡ ನಾಶವಾಗುವ ಸಾಧ್ಯತೆಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಭೂಮಿಯನ್ನು ಪರಿವರ್ತಿಸದೆ ಹಾಗೂ ಮಾರಾಟಕ್ಕೆ ಅವಕಾಶ ಕಲ್ಪಿಸದೇ ಇರುವ ಕಾಡನ್ನು ಉಳಿಸಿಕೊಂಡು ಹೋಗುವ ಷರತ್ತಿನೊಂದಿಗೆ ಸರ್ಕಾರದ ಮಾರ್ಗಸೂಚಿ ದರದ ಅರ್ಧ ಮೌಲ್ಯದಲ್ಲಿ ಆಯಾ ರೈತರಿಗೆ ನೀಡುವ ಯೋಜನೆಯು ಸರ್ಕಾರದ ಮುಂದಿದೆಯೇ ?

## ಹೆದ್ದಾರಿಗಳನ್ನು ಮೇಲ್ದರ್ಜೆಗೆ ಉನ್ನತೀಕರಿಸುವ ಬಗ್ಗೆ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) :-**

೩೧೨(೩೬೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ರಾಷ್ಟ್ರೀಯ ಹೆದ್ದಾರಿಯಾಗಿ ಪರಿವರ್ತನೆಯಾಗಲು ಕೇಂದ್ರ ಭೂಸಾರಿಗೆ ಮಂತ್ರಾಲಯಕ್ಕೆ ಸಲ್ಲಿಕೆಯಾದ ಪ್ರಸ್ತಾವನೆಗಳು ಯಾವುವು ; ಹಾಗೂ ದ್ವಿಪಥ ರಸ್ತೆಯಾಗಿ ಉನ್ನತೀಕರಿಸಲು ಸಲ್ಲಿಕೆಯಾದ ಪ್ರಸ್ತಾವನೆಗಳು ಯಾವುವು ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಕೋಟೇಶ್ವರ ಹಾಲಾಡಿ ಸೋಮೇಶ್ವರ ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿಯಾಗಿ ಪರಿವರ್ತನೆ ಮಾಡಲು ಹಾಗೂ ದ್ವಿಪಥ ರಸ್ತೆಯನ್ನಾಗಿ ಅಭಿವೃದ್ಧಿ ಪಡಿಸಲು ಯೋಜಿಸಲಾಗಿದೆಯೇ; ಈ ಪ್ರಸ್ತಾವನೆಯು ಈಗ ಯಾವ ಹಂತದಲ್ಲಿದೆ ; (ವಿವರಗಳನ್ನು ಒದಗಿಸುವುದು)

(ಇ) ರಾಜ್ಯದಲ್ಲಿರುವ ಯಾವ ಯಾವ ರಸ್ತೆಗಳನ್ನು ರಾಜ್ಯ ಹೆದ್ದಾರಿಯಾಗಿ ಪರಿವರ್ತನೆ ಮಾಡುವ ಬಗೆಗಿನ ಪ್ರಸ್ತಾವನೆಯು ಸರ್ಕಾರದ ಮುಂದಿದೆ ? (ಜಿಲ್ಲಾವಾರು ವಿವರ ಒದಗಿಸುವುದು)

## ಕೃಷಿ ಇಲಾಖೆಯ ಕಾರ್ಯಕ್ರಮಗಳ ಕುರಿತು

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) :-**

೩೧೩ (೩೬೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೨೦೧೯-೨೦ ನೇ ಸಾಲಿನ ಕೃಷಿಯ ಪ್ರೋತ್ಸಾಹಕ್ಕಾಗಿ ಸರ್ಕಾರದಿಂದ ಹಮ್ಮಿಕೊಂಡ ಕಾರ್ಯಕ್ರಮಗಳು ಯಾವುವು ; ಇವುಗಳಲ್ಲಿ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; ವೆಚ್ಚ ಮಾಡಲಾದ ಅನುದಾನವೆಷ್ಟು ; ಬಾಕಿಯಿರುವ ಅನುದಾನವೆಷ್ಟು ; ಬಿಡುಗಡೆ ಮಾಡಲು ಬಾಕಿಯಿರುವ ಅನುದಾನವೆಷ್ಟು ; (ಜಿಲ್ಲಾವಾರು ಕಾರ್ಯಕ್ರಮವಾರು ಮಾಹಿತಿಯನ್ನು ಒದಗಿಸುವುದು)

(ಆ) ರಾಜ್ಯದಲ್ಲಿ ೨೦೨೦-೨೧ನೇ ಸಾಲಿನ ಕೃಷಿಯ ಪ್ರೋತ್ಸಾಹಕ್ಕಾಗಿ ಸರ್ಕಾರದಿಂದ ಹಮ್ಮಿಕೊಂಡ ಕಾರ್ಯಕ್ರಮಗಳು ಯಾವುವು ; ಇವುಗಳಲ್ಲಿ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; ವೆಚ್ಚ ಮಾಡಲಾದ ಅನುದಾನವೆಷ್ಟು ; ಬಾಕಿಯಿರುವ ಅನುದಾನವೆಷ್ಟು ; ಬಿಡುಗಡೆ ಮಾಡಲು ಬಾಕಿಯಿರುವ ಅನುದಾನವೆಷ್ಟು ; (ಜಿಲ್ಲಾವಾರು ಕಾರ್ಯಕ್ರಮವಾರು ಮಾಹಿತಿಯನ್ನು ಒದಗಿಸುವುದು)

(ಇ) ಕರಾವಳಿ ಜಿಲ್ಲೆಗಳಲ್ಲಿ ರೈತರು ಕೃಷಿ ಕೂಲಿ ಕಾರ್ಮಿಕರ ಕೊರತೆಯಿಂದ ಕೃಷಿ ಯಾಂತ್ರೀಕರಣ ಪ್ರೋತ್ಸಾಹಕ್ಕಾಗಿ ಯಾವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿರುತ್ತದೆ, ಈ ಸಾಲಿನಲ್ಲಿ ಈ ಯೋಜನೆಯಲ್ಲಿ ಎಷ್ಟು ಫಲಾನುಭವಿಗಳನ್ನು ಆಯ್ಕೆಮಾಡಲಾಗಿರುತ್ತದೆ ; ಬಿಡುಗಡೆಯಾಗಿರುವ ಅನುದಾನವೆಷ್ಟು; ವೆಚ್ಚಮಾಡಲಾಗಿರುವ ಅನುದಾನೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು ? (ಜಿಲ್ಲಾವಾರು ತಾಲ್ಲೂಕುವಾರು ಮಾಹಿತಿಯನ್ನು ಒದಗಿಸುವುದು)

## ರಾಜ್ಯದ ರೈತರಿಗೆ ಇ.ಸಿ. ಬೋಜಾ ಫಾರಂಗಳನ್ನು ನೀಡುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೧೪ (೪೬೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಾದ್ಯಂತ ರೈತರಿಗೆ ಇ.ಸಿ. ಬೋಜಾ ಫಾರಂಗಳನ್ನು ಯಾವ ಕೇಂದ್ರಗಳಲ್ಲಿ ನೀಡಲಾಗುತ್ತಿದೆ ;

(ಆ) ರೈತರಿಗೆ ಸಕಾಲಕ್ಕೆ ಇ.ಸಿ. ಬೋಜಾ ಫಾರಂಗಳನ್ನು ದೊರಕದೆ ಬ್ಯಾಂಕ್‌ಗಳಲ್ಲಿ ಸಕಾಲಕ್ಕೆ ಸಾಲ ಸಿಗದೇ ರೈತರು ಅನುಭವಿಸುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರೈತರಿಗೆ ಸಕಾಲಕ್ಕೆ ಇ.ಸಿ. ಬೋಜಾ ಫಾರಂಗಳು ದೊರಕುವಂತಾಗಲು ಬ್ಯಾಂಕ್‌ಗಳೇ ಆನ್‌ಲೈನ್‌ನಲ್ಲಿ ಇ.ಸಿ. ಬೋಜಾ ಫಾರಂಗಳನ್ನು ಪಡೆದುಕೊಳ್ಳಲು ಅವಕಾಶವಿದೆಯೇ?

## ವೃದ್ಧಾಪ್ಯ, ಅಂಗವಿಕಲರ ಮತ್ತು ವಿಧವಾ ವೇತನ ಬಾಕಿ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೫ (೩೮೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಒಟ್ಟು ಎಷ್ಟು ತಿಂಗಳುಗಳಿಂದ ವೃದ್ಧಾಪ್ಯ ವೇತನ, ಅಂಗವಿಕಲರ ವೇತನ ಹಾಗೂ ವಿಧ'ವಾ ವೇತನ ಬಟವಾಡೆಯಾಗದೇ ಉಳಿದಿದೆ ; ಅದಕ್ಕೆ ಕಾರಣಗಳೇನು ;

(ಆ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಬಟವಾಡೆ ಮಾಡಲು ಕ್ರಮವಹಿಸಲಾಗುವುದು ?

## ನೆರೆ ಹಾನಿಗೊಳಗಾದ ಮನೆಗಳಿಗೆ ಪರಿಹಾರ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೬ (೩೪೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯–೨೦ ಹಾಗೂ ೨೦೨೦–೨೧ ನೇ ಸಾಲಿನಲ್ಲಿ ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ನೆರೆಹಾವಳಿಯಿಂದ ಹಾನಿಗೊಳಗಾದ ಮನೆಗಳ ಸಂಖ್ಯೆ ಎಷ್ಟು ;

(ಆ) ಹಾನಿಯಾದ ಮನೆಗಳ ಪೈಕಿ"ಎ" ಶ್ರೇಣಿ, "ಬಿ" ಶ್ರೇಣಿ ಮತ್ತು"ಸಿ" ಶ್ರೇಣಿಯ ಮನೆಗಳ ಸಂಖ್ಯೆ ಎಷ್ಟು ;

(ಇ) ಹಾನಿಗೊಳಗಾದ ಮನೆಗಳ ಪೈಕಿ "ಎ" ಶ್ರೇಣಿ, "ಬಿ" ಶ್ರೇಣಿ ಮತ್ತು "ಸಿ" ಶ್ರೇಣಿಯ ಮನೆಗಳಿಗೆ ಸರ್ಕಾರದಿಂದ ಈವರೆಗೆ ನೀಡಿದ ಪರಿಹಾರದ ಮೊತ್ತವೆಷ್ಟು ;

(ಈ) ಹಾನಿಗೊಳಗಾದ ಮನೆಗಳ ಪೈಕಿ "ಎ" ಶ್ರೇಣಿ "ಬಿ" ಶ್ರೇಣಿ ಮತ್ತು "ಸಿ" ಶ್ರೇಣಿಯ ಮನೆಗಳಿಗೆ ಸರ್ಕಾರದಿಂದ ಬಿಡುಗಡೆ ಮಾಡಲು ಬಾಕಿಯಿರುವ ಪರಿಹಾರದ ಮೊತ್ತವೆಷ್ಟು ?

## ಕೊಳಚೆ ಅಭಿವೃದ್ಧಿ ಪ್ರದೇಶದಲ್ಲಿ ಕೈಗೊಂಡ ಕಾಮಗಾರಿಗಳ ಕುರಿತು

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೭ (೩೬೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕೊಳಚೆ ಅಭಿವೃದ್ಧಿ ಪ್ರದೇಶದಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು ; ಕಾಮಗಾರಿಗಳು ಎಲ್ಲೆಲ್ಲಿ ನಡೆಯುತ್ತಿವೆ ;

(ಆ) ಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ೨೦೧೯–೨೦ನೇ ಸಾಲಿನಲ್ಲಿ ಕೆ.ಆರ್.ಡಿ.ಎಲ್ ವತಿಯಿಂದ ನಿರ್ಮಿಸಲಾದ ರಸ್ತೆ ಹಾಗೂ ಸೇತುವೆಗಳ ಬಗ್ಗೆ

**ಶ್ರೀ ನಜೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೮ (೪೬೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಮಾಜ ಕಲ್ಯಾಣ ಮತ್ತು ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೯–೨೦ನೇ ಸಾಲಿನಲ್ಲಿ ಕೆ.ಆರ್.ಡಿ.ಎಲ್ ವತಿಯಿಂದ ಉತ್ತರ ಕರ್ನಾಟಕದ ನೆರೆ ಹಾವಳಿ ಪ್ರದೇಶದಲ್ಲಿ ಎಷ್ಟು ಕಿಲೋ ಮೀಟರ್ ರಸ್ತೆ ಹಾಗೂ ಸೇತುವೆಗಳನ್ನು ನಿರ್ಮಾಣ ಮಾಡಲಾಗಿದೆ ; (ಕ್ಷೇತ್ರವಾರು ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳಿಗೆ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ; ಇದರಲ್ಲಿ ಖರ್ಚು ಮಾಡಲಾದ ಅನುದಾನ ಎಷ್ಟು ;

(ಇ) ಬಾಕಿ ಉಳಿದಿರುವ ಕಾಮಗಾರಿಗಳು ಯಾವ ಹಂತದಲ್ಲಿವೆ ಮತ್ತು ಯಾವಾಗ ಪೂರ್ಣಗೊಳ್ಳುತ್ತವೆ ? (ವಿವರ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯಲ್ಲಿ ಪ್ರಸಕ್ತ ವರ್ಷದಲ್ಲಿ ಕೊರೆಯಿಸಿದ ಕೊಳವೆ ಬಾವಿಗಳ ವಿವರ

**ಶ್ರೀ ನಜೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೯ (೪೫೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಮಾಜ ಕಲ್ಯಾಣ ಮತ್ತು ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಇಲಾಖೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಗಂಗಾ ಕಲ್ಯಾಣ ಯೋಜನೆಯಲ್ಲಿ ಕೊರೆಯಿಸಿದ ಕೊಳವೆ ಬಾವಿಗಳೆಷ್ಟು; ಈಗಾಗಲೇ ಕೊರೆದಿರುವ ಎಷ್ಟು ಕೊಳವೆ ಬಾವಿಗಳಿಗೆ ಪಂಪ್‌ಸೆಟ್ ಮತ್ತು ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗಿದೆ ;

(ಆ) ಸದರಿ ಯೋಜನೆಯಲ್ಲಿ ಇನ್ನು ಎಷ್ಟು ಕೊಳವೆ ಬಾವಿ ಕೊರೆಸುವುದು ಬಾಕಿ ಇದೆ ; ಅವುಗಳನ್ನು ಯಾವಾಗ ಕೊರೆಸಲಾಗುವುದು ; ಇದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ವಿವಿಧ ಯೋಜನೆಗಳಡಿಯಲ್ಲಿ ಮಂಜೂರು ಮಾಡಲಾದ ಮನೆಗಳ ವಿವರ

**ಶ್ರೀ ನಜೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೦ (೩೬೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯, ೨೦೧೯–೨೦ ಮತ್ತು ೨೦೨೦–೨೦೨೧ನೇ ಸಾಲಿನಲ್ಲಿ ವಿವಿಧ ವಸತಿ ಯೋಜನೆಯಡಿ ಮಂಜೂರು ಮಾಡಲಾದ ಮನೆಗಳ ಸಂಖ್ಯೆ ಎಷ್ಟು ;

(ಆ) ಅವುಗಳಲ್ಲಿ ಎಷ್ಟು ಮನೆಗಳು ಸಂಪೂರ್ಣಗೊಂಡಿವೆ ; (ಸಮುದಾಯವಾರು, ಕ್ಷೇತ್ರವಾರು ಮತ್ತು ವರ್ಷವಾರು ವಿವರ ನೀಡುವುದು)

(ಇ) ಇನ್ನೂ ಬಾಕಿ ಇರುವ ಮನೆಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ?

## ರಾಜ್ಯದಲ್ಲಿ ಮೆಕ್ಕೆಜೋಳ ಬೆಳೆಯಲು ಉತ್ತೇಜನ ನೀಡುವ ಕುರಿತು

**ಶ್ರೀ ನಜೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೧ (೩೬೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮೆಕ್ಕೆಜೋಳ ಬೆಳೆಯಲು ಕೃಷಿ ಇಲಾಖೆಯಿಂದ ಉತ್ತೇಜಿಸಲಾಗುತ್ತಿದೆಯೇ ; ಹಾಗಿದ್ದಲ್ಲಿ, ಎಷ್ಟು ವಿಸ್ತೀರ್ಣದಲ್ಲಿ ಮೆಕ್ಕೆಜೋಳ ಬೆಳೆಯಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಬೆಳೆ ಬೆಳೆಯಲು ಸರ್ಕಾರ ನೀಡುವ ಸೌಲಭ್ಯಗಳೇನು ;

(ಇ) ಈ ಬೆಳೆಗೆ ಕೇಂದ್ರ ಸರ್ಕಾರ ಎಂ.ಎಸ್.ಪಿ ದರ ನಿಗಧಿ ಪಡಿಸಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ದರ ನಿಗಧಿಪಡಿಸಲಾಗಿದೆ ;

(ಈ) ರಾಜ್ಯ ಸರ್ಕಾರದಿಂದ ಮೆಕ್ಕೆಜೋಳವನ್ನು ಖರೀದಿಸಲಾಗುತ್ತಿದೆಯೇ ;

(ಉ) ಇದುವರೆಗೆ ಎಷ್ಟು ಕ್ವಿಂಟಾಲ್ ಮೆಕ್ಕೆಜೋಳ ಖರೀದಿಸಲಾಗಿದೆ ? (ವಿವರ ನೀಡುವುದು)

## ಮುಜರಾಯಿ ಇಲಾಖೆಯಿಂದ ನೀಡಿರುವ ಅನುದಾನದ ಬಗ್ಗೆ

**ಶ್ರೀ ಕೆ.ಪಿ.ನಂಜುಂಡಿ ವಿಶ್ವಕರ್ಮ(ವಿಧಾನಸಭೆಯಿಂದ ಚುನಾಯಿತರಾದವರು):–**

೩೨೨ (೩೨೫) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮುಜರಾಯಿ ಇಲಾಖೆಯಲ್ಲಿ ವಿಶ್ವಕರ್ಮ ಕುಲದೇವರುಗಳಾದ ಶ್ರೀ ಕಾಳಿಕಾಂಬ ದೇವಿ, ವಿಶೇಷವಾಗಿ ಸಿರಸಂಗಿ ಕಾಳಿಕಾದೇವಿ, ತಿಂಥಿಣಿ ಮೌಳೇಶ್ವರ, ವರದಿ ಮೌಳೇಶ್ವರ, ಚಿಕ್ಕ ಕಲ್ಲೂರು ಸಿದ್ದಪ್ಪಾಜೀ ಮತ್ತು ವೀರ ಬ್ರಹೇಂದ್ರ ಸ್ವಾಮಿ ಮಠ, ಪಾಪಗ್ನಿ ಮಠ ಮತ್ತು ದೇವಾಲಯಗಳಿಗೆ ಕೊಟ್ಟಿರುವ ಅನುದಾನ ಎಷ್ಟು ;

(ಆ) ರಾಜ್ಯದಲ್ಲಿರುವ ಎಲ್ಲಾ ಸಮಾಜಗಳ ಒಟ್ಟಾರೇ ಮಠಗಳೆಷ್ಟು ;

(ಇ) ಕಳೆದ ೫ ವರ್ಷಗಳಿಂದ ಯಾವ ಯಾವ ಮಠಗಳಿಗೆ ಎಷ್ಟು ಎಷ್ಟು ಅನುದಾನ ನೀಡಲಾಗಿದೆ ? (ವಿವರ ನೀಡುವುದು)

## ಮುಜರಾಯಿ ದೇವಾಲಯ ನಿರ್ವಹಣಾ ಸಮಿತಿಯಲ್ಲಿ ವಿಶ್ವಕರ್ಮ ಸಮಾಜ ಕಡೆಗಣನೆ ಮಾಡುತ್ತಿರುವ ಕುರಿತು

**ಶ್ರೀ ಕೆ.ಪಿ.ನಂಜುಂಡಿ ವಿಶ್ವಕರ್ಮ(ವಿಧಾನಸಭೆಯಿಂದ ಚುನಾಯಿತರಾದವರು):–**

೩೨೩ (೩೪೯) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮುಜರಾಯಿ ಇಲಾಖೆಯಡಿಯಲ್ಲಿ ಬರುವ ಎ/ಬಿ/ಸಿ ವರ್ಗದ ದೇವಾಲಯಗಳ ಸಂಖ್ಯೆ ಎಷ್ಟು ; ಈ ದೇವಾಲಯ ನಿರ್ವಹಣೆಗೆ ಸಲಹಾ ಸಮಿತಿಯ ಸದಸ್ಯರನ್ನು ನೇಮಕಾತಿ ಮಾಡಲು ಇರುವ ಮಾನದಂಡಗಳೇನು ;

(ಆ) ಈ ಸಲಹಾ ಸಮಿತಿಯ ಸದಸ್ಯರಲ್ಲಿ ವಿಶ್ವಕರ್ಮ ಸಮುದಾಯದ ಸದಸ್ಯರ ಸಂಖ್ಯೆ ಎಷ್ಟು ;

(ಇ) ಸದರಿ ಸಲಹಾ ಸಮಿತಿಯಲ್ಲಿ ವಿಶ್ವಕರ್ಮ ಸಮುದಾಯದವರಿಗೆ ಪ್ರಾಮುಖ್ಯತೆ ನೀಡದಿರಲು ಕಾರಣವೇನು ?

## ಬಗರ್ ಹುಕುಂ ಯೋಜನೆಯ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೩೨೪ (೪೦೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬಗರ್ ಹುಕುಂ ಯೋಜನೆಯಡಿಯಲ್ಲಿ ಇದುವರೆಗೂ ಎಷ್ಟು ಅರ್ಜಿಗಳನ್ನು ಸ್ವೀಕರಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಯೋಜನೆಯುಡಿಯಲ್ಲಿ ಇಲ್ಲಿಯುವರೆಗೂ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ; ಹಾಗೂ ಈ ಫಲಾನುಭವಿಗಳಿಗೆ ಒಟ್ಟು ಎಷ್ಟು ಜಮೀನು ನೀಡಲಾಗಿದೆ ;

(ಇ) ಸದರಿ ಯೋಜನೆಗೆ ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸುತ್ತಿರುವ ಮಾನದಂಡಗಳೇನು ; ಹಾಗೂ ಗರಿಷ್ಟ ಎಷ್ಟು ಪ್ರಮಾಣದ ಜಮೀನನ್ನು ನೀಡಲಾಗುವುದು ;

(ಈ) ಬಾಗಲಕೋಟೆ ಜಿಲ್ಲೆಯ ವ್ಯಾಪ್ತಿಯಲ್ಲಿ ಇಲ್ಲಿಯವರೆಗೂ ಎಷ್ಟು ಅರ್ಜಿಗಳು ಸ್ವೀಕೃತವಾಗಿವೆ ; ವಿಲೇವಾರಿ ಮಾಡಿದ ಮತ್ತು ಮಾಡದಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಉ) ಸದರಿ ಯೋಜನೆಯಲ್ಲಿ ಅರ್ಜಿ ಸಲ್ಲಿಸುವ ಕಾಲಾವಧಿಯನ್ನು ವಿಸ್ತರಿಸಲಾಗಿದೆಯೇ ; ಹಾಗಿದ್ದಲ್ಲಿ, ಯಾವ ದಿನಾಂದವರೆಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ?

## ವಸತಿ ಇಲಾಖೆಯ ವತಿಯಿಂದ ನಿವೇಶನ ಮತ್ತು ಮನೆಗಳನ್ನು ಮಂಜೂರು ಮಾಡುವ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೩೨೫ (೪೦೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ವಸತಿ ಇಲಾಖೆಯಲ್ಲಿ ಯಾವ ಯಾವ ಯೋಜನೆಗಳಡಿ ನಿವೇಶನ ಮತ್ತು ಮನೆಗಳನ್ನು ಮಂಜೂರು ಮಾಡಲಾಗುತ್ತಿದೆ ;

(ಆ) ಆ ಯೋಜನೆಗಳಲ್ಲಿ ಮನೆಗಳನ್ನು ಮಂಜೂರು ಮಾಡಲು ಅನುಸರಿಸುವ ಮಾನದಂಡಗಳೇನು ;

(ಇ) ಯಾವ ಯಾವ ಯೋಜನೆಯಲ್ಲಿ ಎಷ್ಟು ಅನುದಾನವನ್ನು ಫಲಾನುಭವಿಗಳಿಗೆ ಒದಗಿಸಲಾಗುತ್ತಿವೇ ;

(ಈ) ಕಳೆದ ೦೨ ವರ್ಷಗಳಿಂದ ಬಾಗಲಕೋಟೆ ಜಿಲ್ಲೆಯ ವ್ಯಾಪ್ತಿಯಲ್ಲಿ ಇಲ್ಲಿಯವರೆಗೂ ಎಷ್ಟು ಮನೆ ಮತ್ತು ನಿವೇಶನಗಳನ್ನು ಮಂಜೂರು ಮಾಡಲಾಗಿದೆ ? (ತಾಲ್ಲೂಕುವಾರು ಪೂರ್ಣ ವಿವರ ನೀಡುವುದು)

## ಕ್ರೈಸ್ ಸಂಸ್ಥೆಯ ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರ ಸಮಸ್ಯೆಗಳನ್ನು ಪರಿಹರಿಸುವ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೩೨೬ (೪೦೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಮಾಜ ಕಲ್ಯಾಣ ಮತ್ತು ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಮಾಜ ಕಲ್ಯಾಣ ಇಲಾಖೆಯ ಕ್ರೈಸ್ ಸಂಸ್ಥೆಯ ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸಿ ಇಲ್ಲಿಯವರೆಗೂ ನಿಧನರಾದ ನೌಕರರ ಸಂಖ್ಯೆ ಎಷ್ಟು; ನಿಧನರಾದ ನೌಕರರ ಕುಟುಂಬಕ್ಕೆ ಸರ್ಕಾರ ಮತ್ತು ಕ್ರೈಸ್ ಸಂಸ್ಥೆಗಳು ನೀಡಿರುವ ಪರಿಹಾರದ ಮೊತ್ತವೆಷ್ಟು ; (ಫಲಾನುಭವಿಗಳು ಪಡೆದ ಮೊತ್ತದ ವಿವರ ನೀಡುವುದು)

(ಆ) ಅನುಕಂಪದ ಆಧಾರದ ಮೇಲೆ ಸದರಿ ಸಂಸ್ಥೆಯಲ್ಲಿ ನೇಮಕಾತಿ ಮಾಡಲಾಗಿದೆಯೇ ; (ವಿವರ ನೀಡುವುದು)

(ಇ) ಇಲ್ಲವಾದಲ್ಲಿ, ಅನುಕಂಪ ಆಧಾರಿತ ನೌಕರಿ ನೀಡದಿರುವುದಕ್ಕೆ ಕಾರಣಗಳೇನು ;

(ಈ) ಸದರಿ ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಖಾಯಂ ನೌಕರರಿಗೆ ಮರಣ ಉಪದಾನ (DCRG) ಸೌಲಭ್ಯ ನೀಡದಿರುವುದಕ್ಕೆ ಕಾರಣಗಳೇನು ;

(ಉ) ಸದರಿ ಖಾಯಂ ನೌಕರರುಗಳಿಗೆ ಎಂಪ್ಲಾಯ್ ಗ್ರಾಚ್ಯುಟಿ ಇನ್ಸೂರೆನ್ಸ್ ಸ್ಕೀಮ್ (EGIS) ಮೊತ್ತ ನೀಡಲಾಗುತ್ತಿದೆಯೇ ; ಹಾಗಾದಲ್ಲಿ, ಸದರಿ ಮೊತ್ತದ ಪ್ರಮಾಣವೆಷ್ಟು ; ಇಂದಿನವರೆವಿಗೂ ಎಷ್ಟು ಮೃತ ನೌಕರರುಗಳಿಗೆ ಸದರಿ ಸೌಲಭ್ಯ ಒದಗಿಸಲಾಗಿದೆ ; (ವಿವರ ನೀಡುವುದು)

(ಊ) ಸದರಿ ಸಂಸ್ಥೆಯ ಖಾಯಂ ಸಿಬ್ಬಂದಿಗಳಿಗೆ "ಜ್ಯೋತಿ ಸಂಜೀವಿನಿ" ಮತ್ತು ನಗದು ರಹಿತ ಚಿಕಿತ್ಸಾ ಸೌಲಭ್ಯಗಳು ಅನ್ವಯಿಸುವುದಿಲ್ಲವೇ ; ಇಲ್ಲವಾದಲ್ಲಿ, ಅನ್ವಯಿಸದಿರುವುದಕ್ಕೆ ಕಾರಣಗಳೇನು ? (ಮಾಹಿತಿ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯ ಗಂಗಾ ಕಲ್ಯಾಣ ಯೋಜನೆ ಅಕ್ರಮಗಳ ಬಗ್ಗೆ

**ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೩೨೭ (೩೨೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಭೋವಿ ಅಭಿವೃದ್ಧಿ ನಿಗಮ, ಆದಿ ಜಾಂಭವ ಅಭಿವೃದ್ಧಿ ನಿಗಮ, ವಾಲ್ಮೀಕಿ ಅಭಿವೃದ್ಧಿ ನಿಮಗಳಲ್ಲಿ ೨೦೧೫–೧೬ ರಿಂದ ೨೦೧೯–೨೦ರವರೆಗೆ ಗಂಗಾ ಕಲ್ಯಾಣ ಯೋಜನೆಯ ಕಾಮಾಗಾರಿಗಳಲ್ಲಿ ವಿಧಾನಸಭಾ ಕ್ಷೇತ್ರವಾರು

ನಿಗಧಿಪಡಿಸಿದ ಗುರಿ, ವಿವೇಚನಾ ಕೋಟಾದಲ್ಲಿ ಮಂಜೂರು ಮಾಡಿದ ವಿಧಾನಸಭಾ ಕ್ಷೇತ್ರವಾರು ಸಂಖ್ಯೆ, ಈ ಎರಡೂ ಆಯ್ಕೆ ನಂತರ ಆಗಿರುವ ವಿಧಾನಸಭಾ ಕ್ಷೇತ್ರವಾರು ಪ್ರಗತಿ ವಿವರಗಳನ್ನು ಒದಗಿಸುವುದು ;

(ಆ) ಈ ಕೊಳವೆ ಬಾವಿಗಳನ್ನು ಕೊರೆದು ಪಂಪ್‌ಸೆಟ್ ಅಳವಡಿಸಲು ಟೆಂಡರ್ ಕರೆಯಲಾಗಿದೆಯೇ ; ಕರೆದಿದ್ದಲ್ಲಿ, ಪ್ಯಾಕೇಜ್‌ವಾರು, ವಿಧಾನಸಭಾ ಕ್ಷೇತ್ರವಾರು, ಟೆಂಡರ್‌ನಲ್ಲಿ ನಿಗಧಿಪಡಿಸಿದ ಗುರಿ ಎಷ್ಟು ; (ಟೆಂಡರ್ ಪ್ರಕಟಣೆ ಪ್ರತಿ ಒದಗಿಸುವುದು)

(ಇ) ಈ ಯೋಜನೆಯ ಒಟ್ಟು ಗುರಿಯ ಪೈಕಿ ಶೇ.೮೦ಕ್ಕೆ ಮಾತ್ರ ಟೆಂಡರ್ ಕರೆದು, ವಿವೇಚನಾ ಕೋಟಾದಲ್ಲಿ ಆಯ್ಕೆ ಆದ ಶೇ.೨೦ ರಷ್ಟು ಫಲಾನುಭವಿಗಳ ಗಂಗಾ ಕಲ್ಯಾಣ ಕಾಮಗಾರಿಗಳನ್ನು ಟೆಂಡರ್ ಕರೆಯದೆ ಅಧಿಕಾರಿಗಳಿಗೆ ಇಷ್ಟ ಬಂದ ಗುತ್ತಿಗೆದಾರರ ಮೂಲಕ ಅಕ್ರಮವಾಗಿ ಕಾಮಗಾರಿ ಮಾಡಿ ಭ್ರಷ್ಟಾಚಾರ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಕಳೆದ ನಾಲ್ಕು ವರ್ಷಗಳಲ್ಲಿ ೨೫೦ ಕೋಟಿಗಳಿಗೂ ಅಧಿಕ ಅಕ್ರಮ ಮಾಡಿರುವುದಾಗಿ ಸಾರ್ವಜನಿಕರು, ದಲಿತ ಸಂಘಗಳು ಸರ್ಕಾರಕ್ಕೆ ದೂರು ನೀಡಿದ್ದು, ಈ ಬಗ್ಗೆ ಸರ್ಕಾರವು ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಂಡಿದೆ ? (ಮಾಹಿತಿ ನೀಡುವುದು)

## ಸರ್ಕಾರಿ ಜಮೀನನ್ನು ಖಾಸಗಿಯವರಿಗೆ ನಕಲಿ ದಾಖಲೆ ಸೃಷ್ಟಿಸಿ ಮಂಜೂರು ಮಾಡುವ ಬಗ್ಗೆ

**ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೩೨೮ (೩೯೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೩ ವರ್ಷಗಳಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ತಾಲ್ಲೂಕು ಕಛೇರಿಯಲ್ಲಿರುವ ಅಧಿಕಾರಿಗಳು ಸರ್ಕಾರಿ ಜಮೀನುಗಳನ್ನು ಖಾಸಗಿಯವರಿಗೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇಡೀ ದೇವನಹಳ್ಳಿ ತಾಲ್ಲೂಕಿನಲ್ಲಿ ಅಂತಹ ಎಷ್ಟು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆ ; ಅವು ಯಾವುವು ? (ವಿವರಗಳನ್ನು ಪ್ರಕರಣವಾರು ನೀಡುವುದು)

## ಆಹಾರ ಪಾರ್ಕ್‌ಗಳ ಕುರಿತು

**ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೩೨೯ (೪೧೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಆಹಾರ ಪಾರ್ಕ್‌ಗಳ ಸಂಖ್ಯೆ ಎಷ್ಟು ; ಅವು ಯಾವುವು ; (ವಿವರಗಳನ್ನು ನೀಡುವುದು)

(ಆ) ಆಹಾರ ಪಾರ್ಕ್ ಸ್ಥಾಪನೆಯ ಉದ್ದೇಶ ಏನು ; ಆಹಾರ ಪಾರ್ಕ್‌ಗಳಲ್ಲಿ ನಿಗಧಿತ ಉದ್ದೇಶ ಈಡೇರಿಸಲು ವಿಳಂಬವಾಗಿರುವುದಕ್ಕೆ ಕಾರಣವೇನು ;

(ಇ) ವಿವಿಧ ಇಲಾಖೆಗಳ ಮಧ್ಯೆ ಸಮನ್ವಯ ಕೊರತೆಯಿಂದ ಈ ಪಾರ್ಕ್‌ಗಳ ಅಭಿವೃದ್ಧಿ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಇದನ್ನು ಬಗೆಹರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

## ಕೃಷಿ ಹೊಂಡ ಸ್ಥಗಿತಗೊಂಡಿರುವ ಬಗ್ಗೆ

**ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೩೩೦ (೪೧೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಹೊಂಡ ಯೋಜನೆ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದರಿಂದ ರೈತರು ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗೂ ಈ ಯೋಜನೆ ನಿಲ್ಲಿಸಲು ಕಾರಣಗಳೇನು ;

(ಇ) ಈ ಯೋಜನೆಯನ್ನು ಪುನಃ ಜಾರಿಗೊಳಿಸಲು ಸರ್ಕಾರ ಯೋಜಿಸಿದೆಯೇ ; ಹಾಗಿದ್ದಲ್ಲಿ, ಯಾವ ದಿನಾಂಕದಿಂದ ಈ ಯೋಜನೆ ಮತ್ತೆ ಜಾರಿಗೊಳ್ಳಲಿದೆ ? (ಮಾಹಿತಿ ನೀಡುವುದು)

## ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಕುರಿತು

**ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೩೩೧ (೪೧೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಮಾಜ ಕಲ್ಯಾಣ ಮತ್ತು ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಇದರಲ್ಲಿ ಖಾಯಂ ಸಿಬ್ಬಂದಿ, ಹೊರಮೂಲ ಸಿಬ್ಬಂದಿ ಹಾಗೂ ಜಿಲ್ಲಾ ಪಂಚಾಯತ್‌ಗಳಿಂದ ನೇಮಕವಾದ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವಿವರಗಳನ್ನು ನೀಡುವುದು)

(ಇ) ಖಾಯಂ ಸಿಬ್ಬಂದಿಗೆ ಸರ್ಕಾರ ಸವಲತ್ತು ನೀಡುವಿಕೆಯಲ್ಲಿ ಇಲಾಖೆ ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಈ ಸಮಸ್ಯೆಯನ್ನು ಪರಿಹರಿಸಲಾಗುವುದು ?

## ಸ್ಫೂರ್ತಿ ಭವನ ನಿರ್ಮಾಣದ ಬಗ್ಗೆ

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೨ (೪೬೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಮಾಜ ಕಲ್ಯಾಣ ಮತ್ತು ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಡಾ: ಬಿ.ಆರ್. ಅಂಬೇಡ್ಕರ್ ಅವರ ಸ್ಮರಣಾರ್ಥ ದೆಹಲಿಯಲ್ಲಿರುವ ಮಾದರಿಯಲ್ಲಿ ಸ್ಫೂರ್ತಿ ಭವನ ನಿರ್ಮಿಸಲು ಹಿಂದಿನ ಸರ್ಕಾರದ ಅವಧಿಯಲ್ಲಿ ರೂ. ೨೫.೦೦ ಕೋಟಿ ಅನುದಾನ ಮಂಜೂರು ಆಗಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ;

(ಆ) ಸದರಿ ಭವನ ನಿರ್ಮಿಸಲು ಎ.ಜಿ. ಕಛೇರಿ ಬಳಿ ನಿವೇಶನ ಮಂಜೂರು ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಕಟ್ಟಡ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗಿದೆಯೇ ? (ಮಾಹಿತಿ ನೀಡುವುದು)

## ಪ್ರವಾಹ ಕಾಮಗಾರಿಗಳಿಗೆ ೪ ಜಿ ವಿನಾಯಿತಿಯನ್ನು ನೀಡಿರುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೩ (೪೫೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರವಾಹದ ಜಿಲ್ಲೆಗಳಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲು ಲೋಕೋಪಯೋಗಿ ಇಲಾಖೆಯಿಂದ ೪ಜಿ ವಿನಾಯಿತಿ ನೀಡಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಎಷ್ಟು ಕಾಮಗಾರಿಗಳಿಗೆ ೪ಜಿ ವಿನಾಯಿತಿ ನೀಡಲಾಗಿದೆ ; ಇದರ ಮೊತ್ತವೆಷ್ಟು ;

(ಇ) ೪ಜಿ ವಿನಾಯಿತಿ ನೀಡಿದ ಕಾಮಗಾರಿಗಳು ಸಂಪೂರ್ಣವಾಗಿವೆಯೇ ; ಇಲ್ಲದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು ?

## ರಾಜ್ಯದ ಹೆದ್ದಾರಿಗಳಲ್ಲಿ ಮತ್ತು ಜಿಲ್ಲಾ ಮುಖ್ಯ ರಸ್ತೆಗಳಲ್ಲಿ ಗುಂಡಿಗಳನ್ನು ಮುಚ್ಚದ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೪ (೪೫೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ಸಾಲಿನಲ್ಲಿ ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯ ರಸ್ತೆಗಳ ಗುಂಡಿಗಳನ್ನು ಮುಚ್ಚಲು ಬಿಡುಗಡೆಯಾಗಿರುವ ಅನುದಾನವೆಷ್ಟು ;

(ಆ) ಇಲ್ಲಿಯವರೆವಿಗೂ ಎಷ್ಟು ಕಿಲೋ ಮೀಟರ್ ಗುಂಡಿಗಳನ್ನು ಮುಚ್ಚಲಾಗಿದೆ ; ರಸ್ತೆ ಗುಂಡಿ ಮುಚ್ಚಲು ಕಾಲಾವಧಿಯನ್ನು ನಿಗದಿಪಡಿಸಲಾಗಿದೆಯೇ ;

(ಇ) ನಿಗದಿತ ಕಾಲಾವಧಿಯಲ್ಲಿ ಗುಂಡಿ ಮುಚ್ಚಲು ಸಾಧ್ಯವಾಗದಿದ್ದರೆ, ಈ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮವೇನು ?

## ಕೆ.ಆರ್. ಪುರಂ ವಿಧಾನಸಭೆ ಕ್ಷೇತ್ರದಲ್ಲಿನ ನಿವೇಶನ ಮನೆಗಳ ಅವ್ಯವಹಾರದ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೫ (೪೦೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್. ಪುರಂ ವಿಧಾನಸಭಾ ಕ್ಷೇತ್ರದ ಮಹದೇವಪುರ ಸರ್ವೆ ನಂ. ೧೮೭ ಸರ್ಕಾರಿ ಜಮೀನಿನಲ್ಲಿ ಸ್ಥಳೀಯ ನಗರ ಪಾಲಿಕೆ ಸದಸ್ಯರು ಮತ್ತು ಇನ್ನಿತರರು ನಿವೇಶನಗಳನ್ನು ಮತ್ತು ಮನೆಗಳನ್ನು ಬೇಕಾದವರಿಗೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಕುರಿತು ಸಾಕ್ಷಿ ಸಮೇತ ಹಲವು ಬಾರಿ ದೂರು ನೀಡಿದ್ದರೂ ಕ್ರಮ ಕೈಗೊಂಡಿರುವುದಿಲ್ಲವೇ ; (ವಿವರ ನೀಡುವುದು)

(ಇ) ಇಲಾಖೆಯವರು ಶಾಮೀಲಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದು, ಈ ಬಗ್ಗೆ ಸೂಕ್ತ ತನಿಖೆ ಮಾಡಲಾಗಿದೆಯೇ ;

(ಈ) ಸರ್ಕಾರಿ ಜಾಗಗಳನ್ನು ಈ ರೀತಿ ರಾಜರೋಷವಾಗಿ ಮಾರಾಟ ಮಾಡುತ್ತಿದ್ದರೂ ಕ್ರಮಕೈಗೊಳ್ಳದೆ ಇರಲು ಕಾರಣವೇನು ?

## ಭೂ ಮಾಫಿಯಾಗೆ ಕಡಿವಾಣ ಹಾಕುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೬ (೪೦೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಸುತ್ತಮುತ್ತ ಹಸಿರು ವಲಯದಲ್ಲಿರುವ ಜಮೀನುಗಳನ್ನು ಭೂಪರಿವರ್ತನೆ ಮಾಡದೆ ಬಡಾವಣೆಗಳಾಗಿ ಪರಿವರ್ತನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ ;

(ಇ) ಈ ರೀತಿ ಅನಧಿಕೃತ ಬಡಾವಣೆಗಳನ್ನು ಮಾಡುವುದರಿಂದ ಸರ್ಕಾರಕ್ಕೆ ಆಗುವ ನಷ್ಟ ಎಷ್ಟು ;

(ಈ) ಭೂ ಪರಿವರ್ತನೆ ಆಗದೆ ಸಬ್ ರಿಜಿಸ್ಟ್ರಾರ್ ಕಛೇರಿಗಳಲ್ಲಿ ನಿವೇಶನಗಳನ್ನು ನೋಂದಣಿ ಮಾಡುತ್ತಿರುವವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಉ) ಈ ರೀತಿಯ ಅನಧಿಕೃತ ಬಡಾವಣೆಗಳನ್ನು ನಿರ್ಮಾಣ ಮಾಡುತ್ತಿರುವ ಭೂ ಮಾಫಿಯಾಗೆ ಕಡಿವಾಣ ಹಾಕಲು ಸರ್ಕಾರ ಏನಾದರೂ ಕ್ರಮ ಕೈಗೊಂಡಿದೆಯೇ ?

## ಹೊಸದಾಗಿ ರಚನೆಯಾಗಿರುವ ತಾಲ್ಲೂಕುಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೩೩೭ (೩೨೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಹೊಸದಾಗಿ ರಚನೆಯಾಗಿರುವ ತಾಲ್ಲೂಕುಗಳ ವಿವರ ನೀಡುವುದು ;

(ಆ) ಹೊಸ ತಾಲ್ಲೂಕುಗಳಿಗೆ ವಿವಿಧ ಇಲಾಖೆಗಳಿಂದ ಅಭಿವೃದ್ಧಿಗಾಗಿ ನೀಡಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಇ) ಹೊಸ ತಾಲ್ಲೂಕನ್ನಾಗಿ ಘೋಷಣೆ ಮಾಡಿದ್ದರೂ, ತಾಲ್ಲೂಕು ಕಛೇರಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹೊಸ ತಾಲ್ಲೂಕಿನಲ್ಲಿ ತಾಲ್ಲೂಕು ಕಛೇರಿಗೆ ಕಟ್ಟಡವನ್ನು ನಿರ್ಮಿಸಲು ಸರ್ಕಾರಕ್ಕಿರುವ ತೊಂದರೆಗಳೇನು ? (ವಿವರ ನೀಡುವುದು)

## ವಿಜಯಪುರ ಜಿಲ್ಲೆಯಲ್ಲಿ ಮುಜರಾಯಿ ಇಲಾಖೆಗೆ ಒಳಪಟ್ಟಿರುವ ದೇವಸ್ಥಾನಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೩೩೮ (೩೩೦) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಜಿಲ್ಲೆಯಲ್ಲಿ ಮುಜರಾಯಿ ಇಲಾಖೆಗೆ ಒಳಪಟ್ಟಿರುವ ದೇವಸ್ಥಾನಗಳ ಸಂಖ್ಯೆ ಎಷ್ಟು ; ಅಲ್ಲಿ ಯಾವ ಯಾವ ವರ್ಗಗಳ ದೇವಸ್ಥಾನಗಳಿವೆ ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಿಂದ ಎಷ್ಟು ಅನುದಾನ ಬಿಡುಗಡೆ ಮಾಡಿ ಸರ್ಕಾರ ಅಭಿವೃದ್ಧಿ ಕಾರ್ಯ ಕೈಗೊಂಡಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಕೃಷಿ ಇಲಾಖೆಯಿಂದ ರೈತರಿಗೆ ಸಿಗುವ ಉಪಕರಣಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೩೩೯ (೩೨೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ವಿಜಯಪುರ ಜಿಲ್ಲೆಯಲ್ಲಿ ಕೃಷಿ ಇಲಾಖೆಯಿಂದ ರೈತರಿಗೆ ಯಾವ ಯಾವ ಕೃಷಿ ಉಪಕರಣಗಳನ್ನು ನೀಡಲಾಗಿದೆ ; (ವಿವರ ನೀಡುವುದು)

(ಆ) ರೈತರಿಗೆ ಕೃಷಿ ಇಲಾಖೆಯಿಂದ ಯಾವ ಯಾವ ಸೌಲಭ್ಯವನ್ನು ನೀಡಲಾಗುತ್ತಿದೆ ? (ವಿವರ ನೀಡುವುದು)

## ವಿಜಯಪುರ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಿಂದ ಕೈಗೊಂಡ ಕಾಮಗಾರಿಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೩೪೦ (೩೩೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ವಿಜಯಪುರ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆಯೇ ; (ವಿವರ ನೀಡುವುದು)

(ಆ) ವಿಜಯಪುರ ಜಿಲ್ಲೆಯಲ್ಲಿ ರಸ್ತೆಯು ಸಂಪೂರ್ಣ ಹಾಳಾಗಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ರಸ್ತೆಯನ್ನು ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೩೪೧ (೩೩೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ ಮತ್ತು ೨೦೧೯–೨೦ನೇ ಸಾಲಿನಲ್ಲಿ ವಿಜಯಪುರ ಜಿಲ್ಲೆಯಲ್ಲಿ ರೈತರಿಗೆ ಪ್ರಧಾನಮಂತ್ರಿ ಫಸಲ್ ಭೀಮ ಯೋಜನೆಯಡಿಯಲ್ಲಿ ಬಂದಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಇಲ್ಲಿಯವರೆಗೆ ರೈತರಿಗೆ ಕೊಟ್ಟ ಹಣವೆಷ್ಟು ; (ಯೋಜನೆವಾರು ವಿವರ ನೀಡುವುದು)

(ಇ) ಈ ಯೋಜನೆಯಿಂದ ಖಾಸಗಿ ಕಂಪನಿಗಳು ಲಾಭವನ್ನು ಮಾಡಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ರೈತರಿಗೆ ಅನುಕೂಲ ಮಾಡಿಕೊಳ್ಳಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕಿನಲ್ಲಿ ಕಳೆದ ಮೂರು ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೪೨ (೩೨೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕಿನಲ್ಲಿ ಕಳೆದ ಮೂರು ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳಿಗೆ ಮಂಜೂರಾದ ಹಣವೆಷ್ಟು ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಕಾಮಗಾರಿಗಳನ್ನು ಪಡೆದಿರುವ ಗುತ್ತಿಗೆದಾರರು/ಏಜೆನ್ಸಿಗಳ ವಿವರ ನೀಡುವುದು ; ಈ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿದೆ ; ಈ ಕಾಮಗಾರಿಗಳಿಗಾಗಿ ಇದುವರೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಯ ಕಾಮಗಾರಿಗಳು ಕಳಪೆ ಗುಣಮಟ್ಟ ಹೊಂದಿದೆಯೆಂದು ಸಾರ್ವಜನಿಕರಿಂದ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಕಾಮಗಾರಿಗಳನ್ನು ನಿರ್ವಹಿಸುವ ಗುತ್ತಿಗೆದಾರರು/ಏಜೆನ್ಸಿಗಳು ಮತ್ತು ಕಾಮಗಾರಿಗಳ ಮೇಲ್ವಿಚಾರಣೆ ವಹಿಸಿರುವ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಕಂದಾಯ ಇಲಾಖೆಗೆ ಮಂಜೂರಾದ ಹುದ್ದೆಗಳ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೪೩ (೩೨೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಜಿಲ್ಲೆ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕಿನಲ್ಲಿ ಕಂದಾಯ ಇಲಾಖೆಗೆ ಮಂಜೂರಾದ

ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; (ಅಧಿಕಾರಿ/ನೌಕರರ ಸಂಖ್ಯೆ ವೃಂದವಾರು/ತಾಲ್ಲೂಕುವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಆ) ಮಂಜೂರಾದ ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ; ಹಾಗೂ ಈ ಹುದ್ದೆಗಳು ಎಷ್ಟು ವರ್ಷಗಳಿಂದ ಖಾಲಿ ಇದೆ ;

(ಇ) ನೌಕರರಿಲ್ಲದೇ ಸಾರ್ವಜನಿಕರ ಕೆಲಸಗಳು ಹೆಚ್ಚು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಜಿಲ್ಲೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಇಲ್ಲಿಯವರಿಗೆ ತೆಗೆದುಕೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಮಳೆಯಿಂದ ಆಗಿರುವ ಹಾನಿ ಹಾಗೂ ಪರಿಹಾರದ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೪೪ (೩೩೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ೨೦೧೯ನೇ ಸಾಲಿನ ಜುಲೈ ಮತ್ತು ಆಗಸ್ಟ್ ತಿಂಗಳಿನಲ್ಲಿ ಸುರಿದ ಭಾರಿ ಮಳೆಯಿಂದ ಜಿಲ್ಲೆಯಲ್ಲಿ ಉಂಟಾಗಿರುವ ಭೂ ಕುಸಿತ, ರಸ್ತೆ ಹಾನಿ, ಬೆಳೆಹಾನಿ ಮತ್ತು ಮನೆಹಾನಿ ಪ್ರಕರಣಗಳೆಷ್ಟು ; ಈ ಪ್ರಕರಣಗಳಿಂದ ಉಂಟಾಗಿರುವ ನಷ್ಟದ ಅಂದಾಜು ಮೊತ್ತವೆಷ್ಟು ; (ಪ್ರಕರಣವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಆ) ಆಸ್ತಿ ಹಾನಿ, ಬೆಳೆ ಹಾನಿ, ಪ್ರಾಣ ಹಾನಿಯಿಂದ ಉಂಟಾಗಿರುವ ನಷ್ಟಗಳನ್ನು ಸಂತ್ರಸ್ತರಿಗೆ ಭರಿಸಲು ಸರ್ಕಾರ ನಿಗಧಿ ಪಡಿಸಿದ ಪರಿಹಾರದ ಮೊತ್ತವೆಷ್ಟು ;

(ಇ) ಶಿವಮೊಗ್ಗ ಜಿಲ್ಲೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಈ ನೆರೆ ಸಂತ್ರಸ್ತರಿಗೆ ಇದುವರೆಗೆ ನೀಡಿದ ಪರಿಹಾರದ ಹಣವೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಎಲ್ಲಾ ಗ್ರಾಮಗಳಿಗೆ ಸಾರ್ವಜನಿಕ ಸ್ಮಶಾನ ಜಾಗ ಒದಗಿಸುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೪೫ (೩೩೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳ ಎಲ್ಲಾ ಗ್ರಾಮಗಳಲ್ಲಿ ಸಾರ್ವಜನಿಕ ಸ್ಮಶಾನ ಮಂಜೂರು ಆಗಿದೆಯೇ ; ಇಲ್ಲದಿದ್ದಲ್ಲಿ, ಸ್ಮಶಾನಕ್ಕೆ ಜಾಗವನ್ನು ಕಾಯ್ದಿರಿಸಿರುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಆ) ಕೆಲವು ಗ್ರಾಮ ಪಂಚಾಯಿತಿಗಳಲ್ಲಿ ಸಾರ್ವಜನಿಕ ಸ್ಮಶಾನ ಮಂಜೂರಾಗಿದ್ದು, ಸ್ಮಶಾನ ಜಾಗ ಗುರುತಿಸಲು ಸರ್ಕಾರಕ್ಕಿರುವ ಅಡೆತಡೆಗಳೇನು ;

(ಇ) ಸ್ಮಶಾನಗಳಿಗೆ ರಸ್ತೆ, ನೀರು, ದೀಪದ ವ್ಯವಸ್ಥೆ ಮತ್ತು ಕಾಂಪೌಂಡ್ ವ್ಯವಸ್ಥೆಗಳನ್ನು ಕಲ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಶಿವಮೊಗ್ಗ ನಗರದಲ್ಲಿರುವ ಸ್ಮಶಾನಗಳ ಸಂಖ್ಯೆ ಎಷ್ಟು ; ಇವುಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ; ಸ್ಮಶಾನಗಳು ಭರ್ತಿಯಾಗಿರುವುದರಿಂದ ಸರ್ಕಾರ ಬೇರೆ ಜಾಗ ಗುರುತಿಸಿದೆಯೇ ?

## ಮಾಶಾಸನ ವಿಳಂಬದ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೪೬ (೩೯೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅಂಗವಿಕಲರಿಗೆ, ಹಿರಿಯ ನಾಗರಿಕರಿಗೆ, ವಿಧವೆಯರಿಗೆ ಮಾಸಾಶನವನ್ನು ಕಳೆದ ೮ ತಿಂಗಳಿಂದ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಮಾಸಾಶನ ಪಡೆಯುತ್ತಿರುವ ಹಿರಿಯ ನಾಗರಿಕರು, ಅಂಗವಿಕಲರು, ವಿಧವೆಯರ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಲೋಕೋಪಯೋಗಿ ಇಲಾಖೆಗೆ ನೀಡಿರುವ ಅನುದಾನದ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೪೭ (೪೪೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೯-೨೦೨೦ರ ಆಯುವ್ಯಯದಲ್ಲಿ ವಿವಿಧ ಲೆಕ್ಕಶೀರ್ಷಿಕೆಯಡಿಯಲ್ಲಿ ಲೋಕೋಪಯೋಗಿ ಇಲಾಖೆಗೆ ಒದಗಿಸಿರುವ ಅನುದಾನವೆಷ್ಟು ; (ವಿಧಾನಸಭಾ ಕ್ಷೇತ್ರವಾರು ಹಂಚಿಕೆ ಮಾಡಿರುವ ಬಗ್ಗೆ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಸದರಿ ಅನುದಾನದಲ್ಲಿ ಬೀದರ್ ಜಿಲ್ಲೆಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಮತ್ತು ರಸ್ತೆಗಳನ್ನು ನಿರ್ಮಿಸಲಾಗಿದೆ ; (ಕಾಮಗಾರಿವಾರು, ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಬಿಡುಗಡೆಯಾದ ಅನುದಾನದಿಂದ ಕಟ್ಟಡ ಕಾಮಗಾರಿಗಳು, ರಸ್ತೆ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆಯೇ ; ಪೂರ್ಣಗೊಳಿಸದಿದ್ದಲ್ಲಿ, ಯಾವಾಗ ಪೂರ್ಣಗೊಳಿಸಲಾಗುವುದು ; (ವಿವರ ನೀಡುವುದು)

(ಈ) ಬೀದರ್ ಜಿಲ್ಲೆಗೆ ವಿವಿಧ ಲೆಕ್ಕಶೀರ್ಷಿಕೆಯಡಿ ನೀಡಿದ್ದ ಅನುದಾನದಲ್ಲಿ ೨೦೧೯-೨೦೨೦ರ ಆಗಸ್ಟ್ ಅಂತ್ಯಕ್ಕೆ ಉಳಿದಿರುವ ಹಣವೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿರುವ ಹೌಸಿಂಗ್ ಬೋರ್ಡ್ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೩೪೮ (೪೪೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯಲ್ಲಿರುವ ಆಶ್ರಯ ಕಾಲೋನಿಗಳಲ್ಲಿ ಹಾಗೂ ಸ್ಥಳಾಂತರ ಗ್ರಾಮಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಬೀದರ್ ಜಿಲ್ಲೆಯಲ್ಲಿ (ತಾಲ್ಲೂಕುಗಳಲ್ಲಿ) ಹೌಸಿಂಗ್ ಬೋರ್ಡ್‌ನಿಂದ ನಿರ್ಮಾಣಗೊಂಡಿರುವ ಮನೆಗಳು ಎಷ್ಟು ; ಹಂಚಿಕೆಯಾದ ಮನೆಗಳು ಎಷ್ಟು ; ನಿರ್ಮಾಣ ಮಾಡಿರುವ ಮನೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿನ ಕೃಷಿ ಮತ್ತು ಕೃಷಿಕರ ಸಮಸ್ಯೆಗಳ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೪೯ (೩೯೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋವಿಡ್ ಕಾರಣದಿಂದ ಕುಂಠಿತಗೊಂಡಿರುವ ರಾಜ್ಯದ ಕೃಷಿ ಮತ್ತು ಕೃಷಿಕರ ಸಂಕಷ್ಟಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಪರಿಹಾರ ಕ್ರಮಗಳನ್ನು ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಆ) ರಾಜ್ಯದ ರೈತರ ಕ್ಷೇಮಾಭಿವೃದ್ಧಿ ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳ ಕೃಷಿ ಮಾರುಕಟ್ಟೆ ಸುಧಾರಣೆಗೆ ಸರ್ಕಾರ ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ ; (ವಿವರ ನೀಡುವುದು)

(ಇ) ರಾಜ್ಯದಾದ್ಯಂತ ಕೃಷಿಯಿಲ್ಲದೇ ಹಾಳುಬಿದ್ದ ವ್ಯವಸಾಯ ಭೂಮಿಗಳ ಪುನರಾಭಿವೃದ್ಧಿಗೆ ಸರ್ಕಾರ ಯಾವ ಯಾವ ವಿನೂತನ ಯೋಜನೆ ಹಮ್ಮಿಕೊಳ್ಳಲಿದೆ ; (ವಿವರ ನೀಡುವುದು)

(ಈ) ಕೋವಿಡ್ ಕಾರಣದಿಂದ ಪದವೀಧರ ಯುವಕರು ಮತ್ತೆ ಕೃಷಿಯತ್ತ ಮುಖ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಯುವಕರಿಗೆ ಸೂಕ್ತ ಮಾರ್ಗದರ್ಶನ ನೀಡಲು ಸರ್ಕಾರದ ಯಾವ ತರಬೇತಿ ಕಾರ್ಯಕ್ರಮ ರೂಪಿಸಲಿದೆ ?

## ಕಳೆದ ೨ ವರ್ಷಗಳಿಂದ ಸಮಾಜ ಕಲ್ಯಾಣ ಇಲಾಖೆಗೆ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೫೦ (೩೯೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಾದ್ಯಂತ ಕಳೆದೆರಡು ವರ್ಷಗಳಿಂದ ಸಮಾಜ ಕಲ್ಯಾಣ ಇಲಾಖೆಯಡಿ ನಡೆಸಲಾದ ಕಾರ್ಯಕ್ರಮಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ಹಾಗೂ ಖರ್ಚಾದ ಹಣವೆಷ್ಟು ; (ಮಾಹಿತಿ ನೀಡುವುದು)

(ಆ) ಇಲಾಖೆಯಿಂದ ಗ್ರಾಮೀಣ ಭಾಗದ ಯುವಕ ಯುವತಿಯರಿಗೆ ವಿಶೇಷ ಯೋಜನೆಗಳು ಮತ್ತು ರಚನಾತ್ಮಕ ಕಾರ್ಯಕ್ರಮಗಳ ಬಗ್ಗೆ ತರಬೇತಿ ನೀಡಲಾಗುತ್ತಿದೆಯೇ ;

(ಇ) ಸಮಾಜ ಕಲ್ಯಾಣ ಇಲಾಖೆಯ ಕೆಲವು ಕಾರ್ಯಕ್ರಮಗಳು ಜಿಲ್ಲೆಗಳಲ್ಲಿ ಅತ್ಯಂತ ನಿಷ್ಕ್ರಿಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಕೋವಿಡ್ ನಂತರದ ದಿನಗಳಲ್ಲಿ ಸಾಮಜಿಕ ಅಭಿವೃದ್ಧಿಗೆ ಯಾವ ಹೊಸ ಯೋಜನೆಗಳನ್ನು ರೂಪಿಸಲಾಗುವುದು ? (ವಿವರ ನೀಡುವುದು)

## ಮುಜರಾಯಿ ದೇವಸ್ಥಾನಗಳ ಅರ್ಚಕರುಗಳ ಜೀವನ ನಿರ್ವಹಣೆ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೫೧ (೩೮೮) ಮಾನ್ಯ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಲಾಕ್‌ಡೌನ್ ಕಾಲದಲ್ಲಿ ಮುಚ್ಚಲ್ಪಟ್ಟ ದೇವಸ್ಥಾನದ ಅರ್ಚಕರುಗಳ ಜೀವನ ನಿರ್ವಹಣೆಗೆ ತೀವ್ರ ಕಷ್ಟ ಪಟ್ಟಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಏನು ಕ್ರಮ ಕೈಗೊಂಡಿದೆ ;

(ಆ) ಅರ್ಚಕರ ಜೀವನೋಪಾಯಕ್ಕೆ ಶಾಶ್ವತ ಪರಿಹಾರಕ್ಕೆ ಸರ್ಕಾರದ ಯೋಜನೆಗಳಾವುವು ;

(ಇ) ಕಳೆದರೆಡು ವರ್ಷಗಳಿಂದ ಅನುದಾನ ಬಿಡುಗಡೆಯಾಗಿ ಜೀರ್ಣೋದ್ಧಾರಗೊಳ್ಳದೇ ಉಳಿದಿರುವ ದೇವಾಲಯಗಳ ಸಂಖ್ಯೆಯೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ದೇವಾಲಯಗಳ ಹುಂಡಿ ಹಣವನ್ನು ಬಳಸಿಕೊಂಡು ಎಷ್ಟು ಸಾಮೂಹಿಕ ವಿವಾಹಗಳಾಗಿವೆ ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದ ವಸತಿ ಯೋಜನೆಗಳಿಗೆ ಮೀಸಲಿಟ್ಟ ಅನುದಾನ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೫೨ (೩೮೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಿಂದ ರಾಜ್ಯದ ವಸತಿ ಯೋಜನೆಗಳಿಗೆ ಮೀಸಲಿಟ್ಟ ಅನುದಾನವೆಷ್ಟು ; ಖರ್ಚಾದ ಹಣವೆಷ್ಟು ; (ಅಂಕಿ ಅಂಶ ಸಹಿತ ಮಾಹಿತಿ ನೀಡುವುದು)

(ಆ) ಯಾವ ಯಾವ ಯೋಜನೆಗಳಿಗೆ ಅನುದಾನ ಬಳಕೆಯಾಗಿದೆ ; ಬಿಡುಗಡೆಯಾಗಿರುವ ಅನುದಾನದಲ್ಲಿ ಈವರೆಗೂ ವಸತಿ ಗೃಹಗಳು ನಿರ್ಮಾಣವಾಗದೇ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಕಾರಣವೇನು ; ವಸತಿ ಇಲಾಖೆಯ ವಿವಿಧ ಯೋಜನೆಗಳಲ್ಲಿ ಹಂಚಿಕೆಯಾದ ಮನೆಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಪೋಡಿ ಕಾರ್ಯ ಬಾಕಿ ಉಳಿದಿರುವ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೫೩ (೩೯೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಿಂದ ರೈತರ ಎಷ್ಟು ಪೋಡಿ ಕಾರ್ಯ ಬಾಕಿ ಉಳಿದಿವೆ ; (ಅಂಕಿ – ಅಂಶ ಸಹಿತ ಮಾಹಿತಿ ನೀಡುವುದು)

(ಆ) ಹಿಂದೆ ಕಂದಾಯ ಇಲಾಖೆ ಹಮ್ಮಿಕೊಂಡಿದ್ದ ಪೋಡಿ ಮೇಳದ ಫಲಿತಾಂಶವೇನು ; ಪೋಡಿ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ;

(ಇ) ರಾಜ್ಯದಲ್ಲಿ ಈವರೆಗೆ ಎಷ್ಟು ಬಗರ್ ಹುಕುಂ ಅರ್ಜಿಗಳು ವಿಲೇವಾರಿಯಾಗಿವೆ ; ಎಷ್ಟು ಅರ್ಜಿಗಳು ಬಾಕಿ ಉಳಿದಿವೆ ; ಯಾವ ಕಾರಣಕ್ಕೆ ಬಾಕಿ ಉಳಿಸಿಕೊಳ್ಳಲಾಗಿದೆ ;

(ಈ) ಬಗರ್ ಹುಕುಂ ಅರ್ಜಿಗಳ ವಿಲೇವಾರಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ತಾಲ್ಲೂಕುವಾರು ಬಗರ್ ಹುಕುಂ ಅರ್ಜಿ ವಿಲೇವಾರಿ ಮತ್ತು ಬಾಕಿ ಉಳಿದ ಅರ್ಜಿಗಳ ವಿವರ ನೀಡುವುದು)

## ಮಾಗಡಿ ರಸ್ತೆಯನ್ನು ಮೇಲ್ದರ್ಜೆಗೇರಿಸುವ ಕಾಮಗಾರಿ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೩೫೪ (೪೩೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾಗಡಿ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿಯಾಗಿ ಮೇಲ್ದರ್ಜೆಗೇರಿಸುವ ಮತ್ತು ಪರಿವರ್ತಿಸುವ ಕಾಮಗಾರಿಯನ್ನು ಕೆಶಿಪ್ (K Ship) ಯೋಜನೆಯಡಿಯಲ್ಲಿ ಕೈಗೆತ್ತಿಕೊಳ್ಳಲಾಗಿದೆಯೇ ; (ಈ ಕಾಮಗಾರಿಯ ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಕಾಮಗಾರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಯಾವುದಾದರೂ ಸಂಸ್ಥೆಗಳಿಗೆ ನೀಡಲಾಗಿದೆಯೇ ; ನೀಡಿದ್ದಲ್ಲಿ, ಯಾವ ದಿನಾಂಕದಿಂದ ನೀಡಲಾಗಿದೆ ; (ವಿವರ ನೀಡುವುದು)

(ಇ) ಪ್ರಸ್ತುತ ಕಾಮಗಾರಿಯ ಸ್ಥಿತಿಗತಿಗಳ/ಪ್ರಗತಿಯ ವಿವರ ನೀಡುವುದು;

(ಈ) ಈ ರಸ್ತೆಯನ್ನು ಅಗಲೀಕರಣ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ, ಅಗತ್ಯ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆಯೇ ; (ವಿವರ ನೀಡುವುದು)

(ಉ) ಭೂ ಸ್ವಾಧೀನ ಪಡೆಸಿಕೊಂಡಿದ್ದಲ್ಲಿ, ಎಷ್ಟು ಭೂ ಮಾಲೀಕರಿಗೆ ಭೂ ಸ್ವಾಧೀನ ಪರಿಹಾರ ಧನ ನೀಡಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಅತಿವೃಷ್ಠಿಯಿಂದ ಆದ ನಷ್ಟಕ್ಕೆ ಪರಿಹಾರ ನೀಡದಿರುವ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೩೫೫ (೪೩೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ಅತಿವೃಷ್ಠಿಯಿಂದ ಆದ ನಷ್ಟದ ಮೊತ್ತ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು)

(ಆ) ನಷ್ಟದ ಮಾಹಿತಿಯನ್ನು ಪರಿಹಾರಕ್ಕಾಗಿ ಕೇಂದ್ರ ಸರ್ಕಾರದ ಜೊತೆಗೆ ಹಂಚಿಕೊಳ್ಳಲಾಗಿದೆಯೇ ; ಈ ಮೂರು ವರ್ಷಗಳಲ್ಲಿ ಕೇಂದ್ರ ಸರ್ಕಾರದ ವತಿಯಿಂದ ನಷ್ಟ ಪರಿಹಾರವಾಗಿ ಎಷ್ಟು ಮೊತ್ತವನ್ನು ಬಿಡುಗಡೆಗೊಳಿಸಲಾಗಿದೆ ; ಮತ್ತು ಎಷ್ಟು ಮೊತ್ತವನ್ನು ವಿತರಿಸಲಾಗಿದೆ ಅಥವಾ ವಿನಿಯೋಗಿಸಲಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು)

(ಇ) ಕೇಂದ್ರ ಸರ್ಕಾರದ ವತಿಯಿಂದ ಪರಿಹಾರ ಧನವಾಗಿ ಎಷ್ಟು ಮೊತ್ತ ಬಾಕಿ ಬರಬೇಕಿದೆ ; ಮತ್ತು ಸರ್ಕಾರದ ಕ್ರಮವೇನು ; (ಮಾಹಿತಿ ನೀಡುವುದು)

(ಈ) ಎಷ್ಟು ಜನರಿಗೆ ನಷ್ಟ ಪರಿಹಾರವನ್ನು ವಿತರಿಸಲಾಗಿದೆ ; ವಿತರಿಸಲು ಎಷ್ಟು ಬಾಕಿ ಇದೆ ? (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು)

## ವಸತಿ ಯೋಜನೆಗಳ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೩೫೬ (೪೨೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಸತಿ ನಿರಾಶ್ರಿತರಿಗಾಗಿ ವಸತಿ ಕಲ್ಪಿಸಲು ಎಷ್ಟು ಯೋಜನೆ ಚಾಲ್ತಿಯಲ್ಲಿವೆ ; (ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಿಂದ ವಸತಿ ನಿರಾಶ್ರಿತರನ್ನು ಗುರುತಿಸಲು ಯಾವುದಾದರು ಸಮೀಕ್ಷೆ ನಡೆಸಲಾಗಿದೆಯೇ ; (ಮಾಹಿತಿ ನೀಡುವುದು)

(ಇ) ವಸತಿ ಯೋಜನೆಗಳಲ್ಲಿ ಹಲವು ಗ್ರಾಮಗಳಿಗೆ ನೀಡಿದ ಮೀಸಲಾತಿಯ ಗುರಿ ತಲುಪದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು, ಮೀಸಲಾತಿವಾರು ಮಾಹಿತಿ ನೀಡುವುದು)

(ಈ) ಗುರುತಿಸದ ಗ್ರಾಮಗಳಿಗೆ ಮರಳಿ ಅದೇ ಗುರಿಗಳನ್ನು ನೀಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಉ) ಕೆಲವೊಂದು ಜಿಲ್ಲೆಗಳಲ್ಲಿ ಒಂದೇ ಕುಟುಂಬವು ಹಲವು ವಸತಿ ಯೋಜನೆಗಳ ಫಲಾನುಭಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಊ) ಒಂದೇ ಕುಟುಂಬಕ್ಕೆ ಹಲವು ಯೋಜನೆಗಳಿಂದ ಮನೆ ಹಂಚಿಕೆಯಾಗುವುದನ್ನು ತಡೆಯಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಉತ್ತರ ಕರ್ನಾಟಕ ಬೆಳಗಾವಿ ಜಿಲ್ಲೆಯಲ್ಲಿ ಕಳಪೆ ಬೀಜ ವಿತರಣೆ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೩೫೭ (೪೨೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಬೆಳಗಾವಿ ಮತ್ತು ಇತರೆ ಜಿಲ್ಲೆಗಳಲ್ಲಿ ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರದ ಮುಖಾಂತರ ಪ್ರಸ್ತುತ ವರ್ಷದಲ್ಲಿ ಕಳಪೆ ಸೋಯಾಬಿನ್ ಬೀಜವನ್ನು ವಿತರಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಇ) ರೈತರಿಗೆ ಎಷ್ಟು ಕಳಪೆ ಸೋಯಾಬಿನ್ ಬೀಜವನ್ನು ವಿತರಿಸಲಾಗಿದೆ; (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು)

(ಈ) ಈ ಕಳಪೆ ಸೋಯಾಬಿನ್ ಬೆಳೆ ನಾಶವಾಗಿ ಕಂಗಾಲಾಗಿರುವ ರೈತರಿಗೆ ಸರ್ಕಾರದಿಂದ ಪರಿಹಾರ ನೀಡಲು ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಉ) ಭವಿಷ್ಯದಲ್ಲಿ ಈ ರೀತಿಯ ಕಳಪೆ ಬೀಜದ ವಿತರಣೆಯನ್ನು ತಡೆಯಲು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ದೇವನಹಳ್ಳಿ ತಾಲ್ಲೂಕಿನ ಬಗರ್‌ಹುಕುಂ ಸಾಗುವಳಿದಾರರ ಭೂಸ್ವಾಧೀನ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೩೫೮ (೪೨೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪಿಸಲು ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲ್ಲೂಕು, ದೇವನಹಳ್ಳಿ ಕಸಬಾ ಹೋಬಳಿ ಮತ್ತು ಇತರೆ ಗ್ರಾಮಗಳಲ್ಲಿ ಬರುವ ಬಗರ್‌ಹುಕುಂ ಸಾಗುವಳಿ ಜಮೀನುಗಳನ್ನು ವಶಪಡಿಸಿಕೊಂಡು ಉಪಯೋಗಿಸಲಾಗಿದೆಯೇ ;

(ಆ) ಹಾಗಿದ್ದರೆ, ಎಷ್ಟು ಪ್ರದೇಶದ (ಎಕರೆ) ಜಮೀನನ್ನು ವಶಪಡಿಸಿಕೊಳ್ಳಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ವಶಪಡಿಸಿಕೊಂಡ ಬಗರ್‌ಹುಕುಂ ಸಾಗುವಳಿ ಜಮೀನಿಗೆ ಭೂ ಸ್ವಾಧೀನ ಪರಿಹಾರ ನೀಡಲಾಗಿದೆಯೇ ; (ಮಾಹಿತಿ ನೀಡುವುದು)

(ಈ) ಸದರಿ ನಿಲ್ದಾಣದ ನಿರ್ಮಾಣಕ್ಕೆ ವಶಪಡಿಸಿಕೊಂಡ ಬಗರ್‌ಹುಕುಂ ಸಾಗುವಳಿದಾರರು ಕರ್ನಾಟಕ ಉಚ್ಚನ್ಯಾಯಾಲಯದ ಮೊರೆ ಹೋಗಿ ಸರ್ಕಾರದ ವಿರುದ್ಧ ಯಾವುದಾದರೂ ಆದೇಶಗಳನ್ನು ಪಡೆದಿರುತ್ತಾರೆಯೇ ; (ವಿವರವಾದ ಮಾಹಿತಿ ನೀಡುವುದು)

(ಉ) ಪಡೆದಿದ್ದಲ್ಲಿ, ಕಂದಾಯ ಇಲಾಖೆ ಅಥವಾ ಅನ್ಯ ಇಲಾಖೆಗಳಿಂದ ನ್ಯಾಯಾಲಯದ ಆದೇಶದ ಪ್ರಕಾರ ಇಲ್ಲಿಯವರೆಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಡಿಸಿ/ಎಸಿ ಕೋರ್ಟ್‌ನ ಮೊಕದ್ದಮೆಗಳ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೯ (೩೧೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಯ ಜಿಲ್ಲಾಧಿಕಾರಿಗಳು ಮತ್ತು ಉಪವಿಭಾಗಾಧಿಕಾರಿಗಳ ವ್ಯಾಪ್ತಿಯಲ್ಲಿ ಭೂಮಿ ವಿಚಾರವಾಗಿ ವಿಚಾರಣೆ ನಡೆಯುತ್ತಿರುವ ಮೊಕದ್ದಮೆಗಳ ಸಂಖ್ಯೆ ಎಷ್ಟು ; (ಮಾಹಿತಿ ಒದಗಿಸುವುದು)

(ಆ) ಕಳೆದ ೩ ವರ್ಷಗಳಿಂದಲೂ ವಿಚಾರಣೆ ನಡೆಯುತ್ತಿರುವ ಮೊಕದ್ದಮೆಗಳ ಸಂಖ್ಯೆ ಎಷ್ಟು ; (ಮಾಹಿತಿ ಒದಗಿಸುವುದು)

(ಇ) ಕಳೆದ ೩ ವರ್ಷಗಳಲ್ಲಿ ತೀರ್ಮಾನಗೊಂಡಿರುವ ಮೊಕದ್ದಮೆಗಳ ಸಂಖ್ಯೆ ಎಷ್ಟು ? (ಮಾಹಿತಿ ಒದಗಿಸುವುದು)

## ಮೀನುಗಾರರ ಯೋಜನೆಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೦ (೩೭೫) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯ನೇ ಸಾಲಿನಿಂದ ಇಲ್ಲಿಯವರೆಗೂ ರಾಜ್ಯದ ಮೀನುಗಾರರಿಗೆ ಎಷ್ಟು ಮನೆಗಳನ್ನು ವಿಧಾನಸಭಾ ಕ್ಷೇತ್ರವಾರು ಹಂಚಿಕೆ ಮಾಡಲಾಗಿದೆ ; ಇಲ್ಲವಾದಲ್ಲಿ, ಇದಕ್ಕೆ ಕಾರಣಗಳೇನು; ಈ ಮನೆಗಳಿಗೆ ಬಿಡುಗಡೆಯಾದ ಹಾಗೂ ಖರ್ಚಾದ ಮೊತ್ತ ಹಾಗೂ ಬಾಕಿ ಮೊತ್ತವೆಷ್ಟು ; (ವಿವರ ನೀಡುವುದು)

(ಆ) ೨೦೧೯ನೇ ಸಾಲಿನಲ್ಲಿ ಎನ್.ಎಫ್.ಡಿ.ಬಿ. ಯೋಜನೆಯಡಿ ಬಿಡುಗಡೆಯಾದ ಕೇಂದ್ರ ಹಾಗು ರಾಜ್ಯದ ಮೊತ್ತ ಎಷ್ಟು ; ಅದರಲ್ಲಿ ಖರ್ಚಾದ ಹಾಗೂ ಬಾಕಿ ಉಳಿದ ಮೊತ್ತದ ವಿವರ ನೀಡುವುದು ;

(ಇ) ೨೦೧೮, ೨೦೧೯ ಮತ್ತು ೨೦೨೦ನೇ ಸಾಲಿನಲ್ಲಿ ಏತ ನೀರಾವರಿ ಯೋಜನೆಯಡಿ ಬರುವ ಕೆರೆಗಳನ್ನು ಮೀನುಗಾರಿಕೆಗಾಗಿ ವಿಲೇವಾರಿ ಮಾಡಲಾಗಿದೆಯೇ ; (ತಾಲ್ಲೂಕುವಾರು, ಫಲಾನುಭವಿಯ/ ಸಂಸ್ಥೆಯ ಹೆಸರು ಮತ್ತು ಮೊತ್ತದ ಮಾಹಿತಿ ನೀಡುವುದು)

(ಈ) ೨೦೧೯ ಮತ್ತು ೨೦೨೦ನೇ ಸಾಲಿನಲ್ಲಿ ರಾಜ್ಯ ಹಾಗೂ ಕೇಂದ್ರದಿಂದ ಯಾವ ಯಾವ ಯೋಜನೆಯಡಿ ಬಿಡುಗಡೆಯಾದ

ಮೊತ್ತ ಎಷ್ಟು / ಖರ್ಚು ಎಷ್ಟು ; ಬಾಕಿ ಎಷ್ಟು ? (ಖರ್ಚು ಮಾಡಿದ್ದಲ್ಲಿ, ಸಂಪೂರ್ಣ ಯೋಜನೆಗಳವಾರು/ಫಲಾನುಭವಿಗಳ ವಿವರ ನೀಡುವುದು)

## ಕನಕಪುರ–ಬೆಂಗಳೂರು ದಿಂಡಿಗಲ್ ಚತುಷ್ಪಥ ರಸ್ತೆ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೧ (೩೭೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಎನ್‌ಹೆಚ್ ೨೦೯ ಬೆಂಗಳೂರು–ಕನಕಪುರ ಚತುಷ್ಪಥ ರಸ್ತೆ ಕಾಮಗಾರಿಯು ವಿಳಂಬದಿಂದಾಗಿ ಸಾರ್ವಜನಿಕರಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ವಿಳಂಬಕ್ಕೆ ಕಾರಣಗಳೇನು ;

(ಆ) ಎನ್‌ಹೆಚ್ ೨೦೯ ಬೆಂಗಳೂರು–ದಿಂಡಿಗಲ್ ರಸ್ತೆಗಾಗಿ ಒಟ್ಟು ಭೂಸ್ವಾಧೀನವಾದ ಜಮೀನು ಎಷ್ಟು ; ಇದರಲ್ಲಿ ಸರ್ಕಾರಿ ಜಮೀನು ಎಷ್ಟು ; ಅರಣ್ಯ ಇಲಾಖೆಯ ಜಮೀನು ಎಷ್ಟು ; ಹಿಡುವಳಿ ಜಮೀನು ಎಷ್ಟು ; ಹಾಗೂ ಇನ್ನೂ ಭೂಸ್ವಾಧೀನಗೊಳ್ಳದೆ/ ತಕರಾರುಗಳು ಇರುವ ಜಮೀನುಗಳು ಏನಾದರೂ ಇವೆಯೇ? (ವಿವರ ನೀಡುವುದು)

## ಕೃಷಿ ಭಾಗ್ಯ ಯೋಜನೆಯಡಿ ನಿರ್ಮಿಸಿರುವ ಹೊಂಡಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೨ (೩೭೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೯-೨೦ನೇ ಸಾಲಿನಲ್ಲಿ ಕೃಷಿ ಭಾಗ್ಯ ಯೋಜನೆಯಡಿ ನಿರ್ಮಿಸಿರುವ ಕೃಷಿ ಹೊಂಡಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸಹಾಯಧನ ಪಾವತಿಗೆ ಬಾಕಿಯಿರುವ ಕೃಷಿ ಹೊಂಡಗಳ ಸಂಖ್ಯೆ ಎಷ್ಟು ;

(ಇ) ರೈತರು ವಂತಿಕೆ ಪಾವತಿಸಿ ಪಾಲಿಥಿನ್ ಹೊದಿಕೆ ಅಳವಡಿಸಲು ಬಾಕಿ ಇರುವ ಹೊಂಡಗಳ ಸಂಖ್ಯೆ ಎಷ್ಟು ;

(ಈ) ಕೋವಿಡ್-೧೯ರ ಅವಧಿಯಲ್ಲಿ ಮುಸುಕಿನ ಜೋಳ ಬೆಳೆದು ಸಂಕಷ್ಟಕ್ಕೆ ಈಡಾಗಿರುವ ರೈತರಿಗೆ ರೂ.೫೦೦೦ ಗಳ ಆರ್ಥಿಕ ನೆರವನ್ನು ಡಿ.ಬಿ.ಟಿ ಮುಖಾಂತರ ನೀಡಲಾಗಿರುವ ರೈತರ ಸಂಖ್ಯೆ ಮೊತ್ತ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ಕೃಷಿ ಇಲಾಖೆಯಲ್ಲಿ ತಾಲ್ಲೂಕುವಾರು ಮಂಜೂರಾಗಿರುವ, ಭರ್ತಿಯಾಗಿರುವ ಮತ್ತು ಖಾಲಿ ಇರುವ ಸಹಾಯಕ ಕೃಷಿ ಅಧಿಕಾರಿಗಳು, ಕೃಷಿ ಅಧಿಕಾರಿಗಳು ಹಾಗೂ ಸಹಾಯಕ ಕೃಷಿ ನಿರ್ದೇಶಕರುಗಳ ಸಂಖ್ಯೆ ಎಷ್ಟು ?

## ಅರಣ್ಯ ವಾಸಗಳ ಸುಧಾರಿತ ಕ್ರಮಗಳ ಬಗ್ಗೆ

**ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೬೩ (೩೪೬) ಮಾನ್ಯ ಉಪ ಮುಖ್ಯಮಂತ್ರಿಯವರು ಹಾಗೂ ಸಮಾಜ ಕಲ್ಯಾಣ ಮತ್ತು ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಮನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆ ವ್ಯಾಪ್ತಿಯಲ್ಲಿ ಇರುವ ಅರಣ್ಯ ವಾಸಿಗಳ ಸಂಖ್ಯೆ ಎಷ್ಟು ;

(ಆ) ಈ ಅರಣ್ಯ ವಾಸಿಗಳು ವಾಸಸ್ಥಳದ ಬಗ್ಗೆ ಸರ್ಕಾರ ಕೈಗೊಂಡಿರುವ ಸುಧಾರಿತ ಕ್ರಮಗಳೇನು ;

(ಇ) ಅರಣ್ಯ ಹಕ್ಕು ಕಾಯ್ದೆಯಡಿ ವಾಸವಿರುವ ರೈತ ಕುಟುಂಬಗಳ ಫಲಾನುಭವಿಗಳ ಸಂಖ್ಯೆ ಎಷ್ಟು ; ಇದರಲ್ಲಿ ಅರ್ಜಿ ಸಲ್ಲಿಸದವರು ಎಷ್ಟು ; ಗುರುತಿಸಿರುವವರು ಎಷ್ಟು ; ವಿಲೇವಾರಿ ಎಷ್ಟು ; ಯಾವ ಕಾರಣಗಳಿಗಾಗಿ ಅರ್ಜಿಗಳು ತಿರಸ್ಕೃತಗೊಂಡಿವೆ ?

## ದೇವಾಲಯದ ಹುಂಡಿಯಲ್ಲಿ ಸಂಗ್ರಹವಾಗುವ ದೇಣಿಗೆ ಬಗ್ಗೆ

**ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೪ (೩೭೩) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನಿಂದ ಇಲ್ಲಿಯವರೆವಿಗೆ ರಾಜ್ಯದ ಮುಜರಾಯಿ ದೇವಾಲಯಗಳಲ್ಲಿ ಹುಂಡಿ ದೇಣಿಗೆ ರೂಪದಲ್ಲಿ ಸಂಗ್ರಹವಾದ ಆದಾಯವೆಷ್ಟು ;

(ಆ) ಸದರಿ ಮೊತ್ತವನ್ನು ಯಾವ ಯಾವ ಉದ್ದೇಶಗಳಿಗೆ ವಿನಿಯೋಗಿಸಲಾಗಿದೆ ; (ವಿವರ ನೀಡುವುದು)

(ಇ) ೨೦೧೭–೧೮ನೇ ಸಾಲಿನಿಂದ ಇಲ್ಲಿಯವರೆವಿಗೆ ಖಾಸಗಿ ದೇವಾಲಯಗಳ ಜೀರ್ಣೋದ್ಧಾರ ಕಾಮಗಾರಿಗಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ;

(ಈ) ೨೦೧೭–೧೮ನೇ ಸಾಲಿನಿಂದ ಇಲ್ಲಿಯವರೆವಿಗೂ ಕೈಗೊಂಡ ಜೀರ್ಣೋದ್ಧಾರ ಕಾಮಗಾರಿಗಳ ಸಂಖ್ಯೆ ಎಷ್ಟು ; ಅವು ಯಾವುವು ; ಇವುಗಳಲ್ಲಿ ಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು ; ಬಾಕಿ ಉಳಿದ ಕಾಮಗಾರಿಗಳ ಸಂಖ್ಯೆ ಎಷ್ಟು ;

(ಉ) ೨೦೧೭-೧೮ನೇ ಸಾಲಿನಿಂದ ಇಲ್ಲಿಯವರೆವಿಗೆ ರಾಜ್ಯದಲ್ಲಿನ ಮಠಗಳ ಅಭಿವೃದ್ಧಿಗಾಗಿ ಬಿಡುಗಡೆ ಮಾಡಲಾದ ಅನುದಾನವೆಷ್ಟು ? (ವಿವರಗಳನ್ನು ಜಿಲ್ಲಾವಾರು ನೀಡುವುದು)

## ಅಂಗವಿಕಲರ ಮಾಸಾಶನದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-**

೩೬೫ (೩೮೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಅಂಗವಿಕಲ ಮಾಸಾಶನ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಆ) ಪ್ರಸ್ತುತ ಸರ್ಕಾರ ನೀಡುತ್ತಿರುವ ಅಂಗವಿಕಲ ಮಾಸಾಶನ ಪ್ರಮಾಣ ಎಷ್ಟು ;

(ಇ) ಕಳೆದ ೬-೭ ತಿಂಗಳುಗಳಿಂದ ಮಾಸಾಶನ ಬಿಡುಗಡೆಯು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಕೂಡಲೇ ಮಾಸಾಶನ ಬಿಡುಗಡೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ವಸತಿ ಯೋಜನೆಯ ಫಲಾನುಭವಿಗಳಿಗೆ ಅನುದಾನ ಬಿಡುಗಡೆ ವಿಳಂಬದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-**

೩೬೬ (೩೦೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ವಿವಿಧ ವಸತಿ ಯೋಜನೆಗಳಲ್ಲಿ ಮಂಜೂರಾದ ಫಲಾನುಭವಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಇದರಲ್ಲಿ ಪೂರ್ಣಗೊಂಡ ಮನೆಗಳೆಷ್ಟು ; ಅಪೂರ್ಣಗೊಂಡ ಮನೆಗಳೆಷ್ಟು ; (ವಿವರ ನೀಡುವುದು)

(ಇ) ಕಾಮಗಾರಿ ಪೂರ್ಣಗೊಂಡಿದ್ದರೂ ಕಳೆದ ೬ ತಿಂಗಳಿಂದ ಫಲಾನುಭವಿಗಳಿಗೆ ಅನುದಾನ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ಹಾಗಿದ್ದಲ್ಲಿ, ಕೂಡಲೇ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಮದ್ದೂರು-ಶಿವಪುರ-ಕೊಪ್ಪ-ನಾಗಮಂಗಲ-ಬೆಳ್ಳೂರು ಕ್ರಾಸ್ ರಸ್ತೆ ಅಭಿವೃದ್ಧಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-**

೩೬೭ (೩೦೧) ಮಾನ್ಯ ಉಪ ಮುಖ್ಯಮಂತ್ರಿಯವರು ಹಾಗೂ ಸಮಾಜ ಕಲ್ಯಾಣ ಮತ್ತು ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೈಸೂರು-ಬೆಂಗಳೂರು ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಿರುವ ಮದ್ದೂರು-ಶಿವಪುರ ಮೂಲಕ ಕೊಪ್ಪ-ನಾಗಮಂಗಲ-ಬೆಳ್ಳೂರು ಕ್ರಾಸ್‌ನಲ್ಲಿ ಬೆಂಗಳೂರು-ತುಮಕೂರು ರಸ್ತೆಗೆ ಎನ್.ಹೆಚ್. ಕೂಡುವ ರಸ್ತೆ ಅಭಿವೃದ್ಧಿಗೆ ಸರ್ಕಾರ ಅನುಮೋದನೆ ನೀಡಿದೆಯೇ ; (ನೀಡಿದ್ದಲ್ಲಿ, ವಿವರ ನೀಡುವುದು)

(ಆ) ಈ ರಸ್ತೆಯು ತುಂಬಾ ಹಾಳಾಗಿದ್ದು, ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಎರಡು ರಾಷ್ಟ್ರೀಯ ಹೆದ್ದಾರಿಗಳಿಗೆ ಸಂಪರ್ಕವನ್ನು ಕಲ್ಪಿಸುವ ಈ ರಸ್ತೆಯನ್ನು ಅಗಲೀಕರಿಸಿ ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕೆ.ಹೆಚ್.ಬಿ. ಯಿಂದ ಮಂಡ್ಯ ನಗರದಲ್ಲಿ ಅಭಿವೃದ್ಧಿಪಡಿಸಿರುವ ಬಡಾವಣೆ ಹಸ್ತಾಂತರದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

ಇ೬೮ (೩೦೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಗೃಹ ಮಂಡಳಿ ವತಿಯಿಂದ ಮಂಡ್ಯ ಕೆರೆ ಅಂಗಳದಲ್ಲಿ ಮಂಡ್ಯ ಗ್ರಾಮದ ಸರ್ವೆ ನಂ. ೫೦೭ರಲ್ಲಿ ವಸತಿ ಬಡಾವಣೆಯನ್ನು ಯಾವಾಗ ಅಭಿವೃದ್ಧಿ ಪಡಿಸಲಾಗಿದೆ ;

(ಆ) ಎಷ್ಟು ನಿವೇಶನಗಳನ್ನು ಯಾವಾಗ ಹಂಚಿಕೆ ಮಾಡಲಾಗಿದೆ ; (ವಿವರ ನೀಡುವುದು)

(ಇ) ಸದರಿ ಬಡಾವಣೆಯನ್ನು ಮಂಡ್ಯ ನಗರ ಸಭೆಗೆ ಹಸ್ತಾಂತರ ಮಾಡಲಾಗಿದೆಯೇ ; (ವಿವರ ನೀಡುವುದು)

(ಈ) ಮಂಡ್ಯ ನಗರ ಸಭೆಯವರು ಈ ಬಡಾವಣೆಗೆ ಸಂಬಂಧಿಸಿದಂತೆ ಕೆ.ಹೆಚ್.ಬಿ. ರವರಿಂದ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಬರಬೇಕಾದ ೭೭ ಲಕ್ಷ ಶುಲ್ಕ ಬಂದ ನಂತರ ಹಸ್ತಾಂತರ ಮಾಡಿಕೊಳ್ಳವುದಾಗಿ ತಿಳಿಸಿರುವುದು ನಿಜವೇ ;

(ಉ) ಹಾಗಿದ್ದಲ್ಲಿ, ಈ ಶುಲ್ಕವನ್ನು ಕೆ.ಹೆಚ್.ಬಿ. ಯಿಂದ ಪಾವತಿಸಿ ಈ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ರೈತರ ಆತ್ಮಹತ್ಯೆ, ಆಕಸ್ಮಿಕ ಮರಣ ಹಾಗೂ ಹುಲ್ಲಿನ ಬಣವೆ ನಷ್ಟ ಪರಿಹಾರ ನೀಡುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-**

೩೬೯ (೩೦೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿನ ರೈತರ ಆತ್ಮಹತ್ಯೆ, ಆಕಸ್ಮಿಕ ಮರಣ ಹಾಗೂ ಹುಲ್ಲಿನ ಬಣವೆ ನಷ್ಟ ಪರಿಹಾರ ನೀಡುವ ಯೋಜನೆಯು ಕೃಷಿ ಇಲಾಖೆಯಿಂದ ಕಂದಾಯ ಇಲಾಖೆಗೆ ವರ್ಗಾವಣೆ ಆಗಿದೆಯೇ ; ಯಾವಾಗ ಆಗಿದೆ; (ವಿವರ ನೀಡುವುದು)

(ಆ) ಕಂದಾಯ ಇಲಾಖೆಗೆ ವರ್ಗಾವಣೆಗೊಂಡ ನಂತರ ಸದರಿ ಪ್ರಕರಣಗಳಲ್ಲಿ ಪರಿಹಾರ ನೀಡಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿಶೇಷವಾಗಿ ಮದ್ದೂರು ತಾಲ್ಲೂಕಿನಲ್ಲಿ ವಿಳಂಬವಾಗುತ್ತಿರುವ ಕುರಿತು)

(ಇ) ವಿಳಂಬವಿಲ್ಲದೆ ಕೂಡಲೇ ಪರಿಹಾರ ವಿತರಿಸಲು ಇಲಾಖೆಯು ಕೈಗೊಂಡ ಕ್ರಮಗಳೇನು ?

## ಸರ್ಕಾರಿ ಭೂಮಿ ಒತ್ತುವರಿ ತೆರವುಗೊಳಿಸುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೭೦ (೩೫೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಸರ್ಕಾರಿ ಭೂಮಿಗಳನ್ನು ಒತ್ತುವರಿ ಮಾಡಿರುವ ಪ್ರಕರಣಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಸರ್ಕಾರಿ ಭೂಮಿಗಳ ಒತ್ತುವರಿಯನ್ನು ತೆರವುಗೊಳಿಸಲು ಕಂದಾಯ ಇಲಾಖೆಯು ಕೈಗೊಂಡ ಕಠಿಣ ಕಾನೂನು ಕ್ರಮಗಳೇನು ; ಒತ್ತುವರಿದಾರರ ಮೇಲೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಇಲ್ಲಿಯವರೆಗೂ ರಾಜ್ಯದಲ್ಲಿ ಸರ್ಕಾರಿ ಕೆರೆಗಳು, ಸ್ಮಶಾನ ಒತ್ತುವರಿ ಭೂಮಿಗಳನ್ನು ತೆರವುಗೊಳಿಸಿರುವ ಪ್ರಕರಣಗಳೆಷ್ಟು ? (ಸ್ಥಳದ ವಿವರಗಳೊಂದಿಗೆ ಜಿಲ್ಲಾವಾರು ಮಾಹಿತಿ ನೀಡುವುದು)

## ವಿಶೇಷ ಚೇತನರಿಗೆ ನೀಡುವ ಮಾಸಾಶನ ನಿಂತುಹೋಗಿರುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೭೧ (೩೯೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ವಿಶೇಷಚೇತನರ ಒಟ್ಟು ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ವಿಶೇಷಚೇತನರಿಗೆ ನೀಡುವ ಮಾಸಾಶನವು ಕಳೆದ ಎಂಟು ತಿಂಗಳಿನಿಂದ ನಿಂತು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಇವರುಗಳು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಡಿಯಲ್ಲಿ ಬರುವುದರಿಂದ ಇವರುಗಳಿಗೆ ಒಂದು ಸರ್ವೆ ಕಾರ್ಯವನ್ನು

ಮಾಡಿ, ಹೋಬಳಿ ಮಟ್ಟದಲ್ಲಿ ಅದಾಲತ್‌ಗಳನ್ನು ನಡೆಸಿ ಅವರುಗಳ ಸಮಸ್ಯೆಗಳನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳುವ ನಿಲುವೇನು ? (ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿನ ರಸ್ತೆ ನಿರ್ಮಾಣ ಕಾರ್ಯದಲ್ಲಿ ತಂತ್ರಜ್ಞಾನ ಉನ್ನತೀಕರಿಸುವ ಕುರಿತು

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೨ (೩೫೮) ಮಾನ್ಯ ಉಪ ಮುಖ್ಯಮಂತ್ರಿಯವರು ಹಾಗೂ ಸಮಾಜ ಕಲ್ಯಾಣ ಮತ್ತು ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಮಳೆ ಹಾನಿಯಿಂದ ಲೋಕೋಪಯೋಗಿ ಇಲಾಖೆಯ ಎಷ್ಟು ಕಿಲೋಮೀಟರ್ ಉದ್ದದ ರಸ್ತೆಗಳು ಹಾನಿಯಾಗಿರುತ್ತವೆ ; (ವಿವರ ನೀಡುವುದು)

(ಆ) ಈ ಕೊಚ್ಚಿಹೋದ ರಸ್ತೆಗಳಲ್ಲಿ ಇಲ್ಲಿಯವರೆವಿಗೆ ಎಷ್ಟು ಕಿಲೋಮೀಟರ್ ಉದ್ದದ ರಸ್ತೆಗಳನ್ನು ದುರಸ್ಥಿ/ನಿರ್ಮಾಣ ಕಾರ್ಯವನ್ನು ಮಾಡಲಾಗಿದೆ ; (ಮಾಹಿತಿ ನೀಡುವುದು)

(ಇ) ಜಿಲ್ಲೆಯಲ್ಲಿನ ರಸ್ತೆಗಳನ್ನು ನಿರ್ಮಾಣ ಮಾಡುವ ಸಂದರ್ಭದಲ್ಲಿ ದೇಶದ ಈಶಾನ್ಯ ರಾಜ್ಯಗಳಲ್ಲಿ ಬಳಸುವ ತಂತ್ರಜ್ಞಾನವನ್ನು ಬಳಸಲಾಗುತ್ತಿದೆಯೇ; (ವಿವರ ನೀಡುವುದು)

(ಈ) ಈಶಾನ್ಯ ರಾಜ್ಯಗಳಲ್ಲಿ ಬಳಸುವ ತಂತ್ರಜ್ಞಾನವನ್ನು ಜಿಲ್ಲೆಯಲ್ಲಿನ ರಸ್ತೆಗಳನ್ನು ನಿರ್ಮಾಣ ಮಾಡುವ ಸಂದರ್ಭದಲ್ಲಿ ಬಳಸಲು ಸರ್ಕಾರದ ನಿಲುವೇನು ?

## ಅತಿವೃಷ್ಠಿ–ಅನಾವೃಷ್ಠಿ ಪರಿಸ್ಥಿತಿ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೩ (೩೧೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಎಷ್ಟು ಬಾರಿ ಅತಿವೃಷ್ಠಿ ಮತ್ತು ಅನಾವೃಷ್ಠಿ ಉಂಟಾಗಿದೆ ;

(ಆ) ಈ ಅವಧಿಗಳಲ್ಲಿ ಸರ್ಕಾರ ಬಿಡುಗಡೆ ಮಾಡಿದ ಅನುದಾನವೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಸದರಿ ಅವಧಿಯಲ್ಲಿ ಕಲಬುರಗಿ, ಬೀದರ, ಯಾದಗಿರಿ, ರಾಯಚೂರು, ಕೊಪ್ಪಳ, ವಿಜಯಪುರ, ಬಾಗಲಕೋಟೆ, ಬೆಳಗಾವಿ, ಚಿಕ್ಕೋಡಿ, ಗದಗ ಜಿಲ್ಲೆಗಳಲ್ಲಿ ಯಾವ ಯಾವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ ; ಸದರಿ ಕಾಮಗಾರಿಗಳಿಗೆ ತಗಲುವ ಅಂದಾಜು ವೆಚ್ಚವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈವರೆವಿಗೂ ಖರ್ಚಾಗಿರುವ ಹಣ ಎಷ್ಟು ? (ಕಾಮಗಾರಿವಾರು ಮಾಹಿತಿ ನೀಡುವುದು)

## ಭೂ ಪರಿವರ್ತನೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೪ (೩೦೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷದಿಂದ ಈವರೆಗೂ ಎಷ್ಟು ಭೂಮಿಗಳನ್ನು ಪರಿವರ್ತನೆಗೊಳಿಸಲಾಗಿದೆ ;

(ಆ) ಯಾವ ಮಾನದಂಡದ ಆಧಾರದ ಮೇಲೆ ಭೂ ಪರಿವರ್ತನೆಗೊಳಿಸಲಾಗಿದೆ ;

(ಇ) ಯಾವ ಯಾವ ಸರ್ವೆ ನಂಬರ್‌ಗಳಲ್ಲಿ ಭೂ ಪರಿವರ್ತಿಸಲಾಗಿದೆ ; (ಅರ್ಜಿದಾರರ ವಿವರಗಳೊಂದಿಗೆ ಪೂರ್ಣ ಮಾಹಿತಿ ನೀಡುವುದು)

(ಈ) ಕಲಬುರಗಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷದಿಂದ ಈವರೆಗೆ ಎಷ್ಟು ಜನ ಹೊರ ಜಿಲ್ಲೆ/ಹೊರ ರಾಜ್ಯದವರು ಕೃಷಿ ಭೂಮಿ ಖರೀದಿ ಮಾಡಿದ್ದಾರೆ ;

(ಉ) ಈ ಪೈಕಿ ಎಷ್ಟು ಜನರ ಮೇಲೆ ೭೯ನೇ ಎ ಬಿ ಉಲ್ಲಂಘನೆಯಾಗಿದೆ ;

(ಊ) ಕಲಬುರಗಿ ಜಿಲ್ಲೆಯಲ್ಲಿ ಎಷ್ಟು ಪೋಡಿ ಪ್ರಕರಣಗಳು ಬಾಕಿ ಇವೆ ; ಮತ್ತು ಎಷ್ಟು ವರ್ಷದಿಂದ ಬಾಕಿ ಇವೆ ; (ತಾಲ್ಲೂಕುವಾರು ವಿವರ ನೀಡುವುದು)

(ಋ) ೭೯ನೇ ಎ ಬಿ ಉಲ್ಲಂಘನೆಯಾದ ಭೂಮಿಯನ್ನು ಸರ್ಕಾರದ ವಶಕ್ಕೆ ತೆಗೆದುಕೊಳ್ಳಲಾಗಿದೆಯೇ ; (ವಿವರ ನೀಡುವುದು)

(ಎ) ಪೋಡಿ ಪ್ರಕರಣವನ್ನು ಶೀಘ್ರವಾಗಿ ಇತ್ಯರ್ಥಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಹೈದ್ರಾಬಾದ್–ಕರ್ನಾಟಕ ಭಾಗದ ಜನರಿಗೆ ೩೭೧ (ಜೆ) ರ ಅಡಿಯಲ್ಲಿ ಅರ್ಹತಾ ಪ್ರಮಾಣ ಪತ್ರ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೫ (೩೦೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ (ಕಲ್ಯಾಣ ಕರ್ನಾಟಕ) ಭಾಗದ ಜನರಿಗೆ ಕಲಂ ೩೭೧(ಜೆ) ರ ಅಡಿಯಲ್ಲಿ ಅರ್ಹತಾ ಪ್ರಮಾಣ ಪತ್ರಗಳನ್ನು ವಿತರಿಸುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ; ಎಷ್ಟು ಸಂಖ್ಯೆಯಲ್ಲಿ ಪ್ರಮಾಣ ಪತ್ರಗಳನ್ನು ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಪ್ರಮಾಣ ಪತ್ರಗಳು ಯಾವ ಯಾವ ಯೋಜನೆಗಳಿಗೆ ಅತ್ಯಂತ ಅವಶ್ಯಕವಾಗಿದೆ ; (ವಿವರಗಳನ್ನು ನೀಡುವುದು)

(ಇ) ಪ್ರಸಕ್ತ ಸಾಲಿನಲ್ಲಿ ಪ್ರತಿ ಜಿಲ್ಲೆಯಲ್ಲಿ ವಿತರಿಸಲಾದ ಪ್ರಮಾಣ ಪತ್ರಗಳ ಸಂಖ್ಯೆ ಎಷ್ಟು ?

## ನ್ಯಾಯಾಲಯಗಳಲ್ಲಿರುವ ಪ್ರಕರಣಗಳು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೬ (೩೧೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಂದಾಯ ಇಲಾಖೆಯಲ್ಲಿ ಕಳೆದ ಮೂರು ವರ್ಷಗಳಿಂದ ಕಲಬುರಗಿ, ಬೀದರ್, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ, ವಿಜಯಪುರ, ಬಾಗಲಕೋಟೆ ಈ ಜಿಲ್ಲೆಗಳಲ್ಲಿ ಇರುವ ಒಟ್ಟು ನ್ಯಾಯಾಲಯ ಪ್ರಕರಣಗಳ ಸಂಖ್ಯೆ ಎಷ್ಟು ; (ಪ್ರಾದೇಶಿಕ ಆಯುಕ್ತರವಾರು, ಜಿಲ್ಲಾಧಿಕಾರಿವಾರು, ಸಹಾಯಕ ಆಯುಕ್ತರವಾರು ಹಾಗೂ ತಾಲ್ಲೂಕು ತಹಸೀಲ್ದಾರ್‌ವಾರು, ದಂಡಾಧಿಕಾರಿಗಳವಾರು ವಿವರ ನೀಡುವುದು)

(ಆ) ಇದರಲ್ಲಿ ಇತ್ಯರ್ಥವಾದ ಹಾಗೂ ಇತ್ಯರ್ಥವಾಗಬೇಕಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಪ್ರಾದೇಶಿಕ ಆಯುಕ್ತರವಾರು, ಜಿಲ್ಲಾಧಿಕಾರಿವಾರು, ಸಹಾಯಕ ಆಯುಕ್ತರವಾರು ಹಾಗೂ ತಾಲ್ಲೂಕು ತಹಸೀಲ್ದಾರ್‌ವಾರು, ದಂಡಾಧಿಕಾರಿಗಳವಾರು ವಿವರ ನೀಡುವುದು)

(ಇ) ಇದರಲ್ಲಿ ಭೂಕಂದಾಯ, ಭೂಸುಧಾರಣೆ ಹಾಗೂ ಭೂ ಮಂಜೂರಾತಿಗೆ ಸಂಬಂಧಿಸಿದಂತೆ ಎಷ್ಟು ಪ್ರಕರಣಗಳಿವೆ ; ಅದರಲ್ಲಿ ಇತ್ಯರ್ಥವಾದ ಹಾಗೂ ಇತ್ಯರ್ಥವಾಗದೇ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಪ್ರಾದೇಶಿಕ ಆಯುಕ್ತರವಾರು, ಜಿಲ್ಲಾಧಿಕಾರಿವಾರು, ಸಹಾಯಕ ಆಯುಕ್ತರವಾರು ಹಾಗೂ ತಾಲ್ಲೂಕು ತಹಸೀಲ್ದಾರ್‌ವಾರು, ದಂಡಾಧಿಕಾರಿಗಳವಾರು ವಿವರ ನೀಡುವುದು)

(ಈ) ಸದರಿ ಪ್ರಕರಣಗಳು ವರ್ಷಗಟ್ಟಲೇ ನಡೆಯುತ್ತಿದ್ದು, ಪ್ರಕರಣಗಳ ತ್ವರಿತ ಇತ್ಯರ್ಥಕ್ಕೆ ಸರ್ಕಾರವು ಕೈಗೊಂಡ ಕ್ರಮಗಳೇನು ?

## ಕೊಳಚೆ ಪ್ರದೇಶಗಳ ಸುಧಾರಣೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೭ (೩೦೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಳಚೆ ಪ್ರದೇಶಗಳ ಸುಧಾರಣೆಗಾಗಿ ಸರ್ಕಾರದ ಯೋಜನಾ ಸೌಲಭ್ಯಗಳೇನು ; ಕಳೆದ ಮೂರು ವರ್ಷಗಳ ಆರ್ಥಿಕ ವರ್ಷದಲ್ಲಿ ಈ ಕುರಿತಾಗಿ ಸಾಧಿಸಿದ ಗುರಿ ಮತ್ತು ಸಾಧನೆಗಳೇನು ; (ವಿವರ ಒದಗಿಸುವುದು)

(ಆ) ಕೊಳಚೆ ಪ್ರದೇಶಗಳಿಗೆ ಮೂಲ ಸೌಲಭ್ಯಗಳು ಮತ್ತು ವಸತಿ ಸೌಲಭ್ಯವನ್ನು ಒದಗಿಸಿಕೊಡುವ ದಿಶೆಯಲ್ಲಿ ಕೇಂದ್ರ ಸರ್ಕಾರದ ಪುರಸ್ಕೃತ ಯೋಜನೆಗಳು ಮತ್ತು ಕೇಂದ್ರದಿಂದ ಪಡೆದ ಅನುದಾನ ಮೊತ್ತವೆಷ್ಟು ;

(ಇ) ಕಲಬುರಗಿ, ಬೀದರ್, ಯಾದಗಿರಿ, ಕೊಪ್ಪಳ, ವಿಜಯಪುರ, ಬಾಗಲಕೋಟೆ, ಬಳ್ಳಾರಿ ಜಿಲ್ಲೆಗಳ ಪ್ರದೇಶದಲ್ಲಿನ ಕೊಳಚೆ ಪ್ರದೇಶಗಳ ಸಮಗ್ರ ಸುಧಾರಣೆಗಾಗಿ ಮತ್ತು ಕೊಳಚೆ ನಿವಾಸಿಗಳಿಗೆ ಹಕ್ಕು ಪತ್ರಗಳು, ಮನೆ ನಿರ್ಮಾಣ ಒದಗಿಸಿಕೊಡುವಲ್ಲಿ ಸರ್ಕಾರದ ನಿಲುವುಗಳೇನು ?

## ಬೆಂಗಳೂರು –ಮೈಸೂರು ಕಾರಿಡಾರ್ ಯೋಜನೆಗೆ ವ್ಯಯಿಸಲಾದ ಅನುದಾನದ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೭೮ (೪೪೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಮಾಜ ಕಲ್ಯಾಣ ಮತ್ತು ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು–ಮೈಸೂರು ಕಾರಿಡಾರ್ ಯೋಜನೆಗೆ ಇಲ್ಲಿಯವರೆವಿಗೂ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ;

(ಆ) ಸದರಿ ಕಾಮಗಾರಿಯನ್ನು ನಿಗಧಿತ ಅವಧಿಯೊಳಗೆ ಮುಗಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಈ ಯೋಜನೆಯಿಂದ ಎಷ್ಟು ಮರಗಳನ್ನು ಕಡಿಯಲಾಗಿದೆ; ಈ ಮರಗಳ ಹರಾಜು ಪ್ರಕ್ರಿಯೆಯಲ್ಲಿ ಸರ್ಕಾರಕ್ಕೆ ಬಂದ ಆದಾಯವೆಷ್ಟು ? (ವಿವರ ನೀಡುವುದು)

## ಅಪೀಲು ಪ್ರಕರಣಗಳನ್ನು ಇತ್ಯರ್ಥಪಡಿಸುವ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೭೯ (೪೫೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅನೇಕ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಅಸಂಖ್ಯಾತ ಕಂದಾಯ ಅಪೀಲು ಪ್ರಕರಣಗಳಿದ್ದರೂ ಜಿಲ್ಲಾಧಿಕಾರಿಗಳು ನಿಗಧಿತ ಸಮಯದಲ್ಲಿ ಇತ್ಯರ್ಥ ಪಡಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಂದಾಯ ನ್ಯಾಯಾಲಯಗಳ ವಿಳಂಬ ಧೋರಣೆಯಿಂದಾಗಿ ಜನ ಸಾಮಾನ್ಯರಿಗೆ ವ್ಯಾಪಕ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅದನ್ನು ನಿಭಾಯಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಪ್ರವಾಹದಿಂದ ಬೆಳೆ ನಾಶವಾಗಿರುವ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೮೦ (೪೫೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ರಿಂದ ೨೦೨೦–೨೧ನೇ ಸಾಲಿನಲ್ಲಿ ರಾಜ್ಯದ ಯಾವ ಯಾವ ತಾಲ್ಲೂಕಿನಲ್ಲಿ ಎಷ್ಟು ಎಕರೆ ಪ್ರದೇಶದಲ್ಲಿ ಕಬ್ಬು, ಭತ್ತ, ಜೋಳ, ರಾಗಿ, ಹತ್ತಿ, ಮೆಣಸಿನಕಾಯಿ, ದ್ವಿದಳ ಧಾನ್ಯ ಬೆಳೆಗಳು ಪ್ರವಾಹದಿಂದ ನಾಶಗೊಂಡಿರುತ್ತವೆ ; (ಗ್ರಾಮ ಪಂಚಾಯಿತಿವಾರು ಮಾಹಿತಿ ನೀಡುವುದು)

(ಆ) ಪ್ರವಾಹದಿಂದ ಉಂಟಾದ ಬೆಳೆಗಳ ನಷ್ಟ ಎಷ್ಟು ; (ಗ್ರಾಮ ಪಂಚಾಯಿತಿವಾರು ಮಾಹಿತಿ ನೀಡುವುದು)

(ಇ) ಸರ್ಕಾರದಿಂದ ಎಷ್ಟು ನಷ್ಟವನ್ನು ಯಾರ್ಯಾರಿಗೆ ತುಂಬಿಕೊಡಲಾಗಿದೆ; (ವಿವರ ನೀಡುವುದು)

(ಈ) ತುಂಬಿಕೊಡದಿದ್ದಲ್ಲಿ ಕಾರಣಗಳೇನು ?

## ರಾಜ್ಯದಲ್ಲಿರುವ ಡಾ॥ ಬಿ.ಆರ್. ಅಂಬೇಡ್ಕರ್ ಸಮುದಾಯ ಭವನದ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೮೧ (೪೫೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಮಾಜ ಕಲ್ಯಾಣ ಮತ್ತು ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನಿರ್ಮಾಣವಾದ ಡಾ॥ ಬಿ.ಆರ್. ಅಂಬೇಡ್ಕರ್ ಸಮುದಾಯ ಭವನಗಳ ಸಂಖ್ಯೆ ಎಷ್ಟು ;

(ಆ) ಪ್ರಸಕ್ತ ಸಾಲಿನಲ್ಲಿ ಮಂಜೂರಾಗಿರುವ ಡಾ॥ ಬಿ.ಆರ್.ಅಂಬೇಡ್ಕರ್ ಸಮುದಾಯ ಭವನಗಳ ಸಂಖ್ಯೆ ಎಷ್ಟು; ಒದಗಿಸಲಾಗಿರುವ ಮೊತ್ತವೆಷ್ಟು ;

(ಇ) ಪೂರ್ಣಗೊಂಡಿರುವ ಸಮುದಾಯ ಭವನಗಳೆಷ್ಟು ; ಸಂಪೂರ್ಣ ವಿವರ ನೀಡುವುದು ;

(ಈ) ಕಾಮಗಾರಿ ಅಪೂರ್ಣಗೊಂಡಿರುವ ಸಮುದಾಯ ಭವನಗಳೆಷ್ಟು; ಈ ಅಪೂರ್ಣಗೊಂಡಿರುವ ಸಮುದಾಯ ಭವನಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು?

## ಕೊಡಗು ಜಿಲ್ಲೆಯ ಬಾಣೆ ಜಮೀನಿಗೆ ಕಂದಾಯ ನಿಗದಿ ಮಾಡುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೮೨ (೪೧೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯ ಬಾಣೆ ಜಮೀನಿಗೆ ಕಂದಾಯ ನಿಗದಿ ಮಾಡುವ ಸಮಸ್ಯೆಗೆ ಸಂಬಂಧಿಸಿದಂತೆ ರಾಷ್ಟ್ರಪತಿಗಳ ಅಂಕಿತ ದೊರಕಿದೆಯೇ;

(ಆ) ದೊರಕಿದ್ದಲ್ಲಿ, ಬಾಣೆ ಜಮೀನಿಗೆ ಕಂದಾಯ ನಿಗದಿ ಮಾಡಲು ಇದುವರೆಗೂ ಯಾಕೆ ಕ್ರಮ ಕೈಗೊಂಡಿಲ್ಲ ; ವಿಳಂಬಕ್ಕೆ ಕಾರಣಗಳೇನು;

(ಇ) ಯಾವ ಕಾಲಮಿತಿಯೊಳಗೆ ಬಾಣೆ ಜಮೀನಿಗೆ ಕಂದಾಯ ನಿಗದಿ ಮಾಡಲು ಕ್ರಮ ವಹಿಸಲಾಗುವುದು ?

## ಕೊಡಗು ಜಿಲ್ಲೆಯಲ್ಲಿ ನೆರೆ ಸಂತಸ್ತ್ರರಿಗೆ ವಸತಿ ಸೌಲಭ್ಯ ಕಲ್ಪಿಸದೇ ಇರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೮೩ (೪೧೨) ಮಾನ್ಯ ಉಪಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಸುರಿದ ಧಾರಾಕಾರ ಮಳೆ ಹಾಗೂ ಭೂಕುಸಿತದಿಂದಾಗಿ ಸಾವಿರಾರು ಮನೆಗಳು ಹಾನಿಗೀಡಾಗಿ ಅನೇಕ ಕುಟುಂಬಗಳು ಇಂದಿಗೂ ಅತಂತ್ರ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದುವರೆಗೂ ಎಷ್ಟು ಕುಟುಂಬಗಳಿಗೆ ಪುನರ್ ವಸತಿ ಸೌಲಭ್ಯ ಕಲ್ಪಿಸಲಾಗಿದೆ ; ಇನ್ನೂ ಎಷ್ಟು ಕುಟುಂಬಗಳು ಪುನರ್ ವಸತಿ ಸೌಲಭ್ಯದಿಂದ ಇಂದಿಗೂ ವಂಚಿತವಾಗಿವೆ; (ವರ್ಷವಾರು ಮಾಹಿತಿ ನೀಡುವುದು)

(ಇ) ಮನೆ ಕಳೆದುಕೊಂಡು ಇದುವರೆಗೂ ಸರ್ಕಾರದಿಂದ ಪುನರ್ ವಸತಿ ಸೌಲಭ್ಯ ದೊರಕದ ಕುಟುಂಬಗಳಿಗೆ ಯಾವ ಕಾಲಮಿತಿಯೊಳಗೆ ಮನೆ ನಿರ್ಮಿಸಿಕೊಡಲಾಗುವುದು ; ಈ ಸಂಬಂಧ ಸರ್ಕಾರ ರೂಪಿಸಿರುವ ಯೋಜನೆ ಮತ್ತು ಕಾರ್ಯಕ್ರಮಗಳೇನು ; ವಿನಿಯೋಗಿಸುತ್ತಿರುವ ಅನುದಾನವೆಷ್ಟು ?

## ಕೊಡಗು ಜಿಲ್ಲೆಯ ನೆರೆಹಾವಳಿ ಬಗ್ಗೆ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿರುವ ವರದಿ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೮೪ (೪೧೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯ ಜನರು ಕಳೆದ ೩ ವರ್ಷಗಳಿಂದ ಜಿಲ್ಲೆಯಲ್ಲಿ ಸತತವಾಗಿ ಸುರಿದ ಧಾರಾಕಾರ ಮಳೆ ಹಾಗೂ ಅದರ ಪರಿಣಾಮವಾಗಿ ಸಂಭವಿಸಿದ ಭೂಕುಸಿತದಿಂದಾಗಿ ತೀವ್ರ ಸಂಕಷ್ಟಕ್ಕೆ ಸಿಲುಕಿ ನಷ್ಟ ಅನುಭವಿಸುತ್ತಿರುವುದರ ಕುರಿತು ಕೇಂದ್ರ ಸರ್ಕಾರಕ್ಕೆ ಪರಿಣಾಮಕಾರಿಯಾದ ವರದಿಯನ್ನು ಸಲ್ಲಿಸಲಾಗಿದೆಯೇ ;

(ಆ) ಸಲ್ಲಿಸಿದ್ದಲ್ಲಿ, ಜಿಲ್ಲೆಯಲ್ಲಿನ ಜನರ ಸಂಕಷ್ಟದ ಪರಿಸ್ಥಿತಿ ಕುರಿತು ಕೇಂದ್ರ ಸರ್ಕಾರಕ್ಕೆ ಸೂಕ್ತ ಮಾಹಿತಿ ಹಾಗೂ ಆಗಿರುವ ನಷ್ಟದ ಅಂದಾಜನ್ನು ನಿಖರ ಅಂಕಿ–ಅಂಶಗಳೊಂದಿಗೆ ಮನದಟ್ಟು ಮಾಡಿಕೊಡಲಾಗಿದೆಯೇ ;

(ಇ) ಹಾಗಿದ್ದಲ್ಲಿ, ಆಗಿರುವ ನಷ್ಟದ ಅಂದಾಜನ್ನು ಸರಿದೂಗಿಸಲು ಬೇಕಾದ ಅನುದಾನವನ್ನು ಕೇಂದ್ರ ಸರ್ಕಾರದಿಂದ ಪಡೆಯಲಾಗಿದೆಯೇ ?

## ಕೊಡಗು ಜಿಲ್ಲೆಯಲ್ಲಿ ನೆರೆ ಸಂತಸ್ತ್ರರಿಗೆ ವಸತಿ ಸೌಲಭ್ಯ ಕಲ್ಪಿಸದೇ ಇರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೮೫ (೪೧೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಸುರಿದ ಧಾರಾಕಾರ ಮಳೆ ಹಾಗೂ ಭೂಕುಸಿತದಿಂದಾಗಿ ಸಾವಿರಾರು ಮನೆಗಳು ಹಾನಿಗೀಡಾಗಿ ಅನೇಕ ಕುಟುಂಬಗಳು ಇಂದಿಗೂ ಅತಂತ್ರ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದುವರೆಗೂ ಎಷ್ಟು ಕುಟುಂಬಗಳಿಗೆ ಪುನರ್ ವಸತಿ ಸೌಲಭ್ಯ ಕಲ್ಪಿಸಲಾಗಿದೆ ; ಇನ್ನೂ ಎಷ್ಟು ಕುಟುಂಬಗಳು ಪುನರ್ ವಸತಿ ಸೌಲಭ್ಯದಿಂದ ಇಂದಿಗೂ ವಂಚಿತವಾಗಿವೆ ; (ವರ್ಷವಾರು ಮಾಹಿತಿ ನೀಡುವುದು)

(ಇ) ಮನೆ ಕಳೆದುಕೊಂಡು ಇದುವರೆಗೂ ಸರ್ಕಾರದಿಂದ ಪುನರ್ ವಸತಿ ಸೌಲಭ್ಯ ದೊರಕದ ಕುಟುಂಬಗಳಿಗೆ ಯಾವ ಕಾಲಮಿತಿಯೊಳಗೆ ಮನೆ ನಿರ್ಮಿಸಿಕೊಡಲಾಗುವುದು ; ಈ ಸಂಬಂಧ ಸರ್ಕಾರ ರೂಪಿಸಿರುವ ಯೋಜನೆ ಮತ್ತು ಕಾರ್ಯಕ್ರಮಗಳೇನು ; ವಿನಿಯೋಗಿಸುತ್ತಿರುವ ಅನುದಾನವೆಷ್ಟು?

## ಬೀದರ್ ನಗರದ ಹೊರ ವಲಯದ ವರ್ತುಲ ರಸ್ತೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೮೬ (೪೬೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ನಗರ ಹಾಗೂ ಹೊರ ವಲಯದಲ್ಲಿ ನಿರ್ಮಿಸಿರುವ ವರ್ತುಲ ರಸ್ತೆಗಳ ಒಟ್ಟು ಉದ್ದ, ವಿಸ್ತೀರ್ಣ ಎಷ್ಟು ; ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ ; (ಮಾಹಿತಿ ನೀಡುವುದು)

(ಆ) ಸದರಿ ವರ್ತುಲ ರಸ್ತೆಗಳ ಕಾಮಗಾರಿಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು ; ಗುತ್ತಿಗೆದಾರರಿಗೆ ಪಾವತಿಸಿರುವ ಹಣ ಎಷ್ಟು; (ಮಾಹಿತಿ ನೀಡುವುದು)

(ಇ) ಬೀದರ್ ನಗರ ಹಾಗೂ ಹೊರ ವಲಯದಲ್ಲಿ ನಿರ್ಮಿಸಿರುವ ವರ್ತಲ ರಸ್ತೆಗಳ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ?

## ರಾಜ್ಯದಲ್ಲಿ ಕಳಪೆ ಬಿತ್ತನೆ ಬೀಜ ನೀಡಿರುವ ಕುರಿತು

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೮೭ (೪೩೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಸೊಯಾಬಿನ್ ಬೀಜಗಳು ಕಳಪೆ ಮಟ್ಟದಲ್ಲಿರುವುದರಿಂದ ರೈತರು ಸೊಯಾಬಿನ್ ಬೀಜಗಳ ಬಿತ್ತನೆಯನ್ನು ಹೊರತುಪಡಿಸಿ ಉದ್ದು, ಹೆಸರು ಇನ್ನಿತರ ಬೀಜಗಳನ್ನು ಬಿತ್ತನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸೊಯಾಬಿನ್ ಬಿತ್ತನೆ ಬೀಜಗಳು ಕಳಪೆ ಮಟ್ಟದಲ್ಲಿದೆ ಎಂದು ಸರ್ಕಾರ ರೈತರಿಗೆ ಮಾಹಿತಿ ನೀಡಿದ್ದರೂ, ಕೃಷಿ ಅಧಿಕಾರಿಗಳು ತಾಲ್ಲೂಕು, ಗ್ರಾಮಗಳಿಗೆ ಹೋಗಿ ಸೊಯಾಬಿನ್ ಬಿತ್ತನೆ ಬೀಜಗಳನ್ನು ಸರಬರಾಜು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಮರು ಬಿತ್ತನೆಗೆ ಸರ್ಕಾರದ ಕೈಗೊಂಡ ಕ್ರಮಗಳೇನು ;

(ಇ) ಕೃಷಿ ಅಧಿಕಾರಿಗಳು ಹಂಚಿಕೆ ಮಾಡಿರುವ ಸೊಯಾಬಿನ್ ಬಿತ್ತನೆ ಬೀಜಗಳು ಕಳಪೆ ಮಟ್ಟದಿಂದ ಕೂಡಿದ್ದು, ಬಿತ್ತನೆ ಮಾಡಿದ ಬೀಜಗಳು ಮೊಳಕೆ ಬಾರದ ಕಾರಣ, ರೈತರು ಮರು ಬಿತ್ತನೆ ಮಾಡಿ, ರೈತರಿಗೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಅಂತಹ ಕೃಷಿ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಮುಂಗಾರು ಹಂಗಾಮಿನಲ್ಲಿ ಸುರಿದ ಮಳೆಯಿಂದ ಬೆಳೆ ನಾಶವಾದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೮ (೪೪೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೧೫ ದಿನಗಳು ಸತತವಾಗಿ ಸುರಿದ ಭಾರಿ ಮಳೆಗೆ ಎಷ್ಟು ಹೆಕ್ಟೇರ್ ಬೆಳೆ ನಾಶವಾಗಿದೆ ; ಸರ್ಕಾರವು ಬೆಳೆ ಸಮೀಕ್ಷೆ ನಡೆಸಿದೆಯೇ ; (ಮಾಹಿತಿ ನೀಡುವುದು)

(ಆ) ಬೀದರ್ ಜಿಲ್ಲೆಯಲ್ಲಿ ಎಷ್ಟು ರೈತರ ಉದ್ದು ಹಾಗೂ ಹೆಸರು ಬೆಳೆಗಳು ಸಂಪೂರ್ಣ ನಾಶವಾಗಿದೆ ; ನಾಶವಾದ ಬೆಳೆಗೆ ಸರ್ಕಾರ ಎಷ್ಟು ರೈತರಿಗೆ ಪರಿಹಾರವನ್ನು ನೀಡಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್‌ನಲ್ಲಿ ಮಿನಿ ವಿಧಾನಸೌಧ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :--**

೩೮೯ (೩೪೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್‌ನಲ್ಲಿ ಮಿನಿ ವಿಧಾನಸೌಧ ನಿರ್ಮಾಣಕ್ಕಾಗಿ ಸ್ಥಳ ಗುರುತಿಸಲಾಗಿದೆಯೇ ;

(ಆ) ಬೀದರ್‌ನಲ್ಲಿ ಮಿನಿ ವಿಧಾನಸೌಧ ನಿರ್ಮಾಣಕ್ಕೆ ಸರ್ಕಾರ ಯಾವಾಗ ಮಂಜೂರಾತಿ ನೀಡಿದೆ ; (ವಿವರ ನೀಡುವುದು)

(ಇ) ಬೀದರ್‌ನಲ್ಲಿ ಮಿನಿ ವಿಧಾನಸೌಧ ನಿರ್ಮಾಣಕ್ಕಾಗಿ ನೀಲಿ ನಕ್ಷೆ ಸಿದ್ಧವಾಗಿದೆಯೇ ; ಹಾಗಿದ್ದರೆ, ಇದರ ನಿರ್ಮಾಣಕ್ಕಾಗಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ; (ವಿವರ ನೀಡುವುದು)

(ಈ) ಮಿನಿ ವಿಧಾನಸೌಧ ನಿರ್ಮಾಣ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ?

## ಬೀದರ್ ಜಿಲ್ಲೆಯ ವಸತಿ ಇಲಾಖೆಯಿಂದ ಮನೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೯೦ (೩೪೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಗೆ ವಸತಿ ಇಲಾಖೆಯಿಂದ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ; ಮಂಜೂರು ಮಾಡಲಾದ ಮನೆಗಳನ್ನು ಫಲಾನುಭವಿಗಳಿಗೆ ವಿತರಿಸಲಾಗಿದೆಯೇ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ೨೦೧೮-೧೯, ೨೦೧೯-೨೦ ನೇ ಸಾಲಿನಲ್ಲಿ ಮಂಜೂರಾದ ಮನೆಗಳ ಫಲಾನುಭವಿಗಳಿಗೆ ಈವರೆಗೆ ಹಕ್ಕುಪತ್ರ ನೀಡದಿರುವುದು

ಸರ್ಕಾರದ ಗಮನಕ್ಕೆ ಬಂದಿದೆಯೇ ; ಅಧಿಕಾರಿಗಳ ನಿರ್ಲಕ್ಷ್ಯದಿಂದ ಮಂಜೂರಾದ ಮನೆಗಳಿಗೆ ಹಕ್ಕುಪತ್ರ ನೀಡಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈವರೆಗೆ ಎಷ್ಟು ಫಲಾನುಭವಿಗಳಿಗೆ ಹಕ್ಕುಪತ್ರಗಳನ್ನು ನೀಡಲಾಗಿದೆ; ಮನೆಗಳ ಹಕ್ಕುಪತ್ರಗಳನ್ನು ನೀಡದೇ ಇರಲು ಕಾರಣಗಳೇನು? (ತಾಲ್ಲೂಕುವಾರು ವಿವರ ನೀಡುವುದು)

## ಕೃಷಿ ಉತ್ಪನ್ನಗಳ ಸಾಗಾಣಿಕಾ ತೊಂದರೆ ಕುರಿತು

**ಶ್ರೀ ಯು. ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೩೯೧ (೪೪೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೃಷಿ ಉತ್ಪನ್ನಗಳನ್ನು ಮಾರುಕಟ್ಟೆಗೆ ಸಾಗಿಸಲು ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಇದರ ನಿವಾರಣೆಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಕೃಷಿ ಉತ್ಪನ್ನಗಳನ್ನು ಮಾರುಕಟ್ಟೆಗೆ ಸಾಗಿಸಲು ಸಾಧ್ಯವಾಗದೆ ಬೆಳೆ ನಾಶ ಮತ್ತು ಕೊಳೆಯುವಿಕೆಗಳನ್ನು ತಡೆಗಟ್ಟಲು ಸರ್ಕಾರದ ಮುಂದಿರುವ ಯೋಜನೆಗಳೇನು?

## ೨೦೧೫ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿಯಲ್ಲಿ ತಹಶೀಲ್ದಾರರಾಗಿ ಆಯ್ಕೆಯಾಗಿರುವ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೩೯೨ (೪೭೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ಪರೀಕ್ಷೆಯಲ್ಲಿ ತಹಶೀಲ್ದಾರರಾಗಿ ಆಯ್ಕೆ ಆಗಿ ನೇಮಕಾತಿ ಆದೇಶ ಹೊರಡಿಸಿದ ನಂತರವೂ ಎಷ್ಟು ಅಭ್ಯರ್ಥಿಗಳು ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುವುದಿಲ್ಲ ;

(ಆ) ಅಂತಹ ಅಭ್ಯರ್ಥಿಗಳ ಹೆಸರು ಮತ್ತು ಪ್ರವರ್ಗಗಳ ವಿವರಗಳನ್ನು ನೀಡುವುದು?

## ಮೀನುಗಾರಿಕೆ ಇಲಾಖೆಯ ಕಾಮಗಾರಿಗಳ ಬಗ್ಗೆ

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೩೯೩ (೩೮೦) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೩ ವರ್ಷಗಳಲ್ಲಿ ಮೀನುಗಾರಿಕೆ ಇಲಾಖೆಯಲ್ಲಿ ವಿವಿಧ ಯೋಜನೆಯಡಿ ಮಂಜೂರಾದ ಕಾಮಗಾರಿಗಳು ಎಷ್ಟು ಯಾವುವು; (ವಿವರವಾದ ಮಾಹಿತಿ ನೀಡುವುದು)

(ಆ) ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; ಸಂಪೂರ್ಣ ವಿವರ ನೀಡುವುದು ; (ಬಿಡುಗಡೆಯಾದ, ವೆಚ್ಚವಾದ ಹಾಗೂ ವ್ಯಪಗತಾವಾದ ಅನುದಾನದ ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಕಾಮಗಾರಿಗಳಲ್ಲಿ ಪೂರ್ಣಗೊಂಡ ಕಾಮಗಾರಿಗಳು, ಬಾಕಿ ಇರುವ ಕಾಮಗಾರಿಗಳು ಯಾವುವು ; (ವಿವರ ನೀಡುವುದು)

(ಈ) ಬಾಕಿ ಇದ್ದಲ್ಲಿ ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ?

## ಪ್ರವಾಹಕ್ಕೆ ಸಿಲುಕಿದ ಜನರಿಗೆ ಪರಿಹಾರ ಒದಗಿಸುವ ಬಗ್ಗೆ

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೩೯೪ (೩೮೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ವರ್ಷದಂತೆ ಈ ವರ್ಷವು ಭಾರಿ ಮಳೆ ಸಂಭವಿಸುತ್ತಿದ್ದು, ಈ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

(ಆ) ಈ ಬಗ್ಗೆ ಸರ್ಕಾರ ಯಾಕೆ ಮುಂಜಾಗ್ರತೆ ಕ್ರಮ ಕೈಗೊಂಡಿಲ್ಲ; ಪ್ರವಾಹದಿಂದ ಉಂಟಾದ ನಷ್ಟವೆಷ್ಟು ; (ರಾಜ್ಯವಾರು ವಿವರ ನೀಡುವುದು)

(ಇ) ಕಳೆದ ವರ್ಷ ಪ್ರವಾಹಕ್ಕೆ ನಲುಗಿ ಮನೆ ಮಠ ಕಳೆದುಕೊಂಡವರಿಗೆ ಸವಲತ್ತುಗಳು ದೊರಕಿದೆಯೇ ; ಹಾಗೂ ಇನ್ನೂ ಹಲವರಿಗೆ ಬರಬೇಕಾದದ್ದು ಸರಿಯಾಗಿ ತಲುಪಿಲ್ಲ ಎಂಬ ಆಪಾದನೆ ಇರುವುದು ನಿಜವೇ ; (ವಿವರ ನೀಡುವುದು)

(ಈ) ಹಾಗಿದ್ದಲ್ಲಿ, ಕಳೆದ ವರ್ಷ ಭಾರೀ ಪ್ರವಾಹಕ್ಕೆ ಸಿಲುಕಿದ ಜನರಿಗೆ ಕೊಟ್ಟ ಪರಿಹಾರದ ಮೊತ್ತವೆಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ರೈತರು ಬೆಳೆದಂತಹ ಬೆಳೆಗೆ ಸೂಕ್ತ ಬೆಲೆ ದೊರಕದಿರುವ ಬಗ್ಗೆ

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೩೯೫ (೩೭೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರೈತರು ಬೆಳೆದಂತ ಬೆಳೆಗೆ ಸೂಕ್ತ ಬೆಲೆ ದೊರಕದೇ, ದಲ್ಲಾಳಿಗಳ ಮೇಲುಗೈ ಆಗುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ರೈತರು ಬೆಳೆದ ಬೆಳೆಗೆ ನಿಶ್ಚಿತ ಬೆಲೆಯನ್ನು ಒದಗಿಸುವುದು ಸರ್ಕಾರದ ಜವಾಬ್ದಾರಿಯಲ್ಲವೇ ; ಹಾಗಿದ್ದರೂ, ದಲ್ಲಾಳಿಗಳ ಆಟದಿಂದ ರೈತರು ತಾವು ಬೆಳೆದ ಬೆಳೆಗೆ ನಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಮೀನು ಮರಿ ಪಾಲನ ಕೇಂದ್ರವನ್ನು ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೩೯೬ (೩೭೭) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಪುರಸ್ಕೃತ ಮತ್ಸ್ಯಸಂಪದ ಯೋಜನೆಯಡಿ ರಾಜ್ಯಕ್ಕೆ ನಿಗಧಿಯಾಗಿರುವ ಕಾರ್ಯಕ್ರಮಗಳು ಹಾಗೂ ಅನುದಾನದ ವಿವರ ನೀಡುವುದು ;

(ಆ) ಯೋಜನೆ ಅನುಷ್ಠಾನಕ್ಕೆ ರಾಜ್ಯ ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು ;

(ಇ) ಕಳೆದ ೩ ವರ್ಷಗಳಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಅನುಷ್ಠಾನ ಆಗಿರುವ ಕಾರ್ಯಕ್ರಮ, ವೆಚ್ಚದ ವಿವರ ನೀಡುವುದು ;

(ಈ) ಅಂಯ್ಯನಕೆರೆ ಮೀನು ಮರಿ ಪಾಲನ ಕೇಂದ್ರವನ್ನು ಅಭಿವೃದ್ಧಿಪಡಿಸಲು ಸರ್ಕಾರದಿಂದ ಕೈಗೊಳ್ಳಲಾದ ಕ್ರಮಗಳೇನು ? (ವಿವರ ನೀಡುವುದು)

## ಸಮುದಾಯ ಭವನ ನಿರ್ಮಾಣದ ಬಗ್ಗೆ

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೩೯೭ (೩೭೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಬರುವ ಒಟ್ಟು ಸಮುದಾಯ ಭವನಗಳೆಷ್ಟು ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಸಮುದಾಯ ಭವನಗಳಿಗೆ ಬಿಡುಗಡೆಗೊಳಿಸಲಾದ ಅನುದಾನದ ಮೊತ್ತವೆಷ್ಟು ; (ವಿವರ ನೀಡುವುದು)

(ಇ) ಸದರಿ ಸಮುದಾಯ ಭವನಗಳ ಕಾಮಗಾರಿಗಳು ಯಾವ ಹಂತದಲ್ಲಿದೆ ; ಪ್ರಗತಿಯಲ್ಲಿರುವ ಸಮುದಾಯ ಭವನಗಳಾವುವು; (ಕಾಮಗಾರಿಗಳ ವಿಳಂಬಕ್ಕೆ ಕಾರಣ ಸಹಿತ ವಿವರ ನೀಡುವುದು)

(ಈ) ಯಾವ ಕಾಲಮಿತಿಯೊಳಗೆ ಕಾಮಗಾರಿ ಪೂರ್ಣಗೊಳಿಸಲಾಗುವುದು ?

## ಮೊರಾರ್ಜಿ ವಸತಿ ಶಾಲೆಗಳಲ್ಲಿ ಕೆಲಸ ಮಾಡುತ್ತಿರುವ ಶಿಕ್ಷಕರಿಗೆ ವೇತನ ನೀಡುವ ಕುರಿತು

**ಡಾ॥ ಚಂದ್ರಶೇಖರ ಬಿ.ಪಾಟೀಲ್ (ಪದವೀಧರರ ಕ್ಷೇತ್ರ) :–**

೩೯೮ (೩೧೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಮೊರಾರ್ಜಿ ವಸತಿ ಶಾಲೆಗಳಲ್ಲಿ ಕೆಲಸ ಮಾಡುತ್ತಿರುವ ಶಿಕ್ಷಕರಿಗೆ ೩–೪ ತಿಂಗಳಿಂದ ವೇತನವಿಲ್ಲದೆ ತೊಂದರೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಅವರುಗಳಿಗೆ ವೇತನವನ್ನು ಬಿಡುಗಡೆ ಮಾಡಲಾಗುವುದು ?

## ಮೊರಾರ್ಜಿ ವಸತಿ ಶಾಲೆಗಳಲ್ಲಿ ಕೆಲಸ ಮಾಡುತ್ತಿರುವ ಬೋಧಕರ ಜೀವನ ಅತಂತ್ರವಾಗಿರುವ ಕುರಿತು

**ಡಾ॥ ಚಂದ್ರಶೇಖರ ಬಿ.ಪಾಟೀಲ್ (ಪದವೀಧರರ ಕ್ಷೇತ್ರ) :–**

೩೯೯ (೩೧೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ರಾಜ್ಯದಲ್ಲಿ ಕೋರ್ಟ್ ಆದೇಶದ ಮೇಲೆ ಮೊರಾರ್ಜಿ ವಸತಿ ಶಾಲೆಗಳಲ್ಲಿ ಕೆಲಸ ಮಾಡುತ್ತಿರುವ ಬೋಧಕರ ಜೀವನ ಅತಂತ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ಯಾವ ಕಾಲಮಿತಿಯಲ್ಲಿ ಬಗೆಹರಿಸಲಾಗುವುದು ?

## ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚನ್ನಮ್ಮ, ಡಾ: ಬಿ.ಆರ್.ಅಂಬೇಡ್ಕರ್, ಇಂದಿರಾ ಗಾಂಧಿ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಬಡ್ತಿ ನೀಡುವ ಕುರಿತು

**ಡಾ॥ ಚಂದ್ರಶೇಖರ ಬಿ.ಪಾಟೀಲ್ (ಪದವೀಧರರ ಕ್ಷೇತ್ರ) :-**

೪೦೦ (೩೪೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:-

ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರೌಢ ಶಾಲಾ ಶಿಕ್ಷಕರಿಗೆ ನಿಯಮಾನುಸಾರ ಕಾಲಕಾಲಕ್ಕೆ ಬಡ್ತಿ ನೀಡಲಾಗುತ್ತಿದ್ದು, ಸರ್ಕಾರದ ಅಂಗಸಂಸ್ಥೆಯಾದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ ನಡೆಯುತ್ತಿರುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚನ್ನಮ್ಮ ಡಾ॥ ಬಿ.ಆರ್.ಅಂಬೇಡ್ಕರ್, ಇಂದಿರಾ ಗಾಂಧಿ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಬಡ್ತಿ ನೀಡದಿರಲು ಕಾರಣವೇನು ?

## ತಾಲ್ಲೂಕು ಕಛೇರಿಯಲ್ಲಿ ಬಾಕಿ ಉಳಿದಿರುವ ದುರಸ್ತಿ ಪ್ರಕರಣದ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) :-**

೪೦೧ (೩೨೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೋಲಾರ ಜಿಲ್ಲೆಯ ಎಲ್ಲಾ ತಾಲ್ಲೂಕು ಕಛೇರಿಗಳಲ್ಲಿ ದುರಸ್ತಿ ಮಾಡಲು ಬಾಕಿ ಉಳಿದಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ದುರಸ್ಥಿ ಮಾಡಲು ಬಂದ ಅರ್ಜಿಗಳನ್ನು ಮೂಲ ದಾಖಲೆಗಳಿಲ್ಲವೆಂದು ಹಿಂಬರಹ ನೀಡುತ್ತಿರುವುದು ನಿಜವೇ;

(ಇ) ಹಾಗಿದ್ದಲ್ಲಿ, ತಾಲ್ಲೂಕು ರೆಕಾರ್ಡ್ ರೂಂಗಳಲ್ಲಿ ಮೂಲ ದಾಖಲೆಗಳು ಲಭ್ಯವಿರುವುದಿಲ್ಲವೇ ; ಹಾಗಿದ್ದಲ್ಲಿ, ಮೂಲ ದಾಖಲೆಗಳು ಇಲ್ಲದೆ ಇರಲು ಕಾರಣಗಳೇನು ;

(ಈ) ತಾಲ್ಲೂಕು ರೆಕಾರ್ಡ್ ರೂಂಗಳಲ್ಲಿ ಮೂಲ ದಾಖಲೆಗಳು ಲಭ್ಯವಿಲ್ಲದಿದ್ದಾಗ ದುರಸ್ತಿ ಪ್ರಕರಣಗಳನ್ನು ಇತ್ಯರ್ಥಪಡಿಸಲು (ವಿಲೆ) ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು ;

(ಉ) ದಾಖಲೆಗಳ ಕೊಠಡಿಯಲ್ಲಿ ಬಹುತೇಕ ಮೂಲ ದಾಖಲೆಗಳು ನಾಪತ್ತೆಯಾಗಲು ಕಾರಣಗಳೇನು ;

(ಊ) ಈ ಮೂಲ ದಾಖಲೆಗಳು ನಾಪತ್ತೆಯಾಗಲು ಕಾರಣಕರ್ತರಾದ ಅಧಿಕಾರಿ/ಸಿಬ್ಬಂದಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ವೃದ್ಧಾಪ್ಯ, ವಿಧವಾ, ಅಂಗವಿಕಲ ಪಿಂಚಣಿ ಪಾವತಿಸದಿರುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೦೨ (೪೦೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರದ ವತಿಯಿಂದ ಯಾವ ಯಾವ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಪಿಂಚಣಿಯನ್ನು ಪಾವತಿ ಮಾಡಲಾಗುತ್ತಿದೆ;

(ಆ) ಕಳೆದ ಎಂಟು ತಿಂಗಳಿನಿಂದ ವೃದ್ಧಾಪ್ಯ, ವಿಧವಾ, ಅಂಗವಿಕಲ ವೇತನ ಸೇರಿದಂತೆ ಅರ್ಹ ಫಲಾನುಭವಿಗಳಿಗೆ ಪಿಂಚಣಿ

ಪಾವತಿಯಾಗುತ್ತಿಲ್ಲವೆಂಬ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಪಿಂಚಣಿಯನ್ನೇ ನಂಬಿಕೊಂಡು ಜೀವನ ನಡೆಸುತ್ತಿರುವ ಅರ್ಹ ಫಲಾನುಭವಿಗಳಿಗೆ ಯಾವಾಗ ಪಿಂಚಣಿಯನ್ನು ಪಾವತಿ ಮಾಡಲಾಗುವುದು ?

## ರಾಜ್ಯದಲ್ಲಿ ಯೂರಿಯಾ ರಸಗೊಬ್ಬರ ಕೊರತೆ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೦೩ (೩೧೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಯೂರಿಯಾ ರಸಗೊಬ್ಬರದ ಕೊರತೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಯೂರಿಯಾ ರಸಗೊಬ್ಬರಕ್ಕೆ ಇರುವ ಬೇಡಿಕೆ, ಪೂರೈಕೆ ಹಾಗೂ ವ್ಯಾಪಾರಿಗಳು ಮಾರುಕಟ್ಟೆ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡದಂತೆ ತಡೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರಗಳನ್ನು ಒದಗಿಸುವುದು)

## ಬಗರ್ ಹುಕುಂ ಸಮಿತಿಯ ಕಾರ್ಯ ನಿರ್ವಹಣೆ ಬಗ್ಗೆ

**ಶ್ರೀ ಕೆ.ವಿ.ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು):–**

೪೦೪ (೪೧೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆ, ಯಲಹಂಕ ತಾಲ್ಲೂಕಿನಲ್ಲಿ ಬಗರ್ ಹುಕುಂ ಅರ್ಜಿಗಳ ಬಗ್ಗೆ, ಮೇಲ್ಮನವಿ ಸಲ್ಲಿಸಿ ನ್ಯಾಯಾಲಯಗಳಲ್ಲಿ ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ಈ ಪ್ರಕರಣಗಳಲ್ಲಿ ನ್ಯಾಯಾಲಯವು ತಾಲ್ಲೂಕು ಮಂಜೂರಾತಿ ಆದೇಶವನ್ನು ರದ್ದುಗೊಳಿಸಿ ಪುನರ್ ಪರಿಶೀಲನೆಗಾಗಿ ಸಮಿತಿಗೆ ವಾಪಸ್ಸು ಕಳುಹಿಸಿದಲ್ಲಿ ಸೂಕ್ತ ಕ್ರಮ ತೆಗೆದುಕೊಳ್ಳಲು ಮಂಜೂರಾತಿ ಸಮಿತಿ ಕಾರ್ಯನಿರ್ವಹಿಸುತ್ತಿದೆಯೇ ;

(ಇ) ಬಗರ್ ಹುಕುಂ ಸಮಿತಿ ಕಾರ್ಯನಿರ್ವಹಿಸುತ್ತಿಲ್ಲದ ಪಕ್ಷದಲ್ಲಿ ಅಂತಹ ಪ್ರಕರಣಗಳನ್ನು ಇತ್ಯರ್ಥಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು ?

## ಯಲಹಂಕ ತಾಲ್ಲೂಕಿನ ಬಗರ್ ಹುಕುಂ ಅರ್ಜಿಗಳ ವಿಲೇವಾರಿ ಬಗ್ಗೆ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು):–**

೪೦೫ (೪೦೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಯ ಯಲಹಂಕ ತಾಲ್ಲೂಕಿನಲ್ಲಿ ಬಗರ್ ಹುಕುಂ ಸಾಗುವಳಿ ಜಮೀನು ಮಂಜೂರಾತಿಗಾಗಿ ಬಾಕಿಯಿರುವ ಅರ್ಜಿಗಳೆಷ್ಟು ;

(ಆ) ಬೆಂಗಳೂರು ನಗರ ಜಿಲ್ಲೆಯ ಯಲಹಂಕ ತಾಲ್ಲೂಕಿನಲ್ಲಿ ಬಗರ್ ಹುಕುಂ ಸಮಿತಿ ಕಾರ್ಯನಿರ್ವಹಿಸುತ್ತಿದೆಯೇ ;

(ಇ) ಭೂ ಮಂಜೂರಾತಿ ಸಮಿತಿ ಇಲ್ಲದ ಪಕ್ಷದಲ್ಲಿ ಬಾಕಿಯಿರುವ ಅರ್ಜಿಗಳ (ಫಾರಂ–ನಂ. ೫೩) ಪರಿಸ್ಥಿತಿಯೇನು ;

(ಈ) ಬಾಕಿಯಿರುವ ಅರ್ಜಿಗಳನ್ನು ವಿಲೇ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ವಸತಿ ನಿಗಮದಿಂದ ಆಗುತ್ತಿರುವ ತೊಂದರೆ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೬ (೪೦೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಆಶ್ರಯ, ಅಂಬೇಡ್ಕರ್, ಬಸವ ಯೋಜನೆಗಳಲ್ಲಿ ಮಂಜೂರಾದ ಮನೆಗಳಿಗೆ ರಾಜೀವ್ ಗಾಂಧಿ ವಸತಿ ನಿಗಮದಲ್ಲಿ ಅರ್ಹ ಫಲಾನುಭವಿಗಳಿಗೆ ಸಕಾಲದಲ್ಲಿ ಹಣ ಬಿಡುಗಡೆಯಾಗದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮೇಲ್ಕಂಡ ಜಿಲ್ಲೆಗಳಲ್ಲಿ ಇಂತಹ ಸಮಸ್ಯೆಯಿರುವ ತಾಲ್ಲೂಕು ಹಾಗೂ ಫಲಾನುಭವಿಗಳ ಸಂಪೂರ್ಣ ವಿವರ ನೀಡುವುದು ;

(ಇ) ತೊಂದರೆ ನಿವಾರಣೆ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗೆ SEP, TSP ಯೋಜನೆಯಲ್ಲಿ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೭ (೩೯೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಮಾಜ ಕಲ್ಯಾಣ ಮತ್ತು ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ೨೦೧೯–೨೦ರಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ಸಮಾಜ ಕಲ್ಯಾಣ ಇಲಾಖೆಯಿಂದ SEP, TSP

ಯೋಜನೆಯಡಿ ಬಿಡುಗಡೆಯಾದ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಮೇಲ್ಕಂಡ ಜಿಲ್ಲೆಗಳಲ್ಲಿ ಯಾವ ಯಾವ ತಾಲ್ಲೂಕಿಗೆ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ವಿವರ ನೀಡುವುದು)

(ಇ) ಬಿಡುಗಡೆಯಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಕೃಷಿ ಭೂಮಿಯಲ್ಲಿ ಬೇಸಾಯ ಸ್ಥಗಿತಗೊಂಡಿರುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೦೮ (೩೧೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಎಕರೆ ಕೃಷಿ ಭೂಮಿಗಳಲ್ಲಿ ಬೇಸಾಯ ಸ್ಥಗಿತಗೊಂಡಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ರೈತರು ವ್ಯವಸಾಯ ಮಾಡುವುದನ್ನು ನಿಲ್ಲಿಸಿರುತ್ತಾರೆ ; ಇದಕ್ಕೆ ಕಾರಣವೇನು ; ವ್ಯವಸಾಯ ಸ್ಥಗಿತಗೊಳಿಸಿದ ರೈತರು ಪುನಃ ವ್ಯವಸಾಯ ಆರಂಭಿಸುವಂತೆ ಮಾಡಲು ಸರ್ಕಾರ ಯಾವ ರೀತಿಯ ಪ್ರೋತ್ಸಾಹ ನೀಡುತ್ತಿದೆ ; (ವಿವರ ನೀಡುವುದು)

(ಇ) ವಿದ್ಯಾವಂತ ಯುವ ಜನತೆ ಹೆಚ್ಚು ಹೆಚ್ಚಾಗಿ ಕೃಷಿಯತ್ತ ಹೊರಳುವಂತೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಂಡವರ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೦೯ (೩೧೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಕಳೆದ ೩ ವರ್ಷಗಳಲ್ಲಿ ವಿಲೀನಗೊಂಡ ಸರ್ಕಾರಿ ನೌಕರರ ಸಂಖ್ಯೆ ಎಷ್ಟು; ಅವರು ಯಾವ ಇಲಾಖೆಯಿಂದ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಂಡಿರುತ್ತಾರೆ ;

(ಆ) ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಕಳೆದ ೩ ವರ್ಷಗಳಲ್ಲಿ ವಿಲೀನಗೊಂಡ ಸರ್ಕಾರಿ ನೌಕರರ ಹೆಸರು ಮತ್ತು ವಿಳಾಸದೊಂದಿಗೆ ಮಾಹಿತಿ ನೀಡುವುದು ; ಅವರು ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಳ್ಳುವ ಸಮಯದಲ್ಲಿ ಅವರ ಮತ್ತು ಕುಟುಂಬದವರ ಹೆಸರಿನಲ್ಲಿರುವ ಸ್ಥಿರಾಸ್ತಿ ಮತ್ತು ಚರಾಸ್ತಿಯ ಒಟ್ಟು ಮೌಲ್ಯ ಎಷ್ಟು ;

(ಇ) ಪ್ರಸ್ತುತ ವಿಲೀನಗೊಂಡವರ ಹೆಸರಿನಲ್ಲಿ ಮತ್ತು ಅವರ ಅವಲಂಬಿತರ ಹೆಸರಿನಲ್ಲಿ ಇರುವ ಸ್ಥಿರಾಸ್ತಿ ಮತ್ತು ಚರಾಸ್ತಿಯ ಒಟ್ಟು ಮೌಲ್ಯ ಎಷ್ಟು ; ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಳ್ಳುವ ಮುನ್ನ ಮತ್ತು ವಿಲೀನದ ನಂತರ ಅವರ ಸ್ಥಿರಾಸ್ತಿ ಮತ್ತು ಚರಾಸ್ತಿಯಲ್ಲಿ ಎಷ್ಟು ಪ್ರಮಾಣದ ಹೆಚ್ಚಳವಾಗಿದೆ ;

(ಈ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಕಳೆದ ೩ ವರ್ಷಗಳಲ್ಲಿ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಭ್ರಷ್ಟಾಚಾರದ ಆರೋಪದಲ್ಲಿ

ಅಮಾನತ್ತುಗೊಂಡವರ ಸಂಖ್ಯೆ ಎಷ್ಟು ; ಇವರ ಮೇಲೆ ಇಲಾಖೆ ಯಾವ ಕ್ರಮಕೈಗೊಂಡಿದೆ ?

## ಮತಾಂತರಗೊಂಡ SC/ST ಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೧೦ (೩೧೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮತಾಂತರಗೊಂಡ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮತಾಂತರಗೊಂಡ ಬಳಿಕವೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ ;

(ಆ) ರಾಜ್ಯದಲ್ಲಿ ಮತಾಂತರ ನಿಷೇಧ ಕಾನೂನು ಜಾರಿಗೆ ತರುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ; ಯಾವಾಗ ಮತಾಂತರ ನಿಷೇಧ ಕಾನೂನನ್ನು ಜಾರಿಗೆ ತರಲಾಗುವುದು ;

(ಇ) ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ಮತಾಂತರಗೊಂಡವರ ಸಂಖ್ಯೆ ಎಷ್ಟು ; ಮತಾಂತರಗೊಂಡವರು ಯಾವ ಧರ್ಮದಿಂದ ಯಾವ ಧರ್ಮಕ್ಕೆ ಮತಾಂತರಗೊಂಡಿರುತ್ತಾರೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ನಗರ ಪ್ರದೇಶದಲ್ಲಿ ವಸತಿ ಯೋಜನೆಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೧೧ (೩೪೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಸರ್ಕಾರದ ವತಿಯಿಂದ ನಗರ ಪ್ರದೇಶಗಳಲ್ಲಿ ಕೈಗೊಂಡ ವಸತಿ ಯೋಜನೆಗಳ ಪ್ರಮಾಣವೆಷ್ಟು ; ಈ ವಸತಿ ಯೋಜನೆಗಳ ಮೂಲಕ ಎಷ್ಟು ಮನೆಗಳನ್ನು ವಸತಿ ರಹಿತರಿಗಾಗಿ ನಿರ್ಮಿಸಲು ಯೋಜಿಸಲಾಗಿತ್ತು ; (ಯೋಜನೆವಾರು, ನಗರವಾರು ವಿವರ ನೀಡುವುದು)

(ಆ) ರಾಜ್ಯ ಮತ್ತು ಕೇಂದ್ರ ಸರ್ಕಾರದ ಎಷ್ಟು ವಸತಿ ಯೋಜನೆಗಳನ್ನು ನಗರ ಪ್ರದೇಶದಲ್ಲಿ ಜಾರಿಗೊಳಿಸಲಾಗುತ್ತಿದೆಯೇ ; ಈ ವಸತಿ ಯೋಜನೆಗಳ ಮೂಲಕ ನಿರ್ಮಿಸಲಾಗುತ್ತಿರುವ ಮನೆಗಳ ಸಂಖ್ಯೆ ಎಷ್ಟು ; ಇದರಲ್ಲಿ ಪೂರ್ಣಗೊಂಡ ವಸತಿ ಯೋಜನೆಗಳ ಸಂಖ್ಯೆ ಎಷ್ಟು ;

(ಇ) ಕಳೆದ ೩ ವರ್ಷಗಳಲ್ಲಿ ನಗರ ಪ್ರದೇಶದ ಬಡವರಿಗೆ ವಿವಿಧ ವಸತಿ ಯೋಜನೆಗಳ ಅಡಿಯಲ್ಲಿ ವಿತರಿಸಲಾದ ಮನೆಗಳ ಸಂಖ್ಯೆ ಎಷ್ಟು ? (ನಗರ ಪ್ರದೇಶವಾರು ವಿವರ ನೀಡುವುದು)

## ದೇವಸ್ಥಾನಗಳ ಭೂಮಿಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೧೨ (೩೧೫) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭೂ ಸುಧಾರಣಾ ಕಾಯ್ದೆಯ ಅನ್ವಯ ಉಳುವವನೇ ಹೊಲದೊಡೆಯ ಎಂಬ ಕಾರಣಕ್ಕಾಗಿ ರಾಜ್ಯದ ಮುಜರಾಯಿ ಇಲಾಖೆಯ ದೇವಸ್ಥಾನಗಳಿಗೆ ಸೇರಿದ ಎಷ್ಟು ಎಕರೆ ಭೂಮಿಯನ್ನು ಇದುವರೆಗೆ ಪರಭಾರೆ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಉಳುವವನೇ ಹೊಲದೊಡೆಯ ಎಂಬ ಕಾರಣಕ್ಕಾಗಿ ಕೃಷಿ ಚಟುವಟಿಕೆಗಳನ್ನು ಉತ್ತೇಜಿಸುವ ಸಲುವಾಗಿ ದೇವಸ್ಥಾನಗಳ ಉಂಬಳಿ ಭೂಮಿಯನ್ನು ಪರಭಾರೆ ಮಾಡಿರುವ ಎಷ್ಟು ಎಕರೆ ಭೂ ಪ್ರದೇಶದಲ್ಲಿ ಇಂದಿಗೂ ಕೃಷಿ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ ;

(ಇ) ದೇವಸ್ಥಾನಗಳ ಉಂಬಳಿ ಭೂಮಿಯನ್ನು ಭೂ ಸುಧಾರಣಾ ಕಾಯ್ದೆಯ ಅನ್ವಯ ಪಡೆದುಕೊಂಡು ಕೃಷಿ ಚಟುವಟಿಕೆ ನಡೆಸದೆ, ಸದರಿ ಭೂಮಿಯನ್ನು ಕೃಷಿಯೇತರ ಉದ್ದೇಶಗಳಿಗಾಗಿ ಎಷ್ಟು ಎಕರೆ ಭೂಮಿಯನ್ನು ಪರಿವರ್ತಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಸದರಿ ಭೂಮಿಯಲ್ಲಿ ಕೃಷಿ ಚಟುವಟಿಕೆ ನಡೆಸದೆ ಮಾರಾಟ ಮಾಡಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಉ) ಕಾಯ್ದೆಯನ್ನು ಉಲ್ಲಂಘಿಸಿರುವವರ ವಿರುದ್ಧ ಭೂಮಿಯನ್ನು ಹಿಂಪಡೆಯಲು ಸರ್ಕಾರ ಕೈಗೊಂಡ ಕ್ರಮವೇನು ?

## ಬೆಟ್ಟದಪುರ–ಅಂಬಲಾರೆ ರಸ್ತೆಯ ದುರಸ್ಥಿ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೧೩ (೩೫೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಿರಿಯಾಪಟ್ಟಣ ತಾಲ್ಲೂಕು, ಬೆಟ್ಟದಪುರ ವ್ಯಾಪ್ತಿಯ ರಾಜ್ಯ ಹೆದ್ದಾರಿಯಿಂದ, ಚಪ್ಪರದಹಳ್ಳಿ, ಹಾರನಹಳ್ಳಿ, ಅಂಬಲಾರೆಗೆ ಸಂಪರ್ಕ ಕಲ್ಪಿಸುವ ರಸ್ತೆಯ ಪೂರ್ತಿ ಹದಗೆಟ್ಟಿದ್ದು ವಾಹನ

ಸಂಚಾರಕ್ಕೆ ಹಾಗೂ ಸಾರ್ವಜನಿಕರಿಗೆ ಹೆಚ್ಚು ಅನಾನುಕೂಲ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೂಡಲೇ ಈ ರಸ್ತೆಯನ್ನು ದುರಸ್ಥಿ ಮಾಡಿ ವಾಹನಗಳ ಸುಗಮ ಸಂಚಾರಕ್ಕೆ ಮತ್ತು ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿಕೊಡಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಮೈಸೂರು–ಕುಶಾಲನಗರ ಚತುಷ್ಪಥ ರಸ್ತೆಯ ನಿರ್ಮಾಣ

**ಶ್ರೀ ಎಸ್. ನಾಗರಾಜ್ (ಸಂದೇಶ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೧೪ (೩೫೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು–ಕುಶಾಲನಗರ ರಸ್ತೆಯನ್ನು ಚತುಷ್ಪಥ ರಸ್ತೆಯನ್ನಾಗಿ ಅಭಿವೃದ್ಧಿಪಡಿಸಲು ಸರ್ಕಾರ ಕ್ರಮ ತೆಗೆದುಕೊಳ್ಳಲಾಗಿದೆಯೇ ; ಈ ಬಗ್ಗೆ ಸರ್ವೇ ಕಾರ್ಯ ಪೂರ್ಣಗೊಂಡಿದೆಯೇ ; ಈ ಯೋಜನೆಯ ಅಂದಾಜು ವೆಚ್ಚ ಎಷ್ಟು ; ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗುವುದು ;

(ಆ) ಹುಣಸೂರು ನಗರದ ಮಧ್ಯೆ ಹಾದು ಹೋಗುವ ಈ ಹೆದ್ದಾರಿಯು ಹುಣಸೂರು ನಗರ ವ್ಯಾಪ್ತಿಯಲ್ಲಿ ದುಸ್ತಿತಿಯಲ್ಲಿದ್ದು, ಈ ರಸ್ತೆಯ ದುರಸ್ಥಿ ಮತ್ತು ಅಭಿವೃದ್ಧಿಗೆ ತೆಗೆದುಕೊಳ್ಳಲಾದ ಕ್ರಮಗಳೇನು ?

## ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಯಾದ ಮನೆಗಳು

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೧೫ (೩೯೬) ಮಾನ್ಯ ವಸತಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

೨೦೨೦-೨೧ ನೇ ಸಾಲಿನಲ್ಲಿ ರಾಜ್ಯದಲ್ಲಿ ಗ್ರಾಮ ಪಂಚಾಯತ್‌ವಾರು ವಸತಿ ಯೋಜನೆಯಡಿ ಬಿಡುಗಡೆಯಾದ ಮನೆಗಳೆಷ್ಟು ? (ಎಲ್ಲಾ ವಸತಿ ಯೋಜನೆಗಳ ಮಾಹಿತಿ ನೀಡುವುದು)

## ವಿಜಯಪುರದಲ್ಲಿ ಜಿಲ್ಲಾ ಕಾರ್ಯಾಲಯಗಳ ಸಂಕೀರ್ಣವನ್ನು ನಿರ್ಮಾಣ ಮಾಡುವ ಕುರಿತು

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೧೬ (೩೯೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಜಿಲ್ಲೆಯಲ್ಲಿ ರಿ.ಸ.ನಂ. ೩೧೩ ಮತ್ತು ೩೧೪ರಲ್ಲಿ ಜಿಲ್ಲಾ ಕಾರ್ಯಾಲಯಗಳ ಸಂಕೀರ್ಣವನ್ನು ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಕಾಮಗಾರಿಗೆ ಅನುದಾನದ ಕೊರತೆ ಇದೆಯೇ ;

(ಇ) ಸದರಿ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆಯೇ ; ಅನುಮೋದನೆ ನೀಡದಿದ್ದಲ್ಲಿ, ಕಾರಣವೇನು ; (ವಿವರ ನೀಡುವುದು)

(ಈ) ಕಾಮಗಾರಿಯ ಅಂದಾಜು ಮೊತ್ತ ಎಷ್ಟು ;

(ಉ) ಪ್ರಸ್ತುತ ಕಾಮಗಾರಿಯು ಯಾವ ಹಂತದಲ್ಲಿದೆ ? (ಮಾಹಿತಿ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ. 045/450 ಪ್ರತಿಗಳು/16-09-2020